ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಸಂಪುಟ: 22, ಸಂಚಿಕೆ: 66, ಪುಟಗಳು: 8, ಸೋಮವಾರ, 16 ಡಿಸೆಂಬರ್ 2024 RNI NO. KARKAN/2002/08054
epaper: www.sanjemugilu.com
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ವೇಣು ಸಾರಥ್ಯದಲ್ಲಿ...



## ದಶಪ್ರಮತಿ ಮುದ್ರಣಾಲಯ
dp
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines



### ಸುಭಾಷಿತ

ಜಗತ್ತಿನ ಅತ್ಯುತ್ತಮ ಮತ್ತು ಸುಂದರ ಸಂಗತಿ ಎಂದರೆ ಪ್ರೀತಿ. ಅದನ್ನು ನೋಡುವುದಕ್ಕೂ, ಸ್ಪರ್ಶಿಸುವುದಕ್ಕೂ ಸಾಧ್ಯವಿಲ್ಲ. ಆದರೆ ಅದನ್ನು ನಾವು ಹೃದಯದಲ್ಲಿ ಅನುಭವಿಸಬಹುದು.

### ಪಂಚಾಂಗ

(ಸೋಮವಾರ 16, ಡಿಸೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಹೇಮಂತ ಋತು
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ
- ತಿಥಿ: ಪಾಡ್ಯ • ನಕ್ಷತ್ರ: ಆರಿದ್ರಾ,
- ರಾಹುಕಾಲ: 8:01 ರಿಂದ 9:27
- ಗುಳಿಕಕಾಲ: 1:44 ರಿಂದ 3:10
- ಯಮಗಂಡಕಾಲ: 10:53 ರಿಂದ 12:19

## ಸಂಕ್ಷಿಪ್ತ ಸುದ್ದಿ

### ಸರ್ಕಾರಿ ಆಸ್ಪತ್ರೆಗೂ ಬಂತು ಐವಿಎಫ್




» ಸದ್ಯದಲ್ಲಿಯೇ ಕೆಸಿಜಿ ಆಸ್ಪತ್ರೆಯಲ್ಲಿ ಆರಂಭವಾಗಲಿದೆ ಚಿಕಿತ್ಸೆ

**ಬೆಂಗಳೂರು:** ಇತ್ತೀಚಿನ ದಿನಗಳಲ್ಲಿ ದಂಪತಿಗಳಿಗೆ ನಾನಾ ಕಾರಣಗಳಿಂದ ಮಕ್ಕಳಾಗುತ್ತಿಲ್ಲ. ಶೇ 20 ರಿಂದ 25 ರಷ್ಟು ಮಹಿಳೆಯರು ಗರ್ಭಧಾರಣೆ ಸಮಸ್ಯೆ ಎದುರಿಸುತ್ತಿದ್ದಾರೆ. ಅದರಲ್ಲೂ ತಡವಾಗಿ ಮದುವೆ, ಜೀವನದಲ್ಲಿನ ಜವಾಬ್ದಾರಿಗಳು, ಆರ್ಥಿಕತೆ, ಗಂಡ ಹೆಂಡತಿಯರ ನಡುವಿನ ಕೆಲಸದ ಒತ್ತಡ ಸೇರಿದಂತೆ ನಾನಾ ಕಾರಣಗಳಿಂದ ಹೆಚ್ಚಿನ ಪೋಷಕರು ಸಂತಾನ ಪಡೆಯುವಲ್ಲಿ ಸಮಸ್ಯೆ ಎದುರಿಸುತ್ತಿದ್ದಾರೆ. ಮಕ್ಕಳಗಾದ ಸಾಕಷ್ಟು ಪೋಷಕರು ಐವಿಎಫ್ ನಂತಹ ಚಿಕಿತ್ಸಾ ವಿಧಾನದ ಮೊರೆ ಹೋಗುತ್ತಿದ್ದಾರೆ. ಆದರೆ, ಇದಕ್ಕೆ ಖಾಸಗಿ ಆಸ್ಪತ್ರೆಗಳಲ್ಲಿ ಲಕ್ಷಾಂತರ ರೂಪಾಯಿ ಖರ್ಚು ಮಾಡಬೇಕಿದ್ದು ಬಡ ಹಾಗೂ ಮಧ್ಯಮ ವರ್ಗದವರಿಗೆ ಈ ಚಿಕಿತ್ಸೆ ಕೈಗೆಟುಕದ್ದಾಗಿದೆ. ದಂಪತಿಗಳು ಇದೇ ಕಾರಣಕ್ಕೆ ಪುಟ 2

### ಕಪಿಲ್ ಓರ್ವ ದುರಹಂಕಾರಿ



» ಶಕ್ತಿಮಾನ್ ಮುಖೇಶ್ ಖನ್ನಾ ನೇರ ಮಾತು

**ನವದೆಹಲಿ:** ಮುಖೇಶ್ ಖನ್ನಾ ಅವರು ಆ ಕಾಲದ ಅತ್ಯುತ್ತಮ ನಟರಲ್ಲಿ ಒಬ್ಬರು. ಇಂದಿಗೂ ಅವರನ್ನು 'ಶಕ್ತಿಮಾನ್' ಎಂದೇ ಕರೆಯಲಾಗುತ್ತದೆ. ಅವರು ತಮ್ಮ ಶಕ್ತಿಯುತ ನಟನೆ ಮತ್ತು ಅವರ ನಿಷ್ಠುರತೆಯಿಂದ ಯಾವಾಗಲೂ ಸುದ್ದಿಯಲ್ಲುದ್ದಾರೆ. ಅವರು ಯಾವುದೇ ವಿಷಯದ ಬಗ್ಗೆ ತಮ್ಮ ಅಭಿಪ್ರಾಯವನ್ನು ನಿರ್ಭಯವಾಗಿ ವ್ಯಕ್ತಪಡಿಸುತ್ತಾರೆ. ಅಂಥದ್ದೊಂದು ವಿಷಯ ಈಗ ಮುನ್ನೆಲೆಗೆ ಬಂದಿದ್ದು, ಈ ಕುರಿತು ಆಕ್ರೋಶದಿಂದ ಕಾಮೆಂಟ್ ಮಾಡಿದ್ದಾರೆ.

ಕಪಿಲ್ ಶರ್ಮಾ ಅವರ ಕಾರ್ಯಕ್ರಮದ ಬಗ್ಗೆ ಮುಖೇಶ್ ಖನ್ನಾ ಮಾತನಾಡಿದ್ದಾರೆ. ಕಪಿಲ್ ಶರ್ಮಾ ಅವರ ಕಾರ್ಯಕ್ರಮವನ್ನು ಅಶ್ಲೀಲ ಎಂದು ಕರೆಯುವ ಮೂಲಕ ಮುಖೇಶ್ ಖನ್ನಾ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ. ಪುಟ 2

ಮಹಾರಾಷ್ಟ್ರ ಸಂಪುಟ ವಿಸ್ತರಣೆ

## ಬಾವಾಂಕುಲೆ, ಮುಂಡೆ ಸೇರಿ 39 ಸಚಿವರ ಪ್ರಮಾಣವಚನ

**ಮಹಾರಾಷ್ಟ್ರ:** ಮಹಾರಾಷ್ಟ್ರದಲ್ಲಿ ದೇವೇಂದ್ರ ಫಡ್ನವೀಸ್ ಸಚಿವ ಸಂಪುಟದ ಮೊದಲ ವಿಸ್ತರಣೆ ನಡೆದಿದೆ. ಇದರಲ್ಲಿ ರಾಜ್ಯ ಬಿಜೆಪಿ ಮುಖ್ಯಸ್ಥ ಚಂದ್ರಶೇಖರ ಬಾವಾಂಕುಲೆ ಸೇರಿ ಮಹಾಯುತಿಯ ಒಟ್ಟು 39 ಮುಖಂಡರು ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು. ನಾಗ್ಪುರದ ರಾಜಭವನದಲ್ಲಿ ಈ ಪ್ರಮಾಣ ವಚನ ಕಾರ್ಯಕ್ರಮ ನಡೆಯಿತು. ರಾಜ್ಯಪಾಲ ಸಿಪಿ ರಾಧಾಕೃಷ್ಣನ್ ಅವರು ಎಲ್ಲಾ 39 ಶಾಸಕರಿಗೆ ಪ್ರಮಾಣ ವಚನ ಬೋಧಿಸಿದರು.

ಮಹಾರಾಷ್ಟ್ರದ ಬಿಜೆಪಿ ಮುಖ್ಯಸ್ಥ ಚಂದ್ರಶೇಖರ ಬಾವಾಂಕುಲೆ ಕೂಡ ಫಡ್ನವಿಸ್ ಸರ್ಕಾರದಲ್ಲಿ ಸಚಿವರಾಗಿದ್ದಾರೆ. ಇದೇ ವೇಳೆ ವಿಧಾನ ಪರಿಷತ್ ಸದಸ್ಯ ಪಂಕಜ್ ಮುಂಡೆ ಅವರಿಗೂ ಸರ್ಕಾರದಲ್ಲಿ ಸ್ಥಾನ ನೀಡಲಾಗಿದೆ. ಹಿಂದಿನ ಸರ್ಕಾರಗಳಲ್ಲಿ ಸಚಿವರಾಗಿದ್ದ ಇಂತಹ ಅನೇಕ ಮುಖಗಳಿದ್ದಾರೆ.



ದೇವೇಂದ್ರ ಫಡ್ನವಿಸ್ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಸುಮಾರು 10 ದಿನಗಳ ನಂತರ ಪ್ರಮಾಣ ವಚನ ಸಮಾರಂಭ ನಡೆಯಿತು.

ಮಹಾರಾಷ್ಟ್ರದ ಸಚಿವರಾಗಿ ಮಾಧುರಿ ಮಿಸಾಲ್, ಆಕಾಶ್ ಫುಂಡ್ಕರ್, ಬಿಜೆಪಿಯಿಂದ ಪಂಕಜ್ ಭೋಯರ್, ಶಿವಸೇನೆಯಿಂದ ಪ್ರಕಾಶ್ ಅಬಿತ್ಕರ್, ಆಶಿಶ್ ಜೈಸ್ವಾಲ್ ಮತ್ತು ಎನ್‌ಸಿಪಿಯಿಂದ ಬಾಬಾಸಾಹೇಬ್ ಪಾಟೀಲ್ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಮಹಾರಾಷ್ಟ್ರದ ಸಚಿವರಾಗಿ ಬಿಜೆಪಿ ನಾಯಕ ನಿತೀಶ್ ರಾಣೆ ಪ್ರಮಾಣ ವಚನ ಸ್ವೀಕರಿಸಿದರು.

ಶಿವಸೇನೆ ಶಾಸಕ ಭರತ್ ಭೋಗವಾಲೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಭೋಗವಾಲೆ ಅವರು ರಾಯ್‌ಗಢ್ ಜಿಲ್ಲೆಯ ಮಹಾಡ್ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿದ್ದಾರೆ. ಮರಾಠ ಸಮುದಾಯದಿಂದ ಬಂದವರು. ಶಿವಸೇನೆ ಶಿಂಧೆ ಬಣದ ಶಾಸಕ ಪ್ರತಾಪ್ ಸರ್ನಾಯಕ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಸರ್ನಾಯಕ್ ಮರಾಠ ಸಮುದಾಯದ ದೊಡ್ಡ ನಾಯಕ. ಓವಾಲಾ ಅವರು ಮಾಜಿವಾಡ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಶಿವಸೇನೆ ಶಾಸಕ ಸಂಜಯ್ ಶಿರ್ಸಾತ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಶಿರ್ಸಾತ್ ಔರಂಗಾಬಾದ್ ಪಶ್ಚಿಮ ಕ್ಷೇತ್ರದ ಶಾಸಕರಾಗಿದ್ದಾರೆ. ಮರಾಠವಾಡಕ್ಕೆ ಸೇರಿದೆ. ಶಿಂಧೆ ಅವರಿಗೆ ಆಪ್ತರಾಗಿರುವ ನಾಯಕರಲ್ಲಿ ಅವರನ್ನು ಕಣಕ್ಕಿಳಿಸಲಾಗಿದೆ.

ಬಿಜೆಪಿ ನಾಯಕ ಸಂಜಯ್ ಸಾವ್ಕರೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಸಾವ್ಕರೆ 2009 ರಿಂದ ನಿರಂತರವಾಗಿ ಚುನಾವಣೆಗಳನ್ನು ಗೆಲ್ಲುತ್ತಿದ್ದಾರೆ. ನಾಲ್ಕನೇ ಬಾರಿಗೆ ಭೂಸಾವಲ್ ವಿಧಾನಸಭಾ ಕ್ಷೇತ್ರದಿಂದ ಗೆದ್ದಿದ್ದಾರೆ. ಎನ್‌ಸಿಪಿ ಶಾಸಕ ನರಹರಿ ಜಿರ್ವಾಲ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಅವರು ದಿಂಡೂರಿನಿಂದ ನಾಲ್ಕು ಬಾರಿ ಶಾಸಕರಾಗಿದ್ದಾರೆ. ಜಿರ್ವಾಲ್ ಅವರು ಡೆಪ್ಯೂಟಿ ಸ್ಪೀಕರ್ ಕೂಡ ಆಗಿದ್ದಾರೆ. ಹಿರಿಯ ಬುಡಕಟ್ಟು ನಾಯಕರಲ್ಲಿ ಜಿರ್ವಾಲ್ ಅವರನ್ನು ಪರಿಗಣಿಸಲಾಗಿದೆ. ಪುಟ 2

ಮಾಯೋಟ್‌ನಲ್ಲಿ ಚಿಡೋ ಚಂಡಮಾರುತದ ಅಬ್ಬರ

## ಸಾವಿನ ಪ್ರಮಾಣ ಏರಿಕೆ

**ಮಾಯೋಟ್:** ಚಿಡೋ ಚಂಡಮಾರುತವು ಫ್ರಾನ್ಸ್ ದೊಡ್ಡ ಅನಾಹುತವನ್ನೇ ಸೃಷ್ಟಿ ಮಾಡಿದೆ, ಈಗಾಗಲೇ ಸಾವಿರಕ್ಕೂ ಅಧಿಕ ಮಂದಿ ಸಾವನ್ನಪ್ಪಿದ್ದಾರೆ. ಆಫ್ರಿಕಾದ ಕರಾವಳಿಯ ಆಗ್ನೇಯ ಹಿಂದೂ ಮಹಾಸಾಗರದಲ್ಲಿರುವ ಮಾಯೋಟ್ ಫ್ರಾನ್ಸ್ ಮತ್ತು ಯುರೋಪಿಯನ್ ಒಕ್ಕೂಟದ ಬಡ ಪ್ರದೇಶವಾಗಿದೆ. ಅಧಿಕಾರಿಯ ಪ್ರಕಾರ, ಇದು 90 ವರ್ಷಗಳಲ್ಲಿ ಮಾಯೋಟ್‌ಗೆ ಅಪ್ಪಳಿಸಿರುವ ಅತ್ಯಂತ ಕೆಟ್ಟ ಚಂಡಮಾರುತವಾಗಿದೆ.

ಚಿಡೋ ಚಂಡಮಾರುತ ಇದೀಗ ಆಫ್ರಿಕಾದ ಪೂರ್ವ ಕರಾವಳಿಯನ್ನು ತಲುಪಿದೆ. ಕೊಳೆಗೇರಿಗಳಲ್ಲಿ ವಾಸಿಸುವ ಅನೇಕ ಜನರು ಗಂಭೀರ ಅಪಾಯಗಳನ್ನು ಎದುರಿಸುತ್ತಿದ್ದಾರೆ ಎಂದು ಅವರು ಹೇಳಿದರು. ಚಿಡೋ ಗಂಟೆಗೆ 220 ಕಿಲೋಮೀಟರ್‌ಗಿಂತಲೂ ಹೆಚ್ಚು ಗಾಳಿಯ ರಭಸವನ್ನು ಉಂಟು ಮಾಡಿತ್ತು. ಇದರಿಂದ ಹಲವಾರು ಮನೆಗಳು ಹಾನಿಗೊಳಗಾಗಿವೆ. ಮಾಯೋಟ್ ನಲ್ಲಿ 3 ಲಕ್ಷಕ್ಕೂ ಅಧಿಕ ಮಂದಿ ವಾಸವಿದ್ದಾರೆ.

ಇದು ಆಫ್ರಿಕಾದ ಪೂರ್ವ ಕರಾವಳಿಯಿಂದ ಸುಮಾರು 800 ಕಿಲೋಮೀಟರ್ ದೂರದಲ್ಲಿರುವ ಎರಡು ಪ್ರಮುಖ ದ್ವೀಪಗಳಲ್ಲಿ ಹರಡಿದೆ. ಕೆಲವೆಡೆ ಇಡೀ ಪ್ರದೇಶವೇ ನಾಶವಾಗಿದೆ. ಹಲವು ಮರಗಳು ಧರೆಗುರುಳಿದ್ದು, ದೋಣಿಗಳು ಉರುಳಿ ಬಿದ್ದಿವೆ ಅಥವಾ ಮುಳುಗಿವೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಅದೇ ಸಮಯದಲ್ಲಿ, ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಅವರು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದು ಹೇಳಿದರು.



ಅತುಲ್ ಸುಭಾಷ್ ಆತ್ಮಹತ್ಯೆ

## ಪೊಲೀಸರ ವ್ಯೂಹಕ್ಕೆ ಆರೋಪಿಗಳು



**ಬೆಂಗಳೂರು:** ಉತ್ತರ ಪ್ರದೇಶಮೂಲದ ಟೆಕ್ಕಿ ಅತುಲ್ ಸುಭಾಷ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳನ್ನು ಮಾರತ್ತಹಳ್ಳಿ ಪೊಲೀಸರು ಬಂಧಿಸಿ ಬೆಂಗಳೂರಿಗೆ ಕರೆತಂದಿದ್ದಾರೆ. ಮೂವರನ್ನೂ ನ್ಯಾಯಂಗ ಬಂಧನದಲ್ಲಿ ಇಡಲಾಗಿದೆ. ಆರೋಪಿಗಳು ಪೊಲೀಸ್ ಬಲೆಗೆ ಬಿದ್ದಿದ್ದು ಹೇಗೆ ಬಲೆ ಬೀಸಿದ್ದು ಹೇಗೆ ಎಂಬ ರೋಚಕ ಸಂಗತಿ ಬಯಲಾಗಿದೆ.

ಟೆಕ್ಕಿ ಅತುಲ್ ಆತ್ಮಹತ್ಯೆ ಪ್ರಕರಣದ ತನಿಖೆ ನಡೆಸುತ್ತಿರುವ ಮಾರತ್ತಹಳ್ಳಿ ಪೊಲೀಸರು ಆರೋಪಿಗಳನ್ನು ವಶಕ್ಕೆ ಪಡೆಯಲು ಉತ್ತರ ಪ್ರದೇಶಕ್ಕೆ ತೆರಳಿದ್ದರು. ಪೊಲೀಸರು ಬರುತ್ತಿರುವ ವಿಚಾರ ತಿಳಿದ ಅತುಲ್ ಅವರ ಪತ್ನಿ ನಿಖಿತಾ, ಅತ್ತೆ ನಿಶಾ ಸಿಂಘಾನಿಯಾ ಮತ್ತು ಭಾಮೈದ ಅನುರಾಗ್ ಮನೆಯಿಂದ ಪರಾರಿಯಾಗಿದ್ದರು. ಪುಟ 2

## ಡ್ರೋನ್ ಪ್ರತಾಪ್ ಪೊಲೀಸ್ ಕಸ್ಟಡಿ ಅಂತ್ಯ

### ಮೂರು ದಿನಗಳ ವಿಚಾರಣೆಯಲ್ಲಿ ಪೊಲೀಸರಿಗೆ ಸಿಕ್ತು ಮಹತ್ವದ ಮಾಹಿತಿ

**ತುಮಕೂರು:** ತುಮಕೂರು ಜಿಲ್ಲೆಯ ಮಧುಗಿರಿ ತಾಲೂಕಿನ ಜನಕಲೋಟಿ ಬಳಿ ಕೃಷಿ ಹೊಂಡಕ್ಕೆ ಸೋಡಿಯಂ ಎಸೆದು ಸ್ಫೋಟಿಸಿದ್ದ ಪ್ರಕರಣದಿಂದ ಡ್ರೋನ್ ಪ್ರತಾಪ್ ಗೆ ದೊಡ್ಡ ಸಂಕಷ್ಟವೇ ಎದುರಾಗಿದೆ. ಡ್ರೋನ್ ಪ್ರತಾಪ್ ಈಗ ಸೋಡಿಯಂ ಪ್ರತಾಪ್ ಆಗಿದ್ದಾನೆ! ಕಳೆದ ಮೂರು ದಿನಗಳಿಂದ ಡ್ರೋನ್ ಪ್ರತಾಪ್ ನನ್ನು ಮಿಡಿಗೇಶಿ ಪೊಲೀಸರು ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ. ಭಾನುವಾರ ಇಡೀ ದಿನ ಬೆಂಗಳೂರಿಗೆ ಕರೆದುಕೊಂಡು ಹೋಗಿದ್ದ ಪೊಲೀಸರು, ಡ್ರೋನ್ ಪ್ರತಾಪ್ ಮನೆ ಕಚೇರಿ ಹಾಗೂ ಸೋಡಿಯಂ ಖರೀದಿಸಿದ್ದ ಅಂಗಡಿಯಲ್ಲಿ ಮಹಜರ್ ಮಾಡಿದ್ದಾರೆ. ಜೊತೆಗೆ ವಿಡಿಯೋ ಚಿತ್ರಿಕರಿಸಿದ್ದ ಕ್ಯಾಮರಾಮನ್ ವಿನಯ್ ಹಾಗೂ ಸೋಡಿಯಂ ಖರೀದಿಗೆ ಸಹಕಾರ ನೀಡಿದ್ದ ಪ್ರಜ್ವಲ್ ನನ್ನೂ ಪೊಲೀಸರು ಬಂಧಿಸಿ ವಿಚಾರಣೆ ನಡೆಸುತ್ತಿದ್ದಾರೆ.



ಡ್ರೋನ್ ಪ್ರತಾಪ್ ನನ್ನು ಪೊಲೀಸರು ಭಾನುವಾರ ಬೆಂಗಳೂರಿನ ಕೊತ್ತನೂರು, ಜೆಪಿನಗರ ಹಾಗೂ ಅವೆನ್ಯೂ ರೋಡ್‌ಗೆ ಕರೆದುಕೊಂಡು ಹೋಗಿ ಮಹಜರ್ ಮಾಡಿಕೊಂಡು ಬಂದಿದ್ದಾರೆ. ಡ್ರೋನ್ ಪ್ರತಾಪ್ ವಾಸವಿದ್ದ ಮನೆ ಕಚೇರಿ ಹಾಗೂ ಜೆಪಿನಗರದಲ್ಲಿ ಬ್ಲಾಸ್ಟ್ ಬಗ್ಗೆ ಚಿತ್ರೀಕರಿಸಿದ್ದ ಕ್ಯಾಮರಾ ವಶಕ್ಕೆ ಪಡೆದಿದ್ದಾರೆ. ಜೆಪಿ ನಗರದಲ್ಲಿ ಸಂಜು ಎಂಬುವರ ಮನೆಯಲ್ಲಿ ಕ್ಯಾಮರಾ ವಶಕ್ಕೆ ಪಡೆದಿದ್ದಾರೆ. ಬಳಿಕ ಬೆಂಗಳೂರಿನ ಅವೆನ್ಯೂ ರಸ್ತೆಯಲ್ಲಿರುವ 'ವಾಸ ಸೈಂಟಿಫಿಕ್ ಶಾಪ್'ಗೆ ತೆರಳಿ ಮಹಜರು ಮಾಡಿದ್ದಾರೆ.

**ಸೋಡಿಯಂ ಖರೀದಿ ಮಾಡಿದ್ದೇಗೆ ಡ್ರೋನ್ ಪ್ರತಾಪ್:** 'ವಾಸ ಸೈಂಟಿಫಿಕ್ ಶಾಪ್' ಕಳೆದ 75 ವರ್ಷಗಳಿಂದ ಅಧಿಕೃತವಾಗಿ ಸೋಡಿಯಂ ವಿತ್ ಕೆಮಿಕಲ್ ಮಾರಾಟ ಮಾಡುವ ಅಂಗಡಿಯಾಗಿದೆ. ಪುಟ 2



ಕಾರು-ಲಾರಿ ಮುಖಾಮುಖಿ ಡಿಕ್ಕಿ

## 6 ಮಂದಿ ಸಾವು

**ಛತ್ತೀಸ್‌ಗಢ:** ಛತ್ತೀಸ್‌ಗಢದ ಬಲೋದ್ ಜಿಲ್ಲೆಯಲ್ಲಿ ರಾಂಗ್ ಸೈಡ್‌ನಿಂದ ಬಂದ ಟ್ರಕ್ ಕಾರಿಗೆ ಡಿಕ್ಕಿ ಹೊಡೆದ ಪರಿಣಾಮ ಆರು ಜನರು ಸಾವನ್ನಪ್ಪಿದ್ದಾರೆ, 7 ಜನರು ಗಾಯಗೊಂಡಿದ್ದಾರೆ. ದೊಂಡಿ ಪೊಲೀಸ್ ಠಾಣಾ ವ್ಯಾಪ್ತಿಯ ಭಾನುಪ್ರತಾಪುರ-ದಳ್ಳಿರಾಜರ ರಸ್ತೆಯ ಚೌರಪವಾಡ ಬಳಿ ಮುಂಜಾನೆ ಅಪಘಾತ ಸಂಭವಿಸಿದೆ.

ಮಾಹಿತಿ ಪ್ರಕಾರ, ಎದುರಿನಿಂದ ಬರುತ್ತಿದ್ದ ಕಾರಿಗೆ ಟ್ರಕ್ ಡಿಕ್ಕಿ ಹೊಡೆದಿದೆ. ಗಾಯಾಳುಗಳನ್ನು ರಾಜನಂದಗಾಂವ್ ವೈದ್ಯಕೀಯ ಕಾಲೇಜಿಗೆ ಕರೆದೊಯ್ಯಲಾಗಿದೆ. ಅಪಘಾತದ ಬಗ್ಗೆ ವಿವರಗಳನ್ನು ಒದಗಿಸಿದ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ (ಎಎಸ್ಪಿ) ಅಶೋಕ್ ಜೋಶಿ, ಆರೋಪಿ ಟ್ರಕ್ ಚಾಲಕ ಸ್ಥಳದಿಂದ ಪರಾರಿಯಾಗಿದ್ದಾನೆ ಮತ್ತು ಆತನ ಶೋಧ ಮುಂದುವರೆದಿದೆ.



ಡಿಕ್ಕಿಯ ರಭಸಕ್ಕೆ ಕಾರು ತೀವ್ರವಾಗಿ ಜಖಂಗೊಂಡಿದೆ. ಅಪಘಾತ ಸಂಭವಿಸಿದ ಕೂಡಲೇ ಪೊಲೀಸರು ಸ್ಥಳಕ್ಕೆ ಆಗಮಿಸಿ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ. ಪುಟ 2

ಕರ್ನಾಟಕ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿಜ್ಞಾನ, ಗಣಿತ ಶಿಕ್ಷಕರಿಗೆ ಬರ

## 22 ಲಕ್ಷ ವಿದ್ಯಾರ್ಥಿಗಳಿಗೆ 9 ಸಾವಿರ ಶಿಕ್ಷಕರು!

**ಬೆಂಗಳೂರು:** ಕರ್ನಾಟಕ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿಜ್ಞಾನ ಹಾಗೂ ಗಣಿತ ಶಿಕ್ಷಕರ ಗಣನೀಯ ಕೊರತೆ ಇರುವುದು ಅಂಕಿಅಂಶಗಳಿಂದ ತಿಳಿದುಬಂದಿದೆ. ಕರ್ನಾಟಕವು ವಿಜ್ಞಾನ ಮತ್ತು ತಂತ್ರಜ್ಞಾನದ ಪ್ರಗತಿಗೆ ಹೆಸರುವಾಸಿಯಾಗಿದ್ದರೂ, ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಯ ವರೆಗಿನ ಸುಮಾರು 22 ಲಕ್ಷ ವಿದ್ಯಾರ್ಥಿಗಳಿಗೆ ಕೇವಲ 8,895 ವಿಜ್ಞಾನ ಮತ್ತು ಗಣಿತ ಶಿಕ್ಷಕರಿದ್ದಾರೆ ಎಂದು ವರದಿಯಾಗಿದೆ.

ಸರ್ಕಾರದ ಅಂಕಿಅಂಶಗಳ ಪ್ರಕಾರ, ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 81,979 ಕನ್ನಡ ಶಿಕ್ಷಕರಿದ್ದರೆ, ಕೇವಲ 5,732 ಇಂಗ್ಲಿಷ್ ಶಿಕ್ಷಕರಿದ್ದಾರೆ. ಈ ಕೊರತೆಯನ್ನು ನೀಗಲು ಅತಿಥಿ ಶಿಕ್ಷಕರನ್ನು ನೇಮಿಸಲಾಗಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ. ಆದರೆ, ಇದು ದೀರ್ಘಾವಧಿಯ ಪರಿಹಾರವಲ್ಲ ಎಂದು ಶಿಕ್ಷಣತಜ್ಞರು ಅಭಿಪ್ರಾಯಪಟ್ಟಿರುವುದಾಗಿ 'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ವರದಿ ಮಾಡಿದೆ. ಇದೇ ಪರಿಸ್ಥಿತಿ ಮುಂದುವರಿದರೆ ಗ್ರಾಮೀಣ ಭಾಗದ ಹಲವು ಶಾಲೆಗಳು ಮುಚ್ಚುವ ಸಾಧ್ಯತೆ ಇದೆ ಎಂದು ತಜ್ಞರು ಎಚ್ಚರಿಸಿರುವುದಾಗಿಯೂ ವರದಿ ಉಲ್ಲೇಖಿಸಿದೆ.



**ಕಳಪೆ ಫಲಿತಾಂಶಕ್ಕೂ ಕಾರಣ:** ಪ್ರತಿ ವರ್ಷ ಕೆಲವು ಜಿಲ್ಲೆಗಳು ಅಥವಾ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕಳಪೆ ಫಲಿತಾಂಶ ಬರಲು ಶಿಕ್ಷಕರ ಕೊರತೆಯೂ ಪರೋಕ್ಷ ಕಾರಣವಾಗುತ್ತಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಪ್ರಾಥಮಿಕ ಶಾಲಾ ಹಂತದಲ್ಲೇ ಮಕ್ಕಳಿಗೆ ಸರಿಯಾಗಿ ಕಲಿಸದಿದ್ದರೆ, ಅವರಲ್ಲಿ ಕಲಿಕೆಯ ಆಸಕ್ತಿಯನ್ನು ಹುಟ್ಟುಹಾಕುವಲ್ಲಿ ಶಿಕ್ಷಕರು ವಿಫಲರಾದರೆ ಅದು ಸರ್ಕಾರದ ತಪ್ಪು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಕನ್ನಡದಲ್ಲಿ ಬೋಧನೆ ಮಾಡುವುದರಿಂದ ಮಕ್ಕಳು ವೇಗವಾಗಿ ಗ್ರಹಿಸಬಹುದು. ಆದರೆ, ಇತರ ವಿಷಯಗಳ ಶಿಕ್ಷಕರ ತೀವ್ರ ಕೊರತೆ ಅವರ ಕಲಿಕೆಯನ್ನು ಕುಂಠಿತ ಮಾಡುತ್ತಿದೆ ಎಂದು ಮಕ್ಕಳ ಹಕ್ಕುಗಳ ಹೋರಾಟಗಾರ ವಾಸುದೇವ್ ಶರ್ಮಾ ಅಭಿಪ್ರಾಯಪಟ್ಟಿದ್ದಾರೆ. ಪ್ರಸ್ತುತ ಶಿಕ್ಷಕರ ಸಂಖ್ಯೆ ಸಂಬಂಧಿತ ಅಂಕಿಅಂಶಗಳು ಆಘಾತಕಾರಿಯಾಗಿವೆ. ಇದು ವಿದ್ಯಾರ್ಥಿಗಳ ಸಾಮರ್ಥ್ಯವನ್ನು ಕುಂಠಿತಗೊಳಿಸುವಲ್ಲಿ ವ್ಯವಸ್ಥಿತ ವೈಫಲ್ಯವನ್ನು ಬಹಿರಂಗಪಡಿಸಿದೆ ಎಂದು ಅವರು ಹೇಳಿದ್ದಾರೆ.

**5, 8ನೇ ತರಗತಿಯಿಂದ ಇಂಗ್ಲಿಷ್ ಮಾಧ್ಯಮಕ್ಕೆ ಸೇರಿಸುವುದು ಸರಿಯೇ:** ಕೆಲವೊಮ್ಮೆ, 5 ಅಥವಾ 8 ನೇ ತರಗತಿ ಮುಗಿದ ನಂತರ ವಿದ್ಯಾರ್ಥಿಗಳನ್ನು ಕನ್ನಡದಿಂದ ಇಂಗ್ಲಿಷ್ ಮಾಧ್ಯಮ ಶಾಲೆಗಳಿಗೆ ಬದಲಾಗುವಂತೆ ಒತ್ತಾಯಿಸಲಾಗುತ್ತದೆ. ಇದು ಅಪರಾಧಕ್ಕಿಂತ ಕಡಿಮೆಯಾದದ್ದೇನಲ್ಲ. ಯಾಕೆಂದರೆ, ಹೀಗೆ ಮಾಡಿದಾಗ ಮಕ್ಕಳು ಕಲಿಯಲು ಸಾಧ್ಯವಾಗದ ವಾತಾವರಣಕ್ಕೆ ತಳ್ಳಲ್ಪಡುತ್ತಾರೆ. ಆ ಸಂದರ್ಭದಲ್ಲಿ ಅವರ ಅಸಮರ್ಥತೆಗಾಗಿ ಅವಮಾನಕ್ಕೊಳಗಾಗುವ ಸಾಧ್ಯತೆಯೂ ಇದೆ ಎಂದು ಶರ್ಮಾ ಹೇಳಿದಾಗಿ ವರದಿ ಉಲ್ಲೇಖಿಸಿದೆ. ಪುಟ 2

## ಡಬಲ್ ಡೆಕ್ಕರ್ ಫ್ಲೈಓವರ್

### ಕನಕಪುರ ರೋಡ್ ಜಂಕ್ಷನ್, ಕಾಮಾಕ್ಯ ಜಂಕ್ಷನ್‌ನಲ್ಲಿ

**ಬೆಂಗಳೂರು:** ಜೆಪಿ ನಗರ ಮೆಟ್ರೋ ಸ್ಟೇಷನ್ ನಿಂದ ಕೆಂಪಾಪುರ ಮಾರ್ಗಕ್ಕೆ ಈಗಾಗಲೇ ಕೇಂದ್ರ ಸರ್ಕಾರ ಹಸಿರು ನಿಶಾನೆ ತೋರಿದೆ. ಈ ಆರೆಂಜ್ ಮಾರ್ಗದಲ್ಲಿ ಎರಡು ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣಕ್ಕೆ ರಾಜ್ಯ ಸರ್ಕಾರವು ಅಸ್ತು ಎಂದಿದೆ. 507 ಕೋಟಿ ರುಪಾಯಿ ವೆಚ್ಚದಲ್ಲಿ ಜೆಪಿ ನಗರ ಮೆಟ್ರೋ ಸ್ಟೇಷನ್ ಬಳಿಯ ಕನಕಪುರ ರೋಡ್ ಜಂಕ್ಷನ್ ನಲ್ಲಿ ಒಂದು ಡಬಲ್ ಡೆಕ್ಕರ್ ಫ್ಲೈ ಓವರ್ ಹಾಗೂ ಕಾಮಾಕ್ಯ ಜಂಕ್ಷನ್ ನಲ್ಲಿ ಮತ್ತೊಂದು ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣ ಮಾಡಲು ಬಿಎಂಆರ್ ಸಿಎಲ್ ಮುಂದಾಗಿದೆ.

**ಒಂದೇ ಮೆಟ್ರೋ ಮಾರ್ಗದಲ್ಲಿ ಎರಡು ಡಬಲ್ ಡೆಕ್ಕರ್:** ಇದರೊಂದಿಗೆ, ದಕ್ಷಿಣ ಭಾರತದಲ್ಲೇ ಮೊದಲ ಬಾರಿಗೆ ಒಂದೇ ಮೆಟ್ರೋ ಮಾರ್ಗದಲ್ಲಿ ಎರಡು ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣ ಮಾಡಿದ ಹೆಗ್ಗಳಿಗೆ ಬೆಂಗಳೂರಿನದ್ದಾಗಲಿದೆ. ಕೆಳಗಡೆ ವಾಹನಗಳು, ಮಧ್ಯ ಭಾಗದಲ್ಲಿ ಫ್ಲೈ ಓವರ್ ಅದರ ಮೇಲ್ಭಾಗದಲ್ಲಿ ಮೆಟ್ರೋ ರೈಲು ಸಂಚಾರ ಮಾಡಲಿದೆ.



ಎರಡು ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣದ ಬಗ್ಗೆ ಬಿಎಂಆರ್ ಸಿಎಲ್ ಹಿರಿಯ ಸಾರ್ವಜನಿಕ ಸಂಪರ್ಕಾಧಿಕಾರಿ ಯಶ್ವಂತ್ ಚೌವ್ಹಾಣ್ ಮಾಹಿತಿ ನೀಡಿದ್ದಾರೆ. ಪುಟ 2

## ಬಿಜೆಪಿಗೆ ರಾಜಕೀಯ ಬಿಟ್ಟರೆ ಬೇರೇನು ಬೇಕಿಲ್ಲ: ಡಿಕೆಶಿ ವಾಗ್ದಾಳಿ

**ಹುಬ್ಬಳ್ಳಿ:** ಬಿಜೆಪಿಯವರಿಗೆ ಉತ್ತರ ಕರ್ನಾಟಕದ ಬಗ್ಗೆ ಚರ್ಚೆ ಮಾಡುವ ಬಗ್ಗೆ ಆಸಕ್ತಿ ಇಲ್ಲ. ಬಿಜೆಪಿಗೆ ರಾಜಕೀಯ ಬಿಟ್ಟರೆ ಬೇರೇನು ಬೇಕಿಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ವಾಗ್ದಾಳಿ ನಡೆಸಿದರು.



ಅವರಲ್ಲಿ ಒಗ್ಗಟ್ಟು ಇಲ್ಲ, ಅದಕ್ಕೆ ಏನೇನೋ ಮಾಡುತ್ತಿದ್ದಾರೆ. ಅವರೇನೇ ಚರ್ಚೆ ಮಾಡಿದರೂ ನಾವು ಎಲ್ಲದಕ್ಕೂ ರೆಡಿ ಇದ್ದೇವೆ. ಮಹದಾಯಿ ವಿಚಾರವಾಗಿ ಕೇಂದ್ರ, ಅರಣ್ಯ ಸಚಿವರನ್ನು ಭೇಟಿ ಮಾಡಿದ್ದೇನೆ. ಜೋಶಿ ಅವರನ್ನು ಸಹ ಭೇಟಿ ಮಾಡಿದ್ದೇನೆ. ಅವರು ಯಾವಾಗ ಅನುಮತಿ ಕೊಡುತ್ತಾರೆ ಅಂತಾ ಕಾಯುತ್ತಿದ್ದೇವೆ. ಎಲ್ಲಾ ಪ್ಲ್ಯಾನ್ ಸಿದ್ಧವಿದೆ ಎಂದು ತಿಳಿಸಿದರು. ಕೆಲಸ ಪ್ರಾರಂಭ ಮಾಡುತ್ತೀವಿ. ಜಗದೀಶ್ ಶೆಟ್ಟರ್ ಮತ್ತು ಪ್ರಹ್ಲಾದ್ ಜೋಶಿ ಇಬ್ಬರು ಜವಾಬ್ದಾರಿ ತೆಗೆದುಕೊಳ್ಳಬೇಕು. ಯಾಕೆಂದರೆ ಮಹದಾಯಿ ಸಂಭ್ರಮಾಚರಣೆ ಮಾಡಿದ್ದು ಅವರು. ಆದರೆ, ಕೆಲಸ ಮಾಡೋರು ನಾವು. ಅವರಿಂದ ಸಣ್ಣ ಅರಣ್ಯ ಅನುಮತಿ ಸಿಗುವ ಭರವಸೆ ಇದೆ ಎಂದರು.

## ಮಾಣಿಪಾಡಿ ಹೇಳಿರುವ ವಿಡಿಯೋ ಆಧಾರದ ಮೇಲೆ ಮಾತನಾಡಿದ್ದೇನೆ- ಸಿಎಂ

**ಗದಗ:** ಅನ್ವರ್ ಮಾಣಿಪ್ಪಾಡಿ ವಕ್ಫ್ ಬಗ್ಗೆ ಹೇಳಿಕೆ ನೀಡಿರುವ ವಿಡಿಯೋ ಆಧಾರದ ಮೇಲೆ ನಾನು ಮಾತನಾಡಿದ್ದೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಜಿಲ್ಲೆಯ ಜಿಲ್ಲೆಯ ರೋಣ ಪಟ್ಟಣದ ಹೆಲಿಪ್ಯಾಡ್ ಮೈದಾನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಕ್ಫ್ ವಿಚಾರದಲ್ಲಿ ಬಿವೈ ವಿಜಯೇಂದ್ರ, 150 ಕೋಟಿ ರೂ. ಆಮಿಷ ಒಡ್ಡಿದ ಬಗ್ಗೆ ಮಾಣಿಪ್ಪಾಡಿ ಅವರು ಅವರದ್ದೇ ವಿಡಿಯೋದಲ್ಲಿ ಹೇಳಿದ್ದಾರೆ. ಅದರ ಆಧಾರದ ಮೇಲೆ ನಾನು ಮಾತನಾಡಿದ್ದೇನೆ. ಹೀಗಾಗಿ ಕೇಂದ್ರಕ್ಕೆ ಪತ್ರ ಬರೆದಿದ್ದೇವೆ ಎಂದು ಸ್ಪಷ್ಟನೆ ನೀಡಿದರು.



ಸಿಬಿಐ ತನಿಖೆಗೆ ಕೊಟ್ಟರೆ ಕಾಂಗ್ರೆಸ್ಸಿನವರೇ ಸಿಕ್ಕಿ ಬೀಳುತ್ತಾರೆ ಎನ್ನುವ ಬಿಜೆಪಿಗರ ಆರೋಪಕ್ಕೆ ಉತ್ತರಿಸಿದ ಅವರು, ಹಾಗಿದ್ದರೆ ಸಿಬಿಐ ತನಿಖೆಗೆ ಕೊಡಲಿ. ವಿಡಿಯೋದಲ್ಲಿರುವ ಧ್ವನಿ ಮಾಣಿಪ್ಪಾಡಿ ಅವರದ್ದೋ? ಅಲ್ಲವೋ? ಎಂದು ಮಾಧ್ಯಮದವರಿಗೆ ಚೆನ್ನಾಗಿ ಗೊತ್ತಿರುತ್ತದೆ ತಾನೇ? ಕೇಂದ್ರದಲ್ಲಿ ಅವರದ್ದೇ ಸರ್ಕಾರ ಇದೆ. ಅವರು ಸಿಬಿಐಗೆ ಕೊಡಲಿ ಎಂದರು. ಸೋಮವಾರದಿಂದ ಬುಧವಾರವರೆಗೆ ಸುವರ್ಣಸೌಧದಲ್ಲಿ ಉತ್ತರ ಕರ್ನಾಟಕ ಬಗ್ಗೆ ಚರ್ಚೆ ಮಾಡುತ್ತೇವೆ. ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು. ನಂತರ ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿ, ವಿಡಿಯೋದಲ್ಲಿ ಕೇಳಿಸಿರುವ ಧ್ವನಿ ಅನ್ವರ್ ಮಾಣಿಪ್ಪಾಡಿ ಅವರದ್ದೋ? ಅಲ್ವಾ? ಎಂದು ಮೊದಲು ಮಾಧ್ಯಮದವರು ನಿರ್ಧಾರ ಮಾಡಿ ಹೇಳಿ ಎಂದರು. ಈ ವೇಳೆ ಸಚಿವ ಎಚ್.ಕೆ ಪಾಟೀಲ್, ಶಾಸಕ ಜಿ.ಎಸ್ ಪಾಟೀಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ದೇಶದಲ್ಲಿ ಇಡಿ, ಸಿಬಿಐ ಇರೋದು ಕಾಂಗ್ರೆಸ್‌ಗೆ ಎನ್ನುವಂತಾಗಿದೆ: ಕೃಷ್ಣಬೈರೇಗೌಡ ಕಿಡಿ

**ಕೋಲಾರ:** ದೇಶದಲ್ಲಿ ಇಡಿ, ಸಿಬಿಐ ಇರುವುದು ಕೇವಲ ಕಾಂಗ್ರೆಸ್‌ಗೆ ಎನ್ನುವಂತಾಗಿದೆ ಎಂದು ಕೇಂದ್ರದ ನಡೆ ವಿರುದ್ಧ ಕಂದಾಯ ಸಚಿವ ಕೃಷ್ಣಬೈರೇಗೌಡ ಆಕ್ರೋಶ ವ್ಯಕ್ತಪಡಿಸಿದರು.



ಕೋಲಾರ ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ದಿ ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷ ಜನ್ನಘಟ್ಟ ವೆಂಕಟಮುನಿಯಪ್ಪ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಕಾರ್ಯಕ್ರಮದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವಕ್ಫ್ ಬೋರ್ಡ್ ವಿಚಾರವಾಗಿ ಅನ್ವರ್ ಮಾಣಿಪ್ಪಾಡಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮತ್ತು ಮಾಜಿ ಸಿಎಂ ಯಡಿಯೂರಪ್ಪ 150 ಕೋಟಿ ರೂ.ಗಳ ಆರೋಪ ಮಾಡಿದ್ದರೂ ಸಹ ಇಡಿ, ಸಿಬಿಐನವರು ಏನು ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಲಂಚದ ಆರೋಪ ಮಾಡುತ್ತಿರುವುದು ಅನ್ವರ್ ಮಾಣಿಪ್ಪಾಡಿ ಸಿಎಂ ಅಲ್ಲ. ಈ ಪ್ರಕರಣದಲ್ಲಿ ಮಾಜಿ ಸಿಎಂ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಒತ್ತಡ ಹಾಕಿದ್ದಾರೆ ಎಂದು ಆರೋಪ ಮಾಡಿದ್ದಾರೆ. ಅನ್ವರ್ ಮಾಣಿಪ್ಪಾಡಿ ಈಗಲೂ ಬಿಜೆಪಿಯ ಓರ್ವ ಪ್ರಮುಖ ನಾಯಕ. ಪ್ರತಿದಿನ ಸುಳ್ಳು ಆರೋಪಗಳಿಗೆ ಇಡಿ, ಸಿಬಿಐ ನೋಟಿಸ್ ನೀಡುತ್ತಾರೆ. ಆದರೆ ಸಿಬಿಐಗೆ ಸಾಂವಿಧಾನಿಕ ಜವಾಬ್ದಾರಿ ಇದ್ದರೆ ತನಿಖೆ ಮಾಡಬೇಕು, ಸತ್ಯಾಸತ್ಯತೆ ಹೊರಬರಲು ಇದು ತನಿಖೆಯಾಗಬೇಕು ಎಂದು ಒತ್ತಾಯ ಮಾಡಿದರು.

ಇನ್ನೂ ಅದಾನಿ ಮೇಲೆ ಎರಡೂವರೆ ಸಾವಿರ ಕೋಟಿ ಲಂಚ ಆರೋಪದ ಎಫ್‌ಐಆರ್ ಅಮೇರಿಕಾದಲ್ಲಿ ಆಗಿದೆ. ಆ ಪ್ರಕರಣದಲ್ಲೂ ಇಡಿ, ಸಿಬಿಐ ಏನೂ ಮಾಡದೆ ನಾಟಕ ಮಾಡುತ್ತಿದ್ದಾರೆ. ಕೋವಿಡ್ ಹಗರಣ ತನಿಖೆ ದ್ವೇಷ ರಾಜಕೀಯ ಎಂದು ಜಗದೀಶ್ ಶೆಟ್ಟರ್ ಹೇಳಿಕೆ ನೀಡಿದ್ದರು. ಇದಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಹೆಣದಲ್ಲಿ ಹಣ ಮಾಡಿದ್ದನ್ನು ಮರೆಯಬೇಕಾ? ಕಳಪೆ ಸಾಮಗ್ರಿ, ಟೆಸ್ಟಿಂಗ್‌ನಲ್ಲಿ ಡಬಲ್ ದುಡ್ಡು ಮಾಡಿದ್ದರು. ಸಾವಿನಲ್ಲೂ ಹಣ ಮಾಡಿದ ಸಂಸ್ಕೃತಿಯನ್ನು ಬಿಟ್ಟು ಬಿಡಬೇಕಾ? ನ್ಯಾಯಾಂಗ ತನಿಖೆಯ ವರದಿ ಆಧರಿಸಿ ಕಾನೂನು ಕ್ರಮ ಆರಂಭಿಸಿದ್ದೇವೆ. ಮಾರಕ ಕಾಯಿಲೆ ದೇಶ ಪ್ರಪಂಚವನ್ನು ಬುಡಮೇಲೆ ಮಾಡುವಾಗ ಅದರಲ್ಲೂ ದುಡ್ಡು ಮಾಡಿದರು. ಇದು ಯಾವ ಮಾನವೀಯ ಧರ್ಮ? ಹಿಂದೂ ಧರ್ಮದ ಹೆಸರಲ್ಲಿ ವೋಟು ಹಾಕಿಸಿಕೊಂಡರು ಎಂದು ಕಿಡಿಕಾರಿದರು. ಇದೆಲ್ಲ ಹಿಂದೂ ಧರ್ಮಕ್ಕೆ ಮಾಡಿದ ಅಪಚಾರ ಅಲ್ಲವೇ? ಸತ್ಯಸಂಗತಿ ಹೊರಗೆ ಬರಬೇಕೆಂದರೆ ತನಿಖೆಯಾಗಲಿ, ದುಡ್ಡು ಯಾರು ಮಾಡುವುದಿಲ್ಲ ಎಂದಲ್ಲ, ಎಲ್ಲರೂ ಸಾಚಾಗಳು ಅಲ್ಲ, ಆದರೆ ಇವರು ಸಾವಿನಲ್ಲೂ ದುಡ್ಡು ಮಾಡಿದ್ದಾರೆ. ಇದು ಜಗದೀಶ್ ಶೆಟ್ಟರ್ ಹಾಗೂ ಬಿಜೆಪಿಗೆ ತಪ್ಪು ಎನ್ನಿಸಲ್ಲ. ಮಾನವೀಯತೆ ಇಲ್ಲದೆ ದುಡ್ಡು ಮಾಡಿದ್ದಾರೆ. ಇವರು ಮನುಷ್ಯರಾ ಅಥವಾ ರಾಕ್ಷಸ ಪ್ರವೃತ್ತಿಗೆ ಸೇರಿದವರಾ? ಎಂಬ ಬಗ್ಗೆ ತನಿಖೆ ಆಗುತ್ತಿದೆ ಎಂದು ತಿರುಗೇಟು ನೀಡಿದರು.

# ವಿಜಯೇಂದ್ರ ಪರ ಶಕ್ತಿ ಪ್ರದರ್ಶನಕ್ಕೆ ರೇಣುಕಾಚಾರ್ಯ ಟೀಂ ಸಿದ್ಧತೆ: 40 ಮಾಜಿ ಶಾಸಕರಿಂದ ಸಭೆ

**ದಾವಣಗೆರೆ:** ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರ ಪರವಾಗಿ ಗಟ್ಟಿಯಾಗಿ ನಿಲ್ಲಲು ದಾವಣಗೆರೆಯ ಹೋಟೆಲ್ ಒಂದರಲ್ಲಿ ಮಾಜಿ ಸಚಿವ ರೇಣುಕಾಚಾರ್ಯ ಟೀಮ್ ಸಭೆ ನಡೆಸಿದೆ. ಈ ಮೂಲಕ ಬಿಜೆಪಿಯ ಯತ್ನಾಳ್ ಬಣಕ್ಕೆ ಟಕ್ಕರ್ ಕೊಡಲು ವಿಜಯೇಂದ್ರ ಬಣ ತಯಾರಾಗಿದೆ. ಮಾಜಿ ಸಚಿವ ಎಸ್.ಎ ರವೀಂದ್ರನಾಥ್, ಕಟ್ಟಾ ಸುಬ್ರಹ್ಮಣ್ಯ ನಾಯ್ಡು ನೇತೃತ್ವದಲ್ಲಿ 40ಕ್ಕೂ ಹೆಚ್ಚು ಮಾಜಿ ಶಾಸಕರು ಸಭೆ ನಡೆಸಿದ್ದಾರೆ. ಸಭೆಯಲ್ಲಿ ಫೆಬ್ರವರಿ 27ಕ್ಕೆ ದಾವಣಗೆರೆಯಲ್ಲಿ ಸಮಾವೇಶಕ್ಕೆ ದಿನಾಂಕ ನಿಗದಿ ಮಾಡಲಾಗಿದೆ. ಈ ಮೂಲಕ ಮಾಜಿ ಸಿಎಂ ಯಡಿಯೂರಪ್ಪನವರ ಹುಟ್ಟು ಹಬ್ಬದಂದು ವಿಜಯೇಂದ್ರ ಪರ ಶಕ್ತಿ ಪ್ರದರ್ಶನಕ್ಕೆ ಪಕ್ಷದ ನಾಯಕರು ಮುಂದಾಗಿದ್ದಾರೆ. ಸಭೆಯಲ್ಲಿ ಬೃಹತ್ ಸಮಾವೇಶಕ್ಕೆ 20 ಲಕ್ಷ ಜನರನ್ನು ಸೇರಿಸುವ ಸಂಕಲ್ಪ ಮಾಡಲಾಗಿದೆ. ಇನ್ನೂ ವಿಜಯೇಂದ್ರರನ್ನು ರಾಜ್ಯಾಧ್ಯಕ್ಷ ಸ್ಥಾನದಲ್ಲಿ ಮುಂದುವರೆಸುವಂತೆ ಒತ್ತಾಯ ಮಾಡಲಾಗಿದೆ. ಅಲ್ಲದೇ ದೆಹಲಿಗೆ ಹೋಗಿ ವರಿಷ್ಠರನ್ನು ಭೇಟಿ ಮಾಡಿ, ಸಭೆಯಲ್ಲಿದ್ದ ಎಲ್ಲಾ ಮಾಜಿ ಶಾಸಕರಿಗೆ ಮುಂದಿನ ಚುನಾವಣೆಯಲ್ಲಿ ಟಿಕೆಟ್ ನೀಡುವಂತೆ ಮನವಿ ಮಾಡುವ ನಿರ್ಣಯ ಕೈಗೊಳ್ಳಲಾಗಿದೆ. ಮತ್ತೆ ಈ ತಿಂಗಳ ಕೊನೆಯಲ್ಲಿ ದಾವಣಗೆರೆಯ ಕಾರ್ಯಕ್ರಮದ ಪೂರ್ವಾಭಾವಿ ಸಭೆಯನ್ನು ಮಾಡುತ್ತೇವೆ ಎಂದು ಕಟ್ಟಾ ಸುಬ್ರಹ್ಮಣ್ಯ ನಾಯ್ಡು ತಿಳಿಸಿದ್ದಾರೆ. ಸಭೆಯ ಬಗ್ಗೆ ಮಾಹಿತಿ ನೀಡಿದ ರೇಣುಕಾಚಾರ್ಯ ಅವರು, ಯತ್ನಾಳ್ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ. ರಾಜ್ಯಾಧ್ಯಕ್ಷರಿಗೆ ಬೆಂಬಲ ನೀಡಲು ಸಮವೇಶ ಮಾಡುತ್ತಿದ್ದೇವೆ. ರಾಜ್ಯದಲ್ಲಿ ಬಣ ರಾಜಕೀಯ ಇಲ್ಲ. ಎಲ್ಲರಿಗೂ ಅಹ್ವಾನ ಮಾಡುತ್ತೇವೆ. ಯಾರ ವಿರುದ್ಧವೂ ಶಕ್ತಿ ಪ್ರದರ್ಶನದ ಸಮವೇಶ ಇದಲ್ಲ ಎಂದಿದ್ದಾರೆ. ಈ ಸಮವೇಶಕ್ಕೆ ಮಠಾಧೀಶರನ್ನು ರಾಜಕೀಯ ನಾಯಕರನ್ನು ಅಹ್ವಾನಿಸುತ್ತೇವೆ. ಇದು ಬಿಜೆಪಿಯ ಪರ್ಯಾಯ ಸಭೆಯಲ್ಲ ಎಂದು ಅವರು ಹೇಳಿಕೊಂಡಿದ್ದಾರೆ.



# ಮತ್ತೋರ್ವ ಬಾಣಂತಿ ಸಾವು: ಮೃತರ ಸಂಖ್ಯೆ 10ಕ್ಕೆ ಏರಿಕೆ

**ರಾಯಚೂರು:** ಜಿಲ್ಲೆಯಲ್ಲಿ ಬಾಣಂತಿಯರ ಸರಣಿ ಸಾವು ಮುಂದುವರೆದಿದ್ದು, ಇದೀಗ ಮತ್ತೋರ್ವ ಬಾಣಂತಿ ಸಾವನ್ನಪ್ಪಿರುವುದು ಬೆಳಕಿಗೆ ಬಂದಿದೆ. ಈ ಪೈಕಿ ಮೂರು ತಿಂಗಳಲ್ಲಿ ಒಟ್ಟು 10 ಬಾಣಂತಿಯರು ಸಾವನ್ನಪ್ಪಿದ್ದಾರೆ.

ಮೃತ ಬಾಣಂತಿಯನ್ನು ರಾಯಚೂರು ತಾಲೂಕಿನ ಗಾರಲದಿನ್ನಿಯ ಮೂಲದ ಈಶ್ವರಿ (32) ಎಂದು ಗುರುತಿಸಲಾಗಿದೆ. ಕಳೆದ ಭಾನುವಾರ (ಡಿ.8) ಈಶ್ವರಿಗೆ ಮಟಮಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಹಜ ಹೆರಿಗೆಯಾಗಿತ್ತು. ಹೆರಿಗೆಯಾಗಿ ಮನೆಗೆ ತೆರಳಿದಾಗ ರಕ್ತಸ್ರಾವ, ಜ್ವರ ಹಾಗೂ ಆಯಾಸದಿಂದಾಗಿ ಮತ್ತೆ ಮಟಮಾರಿ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಗಿತ್ತು. ಆದರೆ, ಅಲ್ಲಿನ ಸಿಬ್ಬಂದಿ ನಿರ್ಲಕ್ಷ್ಯ ಮಾಡಿದ್ದ ಹಿನ್ನೆಲೆ ರಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಶುಕ್ರವಾರ (ಡಿ.13) ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ.



ಸದ್ಯ ಮೃತಳ ಕುಟುಂಬಸ್ಥರು ಮಾನ್ವಿ ಪೊಲೀಸ್ ಠಾಣೆಯಲ್ಲಿ ದೂರು ನೀಡಲು ಮುಂದಾಗಿದ್ದು, ರಿಮ್ಸ್ ಆಸ್ಪತ್ರೆಗೆ ರವಾನಿಸುವ ಮುನ್ನ ಮಟಮಾರಿ ಆರೋಗ್ಯ ಕೇಂದ್ರದಲ್ಲಿ ವೈದ್ಯಕೀಯ ಸಿಬ್ಬಂದಿ ನಿರ್ಲಕ್ಯ ಮಾಡಿದ್ದಾರೆ. ಸರಿಯಾಗಿ ಸ್ಪಂದಿಸದ ಕಾರಣ ಸಾವನ್ನಪ್ಪಿರುವುದಾಗಿ ಆರೋಪಿಸಿದ್ದಾರೆ.

ಸಿಂಧನೂರಿನ ನಾಲ್ವರು ಬಾಣಂತಿಯರ ಸಾವಿನ ಬಳಿಕ ಕಳೆದ ಮೂರು ತಿಂಗಳಲ್ಲಿ ಜಿಲ್ಲೆಯಲ್ಲಿ ಒಟ್ಟು 9 ಬಾಣಂತಿಯರು ಸಾವನ್ನಪ್ಪಿರುವುದು ಬೆಳಕಿಗೆ ಬಂದಿತ್ತು. ಇದೀಗ ಮತ್ತೋರ್ವ ಬಾಣಂತಿ ಸಾವನ್ನಪ್ಪಿದ್ದು, ಮೃತರ ಸಂಖ್ಯೆ 10ಕ್ಕೆ ಏರಿದಂತಾಗಿದೆ.

### ಅತ್ಯಾಚಾರಕ್ಕೆ ಮಾವ ಯತ್ನ; ನಿರಾಕರಿಸಿದ್ದಕ್ಕೆ ಸೊಸೆಯ ಬರ್ಬರ ಹತ್ಯೆ

**ರಾಯಚೂರು:** ಅತ್ಯಾಚಾರಕ್ಕೆ ಮುಂದಾಗಿದ್ದ ಮಾವನನ್ನು ನಿರಾಕರಿಸಿದ್ದಕ್ಕೆ, ಸೊಸೆಯನ್ನು ಬರ್ಬರವಾಗಿ ಕೊಲೆಗೈದಿರುವ ಘಟನೆ ರಾಯಚೂರಿನ ಜುಲಮಗೇರಾ ಗ್ರಾಮದಲ್ಲಿ ನಡೆದಿದೆ. ಮೃತ ಮಹಿಳೆಯನ್ನು ದುಳ್ಳಮ್ಮ (27) ಎಂದು ಗುರುತಿ ಸಲಾಗಿದೆ. ಇದಕ್ಕೂ ಮುಂದೆ 2–3 ಬಾರಿ ಸೊಸೆಯ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ್ದ. ಗ್ರಾಮದ ಹಿರಿಯರು, ಕುಟುಂಬಸ್ಥರು ಆರೋಪಿ ರಾಮಲಿಂಗಯ್ಯಗೆ ಬೈದು ಬುದ್ಧಿ ಹೇಳಿದ್ದರು. ಆದರೂ ಈ ಬಾರಿ ಮನೆಯಲ್ಲಿ ಯಾರು ಇಲ್ಲದ ವೇಳೆ ಸೊಸೆಯ ಮೇಲೆ ಅತ್ಯಾಚಾರ ಎಸಗಲು ಮುಂದಾಗಿದ್ದ. ಈ ವೇಳೆ ಸೊಸೆ ನಿರಾಕರಿಸಿದ್ದು, ಸಲಾಕೆಯಿಂದ ತಲೆಗೆ ಹೊಡೆದು ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಘಟನೆ ಬಳಿಕ ಗ್ರಾಮದಿಂದ ಪರಾರಿಯಾಗಿದ್ದಾನೆ.



ಸದ್ಯ ಇಡಪನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

# ನಾವು 2ಎ ಮೀಸಲಾತಿ ಕೇಳಿಲ್ಲ, ಕಾಂಗ್ರೆಸ್ ಮಾಜಿ ಶಾಸಕನ ಅವಾಂತರ ಇದು

**ವಿಜಯಪುರ:** ನಾವು 2ಎ ಮೀಸಲಾತಿ ಕೇಳಿಲ್ಲ, ಕಾಂಗ್ರೆಸ್ ಮಾಜಿ ಶಾಸಕ ಮಾಡಿದ ಅವಾಂತರ ಇದು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.



ಜಿಲ್ಲೆಯಲ್ಲಿ ಮಾತನಾಡಿದ ಅವರು, ನಾವು ಆರಂಭದಿಂದಲೂ 2ಎ ಮೀಸಲಾತಿ ಕೇಳಿಲ್ಲ. ಕಾಂಗ್ರೆಸ್ ಮಾಜಿ ಶಾಸಕ, ಈಗ ಹಾಲಿ ಶಾಸಕ ಕೇಳಿದ್ದ. 2ಎದಲ್ಲಿ ಹೋದರೆ ಹಲವು ಸಮುದಾಯದಕ್ಕೆ ಅನ್ಯಾಯ ಆಗುತ್ತದೆ. ಮುಸ್ಲಿಮರಿಗೆ ನೀಡಿದ ಮೀಸಲಾತಿ ಅಸಂವಿಧಾನಿಕವಾಗಿದೆ. 7%ನಲ್ಲಿ ನಾವು ಹಂಚಿಕೊಂಡು ತಿನ್ನುತ್ತೇವೆ ಎಂದು ಹೇಳಿದ್ದೇವೆ. ಇನ್ನೂ ಮೇಲೆ ನಾವು 2ಎನಲ್ಲಿ ಮೀಸಲಾತಿ ಕೇಳುವುದಿಲ್ಲ. ಕಾಂಗ್ರೆಸ್ ಮಾಜಿ ಶಾಸಕ ಮಾಡಿದ ಅವಾಂತರ ಇದು. ಕಾಂಗ್ರೆಸ್ ಮಾಡಿದ ಕೆಲಸ ಇದಾಗಿದೆ. 2ಎ ದಲ್ಲಿ ಮೀಸಲಾತಿ ಕೇಳಿ ಕೈ-ಕಾಲು ಹಿಡಿಯುವುದು ಬೇಡ. ಬೇರೆ ಸಮುದಾಯದಕ್ಕೆ ನೀಡಿದ ಅಸಂವಿಧಾನಿಕ ಮೀಸಲಾತಿಯಲ್ಲಿ ನೀಡಲ್ಲ ಎಂದು ಕಿಡಿಕಾರಿದರು.

ಅದರಲ್ಲಿ ಕೇವಲ 7% ಇದೆ. ಅದು ಕೇವಲ ಪಂಚಮಸಾಲಿ, ಲಿಂಗಾಯತರಿಲ್ಲ, ಅದರಲ್ಲಿ ಮರಾಠರಿದ್ದಾರೆ, ವೈಷ್ಣವರಿದ್ದಾರೆ, ಕ್ರಿಶ್ಚಿಯನ್‌ರಿದ್ದಾರೆ, ಜೈನರಿದ್ದಾರೆ, ಕುರುಬರಿದ್ದಾರೆ. ನಾವು ತಕರಾರು ಮಾಡಿಲ್ಲ ಇರುವ 7%ನಲ್ಲಿ ನಾವು ಹಂಚಿಕೊಂಡು ತಿನ್ನುತ್ತೇವೆ ಎಂದು ಹೇಳಿದ್ದೇವೆ. ಈ ಕೈ ಹಿಡಿಯುವುದು, ಕಾಲು ಹಿಡಿಯುವಂತಹ ಹೇಳಿಕೆಗಳನ್ನ ನೀಡುತ್ತಿರುವುದು ಸಿದ್ದರಾಮಯ್ಯ. ಈ ರೀತಿ ಹೇಳಿಕೆ ನೀಡುವುದು ಸರಿಯಲ್ಲ. ಮೀಸಲಾತಿ ಕೊಡುವುದಿಲ್ಲ ಎನ್ನುವುದಕ್ಕಿಂತ ನಾವು ಬಿಟ್ಟು ಬಿಟ್ಟಿದ್ದೇವೆ. ಇನ್ನೂ ಮೇಲೆ ಸಿದ್ದರಾಮಯ್ಯ ಬಳಿ ನಾವು ಹೋಗುವುದಿಲ್ಲ ಎಂದು ಗುಡುಗಿದರು.

ಪಿಡಿಒ ನೇಮಕಾತಿ ಪರೀಕ್ಷೆಯಲ್ಲಿ ಪ್ರಶ್ನೆಪತ್ರಿಕೆ ವಿಳಂಬ ಪ್ರತಿಭಟನೆ ಮೇಲೆ ಕೇಸ್ ವಿಚಾರಕ್ಕೆ ಪ್ರತಿಕ್ರಿಯಿಸಿ ಪ್ರಶ್ನೆಪತ್ರಿಕೆ ಎಷ್ಟೊತ್ತಿಗೆ ತೆಗೆದುಕೊಂಡು ಬರುತ್ತಾರೆ ಎಂದು ನಾನು ವಿಡಿಯೋ ಸಮೇತ ಟ್ವೀಟ್ ಮಾಡಿದ್ದೇನೆ. ಉದ್ದೇಶಪೂರ್ವಕವಾಗಿ ತಮಗೆ ಬೇಕಾದವರನ್ನು ನೇಮಕಾತಿ ಮಾಡಲು ಇಡೀ ವ್ಯವಸ್ಥೆಯನ್ನು ಬುಡಮೇಲು ಮಾಡುತ್ತಿದ್ದಾರೆ. ಪಿಎಸ್‌ಐ ನೇಮಕಾತಿ ಹಗರಣ ಎಲ್ಲಿ ಹೋಯ್ತು? ಪ್ರಿಯಾಂಕ ಖರ್ಗೆ ಎಷ್ಟು ಜಿಗಿದಾಡುತ್ತಿದ್ದರು. ಈಗೇಕೆ ಪಿಎಸ್‌ಐ ಹಗರಣದ ಬಗ್ಗೆ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದರು.

ಇದರಲ್ಲಿ ಪ್ರಿಯಾಂಕ ಖರ್ಗೆ ಕೈ ಇರಬೇಕು ಎಂದು ನನಗೆ ಅನ್ನಿಸುತ್ತಿದೆ. ಅವರಿಗೆ ಸೇರಿದವರು ನೇಮಕಾತಿ ಆಗಿದ್ದಾರೆ ಎಂದು ನಮಗೂ ಗೊತ್ತಿದೆ. ಅದಕ್ಕೆ ಈಗ ಅವರು ಸುಮ್ಮನಿದ್ದಾರೆ. 150 ಕೋಟಿ ರೂ. ಬಗ್ಗೆ ಈಗ ಎಬ್ಬಿಸಿಕೊಂಡಿದ್ದಾರೆ. ಇದನ್ನು ತನಿಖೆ ಮಾಡಲ್ಲ, ತನಿಖೆಗೆ ಕೊಡಲ್ಲ ಸುಮ್ಮನೆ. ಅಷ್ಟೇ ಸಬ್ ಗೋಲ್‌ಮಾಲ್ ಹೈ ಎಂದರು.

## 39 ಸಚಿವರ ಪ್ರಮಾಣವಚನ

ಜೈಕುಮಾರ್ ಗೋರೆ ಬಿಜೆಪಿ ಕೋಟಾದಿಂದ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಗೋರ್ ಅವರು ಸತಾರಾ ಜಿಲ್ಲೆಯ ಮಾನ್ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಎನ್‌ಸಿಪಿ ನಾಯಕ ಮಾಣಿಕ್ರಾವ್ ಕೊಟ್ಕೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಅವರು ನಾಸಿಕ್‌ನ ಸಿನ್ನಾರ್ ಕ್ಷೇತ್ರದಿಂದ ಶಾಸಕರಾಗಿದ್ದಾರೆ. ನಾಲ್ಕನೇ ಬಾರಿಗೆ ಶಾಸಕರಾಗಿ ಗೆದ್ದಿದ್ದಾರೆ. ಅವರು ಮರಾಠ ಸಮುದಾಯದ ದೊಡ್ಡ ನಾಯಕ.

ಬಿಜೆಪಿ ಶಾಸಕ ಶಿವೇಂದ್ರ ರಾಜೇ ಭೋಸ್ಲೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ರಾಜೇ ಎನ್‌ಸಿಪಿಯಲ್ಲೂ ಇದ್ದರು. ಅವರ ತಂದೆ ಕೂಡ ಮೂರು ಬಾರಿ ಶಾಸಕರಾಗಿದ್ದಾರೆ. ಈ ಬಾರಿ ಅವರು ಸತಾರಾ ಕ್ಷೇತ್ರದಿಂದ ಚುನಾವಣೆಯಲ್ಲಿ ಗೆದ್ದಿದ್ದಾರೆ.

ಎನ್‌ಸಿಪಿ ನಾಯಕ ದತ್ತಾತ್ರೇಯ ಭರ್ನೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಅದಿತಿ ತತ್ಕರೆ ಕೂಡ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಅದಿತಿ ಹಿರಿಯ ನಾಯಕ ಸುನಿಲ್ ತಟ್ಕರೆ ಅವರ ಪುತ್ರಿ ಮತ್ತು ಈ ಹಿಂದೆಯೂ ಸಚಿವರಾಗಿದ್ದರು. ಕೈಗಾರಿಕಾ ಸಚಿವಾಲಯವನ್ನು ನಿಭಾಯಿಸಿದ್ದಾರೆ.

ಬಿಜೆಪಿ ನಾಯಕ ಆಶಿಶ್ ಶೇಲಾರ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಆಶಿಶ್ ಶೇಲಾರ್ ಮುಂಬೈ ಬಿಜೆಪಿ ಅಧ್ಯಕ್ಷ ಈ ಚುನಾವಣೆಯಲ್ಲಿ ಬಾಂದ್ರಾ ಪಶ್ಚಿಮದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಶಿವಸೇನೆ ನಾಯಕ ಶಂಭುರಾಜ್ ದೇಸಾಯಿ ಅವರು ಪಟಾಣ್ ಕ್ಷೇತ್ರದಿಂದ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಈ ಹಿಂದೆಯೂ ಸಚಿವರಾಗಿದ್ದರು. ಸತತ ಮೂರನೇ ಬಾರಿಗೆ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಬಿಜೆಪಿ ಮುಖಂಡ ಅಶೋಕ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ರಾಲೇಗಾಂವ್ ಕ್ಷೇತ್ರದಿಂದ ಉಕೆ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಬಿಜೆಪಿ ನಾಯಕ ಅತುಲ್ ಸಾವೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಸೇವ್ ಔರಂಗಾಬಾದ್ ಪೂರ್ವ ಕ್ಷೇತ್ರದ ಶಾಸಕರಾಗಿದ್ದಾರೆ. ಚುನಾವಣೆಯಲ್ಲಿ ಎಐಎಂಐಎಂ ಅಭ್ಯರ್ಥಿಯನ್ನು ಅತುಲ್ ಸೋಲಿಸಿದ್ದಾರೆ.

ಬಿಜೆಪಿ ನಾಯಕಿ ಪಂಕಜಾ ಮುಂಡೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಮುಂಡೆ ಅವರು ಮಹಾರಾಷ್ಟ್ರ ವಿಧಾನ ಪರಿಷತ್ತಿನ ಸದಸ್ಯರಾಗಿದ್ದಾರೆ. ಪಂಕಜಾ ಮುಂಡೆ ಚುನಾವಣೆಯಲ್ಲಿ ಸೋದರ ಸಂಬಂಧಿ ಧನಂಜಯ್ ಮುಂಡೆ ವಿರುದ್ಧ ಸೋತರು. ಬೀಡಿನ ಪರ್ಲಿ ಕ್ಷೇತ್ರದಿಂದ ಶಾಸಕರಾಗಿದ್ದರು.

ಬಿಜೆಪಿ ನಾಯಕ ಜೈಕುಮಾರ್ ರಾವಲ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ರಾವಲ್ ಅವರು ರಾಜ್ಯ ಬಿಜೆಪಿ ಅಧ್ಯಕ್ಷರಾಗಿದ್ದರು. ಅವರು ಮಹಾರಾಷ್ಟ್ರ ಬಿಜೆಪಿಯ ಹಿರಿಯ ನಾಯಕ. ಈ ಹಿಂದೆಯೂ ಸಚಿವರಾಗಿದ್ದರು. ಶಿಂಡಖೇಡ ಕ್ಷೇತ್ರದ ಶಾಸಕರಾಗಿದ್ದಾರೆ.

ಶಿವಸೇನೆ ಶಿಂಧೆ ಬಣದ ನಾಯಕ ಉದಯ್ ಸಾಮಂತ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಸಮಂತ್ ಅವರನ್ನು ಕೊಂಕಣ ಪ್ರದೇಶದ ದೊಡ್ಡ ನಾಯಕ ಎಂದು ಪರಿಗಣಿಸಲಾಗಿದೆ. ರತ್ನಗಿರಿ ಶಾಸಕ ಸ್ಥಾನದಿಂದ ಶಾಸಕರು ಆಯ್ಕೆಯಾಗಿದ್ದಾರೆ.

ಬಿಜೆಪಿ ಶಾಸಕ ಮಂಗಲ್ ಪ್ರಭಾತ್ ಲೋಢಾ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಲೋಢಾ ಅವರು ಮಹಾರಾಷ್ಟ್ರದ ಶ್ರೀಮಂತ ಶಾಸಕರಲ್ಲಿ ಒಬ್ಬರಾಗಿದ್ದಾರೆ. ಮೂಲತಃ ರಾಜಸ್ಥಾನದಿಂದ ಬಂದವರು. ಮಲಬಾರ್ ಹಿಲ್ ಕ್ಷೇತ್ರದ ಶಾಸಕರಾಗಿದ್ದಾರೆ.

ಎನ್‌ಸಿಪಿ ಅಜಿತ್ ಪವಾರ್ ಬಣದ ನಾಯಕ ಧನಂಜಯ್ ಮುಂಡೆ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಛತ್ರಪತಿ ಸಂಭಾಜಿ ನಗರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಮುಂಡೆ ಪರಲಿ ಕ್ಷೇತ್ರದಿಂದ ಎನ್‌ಸಿಪಿ ಶಾಸಕರಾಗಿದ್ದಾರೆ.

ಶಿವಸೇನೆ ಶಾಸಕ ಸಂಜಯ್ ರಾಥೋಡ್ ಕೂಡ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಅವರು ಉದ್ಧವ್-ಶಿಂಧೆ ಸರ್ಕಾರದಲ್ಲಿ ಸಚಿವರಾಗಿದ್ದರು. ಈ ಬಾರಿ ಡಿಗ್ರಾಸ್ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅವರು ವಿದರ್ಭ ಸೀಟಿನೊಂದಿಗೆ ವಿಶೇಷ ಸಂಪರ್ಕವನ್ನು ಹೊಂದಿದ್ದಾರೆ.

ಶಿವಸೇನೆ ಶಾಸಕ ದಾದಾ ಭೂಸೆ ಕೂಡ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಭೂಸೆ ಈ ಹಿಂದೆಯೂ ಸಚಿವರಾಗಿದ್ದರು.

ಮೊದಲನೇ ಪುಟದಿಂದ...

ಈ ಬಾರಿ ಮಾಲೆಗಾಂವ್ ಹೊರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅವರು ಉತ್ತರ ಮಹಾರಾಷ್ಟ್ರದ ನಾಯಕ.

ಶಿವಸೇನೆ ಶಾಸಕ ಗಣೇಶ್ ನಾಯ್ಕ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ನಾಯಕ್ 2019 ರಲ್ಲಿ ಬಿಜೆಪಿ ಸೇರಿದ್ದರು, ಆದರೆ ನಂತರ ಶಿವಸೇನೆ ಸೇರಿದ್ದರು.

ಶಿವಸೇನೆ ಶಾಸಕ ಗುಲಾಬ್ರಾವ್ ಪಾಟೀಲ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಜಲಗಾಂವ್ ಗ್ರಾಮಾಂತರ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಹಿಂದಿನ ಸರ್ಕಾರದಲ್ಲೂ ಸಚಿವರಾಗಿದ್ದರು. ಉತ್ತರ ಮಹಾರಾಷ್ಟ್ರದಿಂದ ಬನ್ನಿ.

ಬಿಜೆಪಿ ನಾಯಕ ಗಿರೀಶ್ ಮಹಾಜನ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಫಡ್ನವೀಸ್‌ಗೆ ನಿಕಟವಾಗಿರುವ ನಾಯಕರಲ್ಲಿ ಗಿರೀಶ್ ಮಹಾಜನ್ ಅವರನ್ನು ಪರಿಗಣಿಸಲಾಗಿದೆ. ಅವರು ಮಹಾರಾಷ್ಟ್ರದ ಜಾಮ್ನರ್ ಕ್ಷೇತ್ರದಿಂದ ಶಾಸಕರಾಗಿದ್ದಾರೆ.

ಬಿಜೆಪಿ ಮುಖಂಡ ಚಂದ್ರಕಾಂತ್ ಪಾಟೀಲ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಪಾಟೀಲ್ ಮಹಾರಾಷ್ಟ್ರದ ಕೊತ್ರುಡ್ ಕ್ಷೇತ್ರದ ಶಾಸಕರಾಗಿದ್ದಾರೆ. ಪಾಟೀಲ ಬಿಜೆಪಿಯ ಹಿರಿಯ ನಾಯಕರಲ್ಲಿ ಕಣಕ್ಕಿಳಿದಿದ್ದಾರೆ.

ಎನ್‌ಸಿಪಿ ನಾಯಕ ಹಸನ್ ಮುಶ್ರೀಫ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಮುಶ್ರೀಫ್ ಕೊಲ್ಲಾಪುರದ ಕಾಗಲ್ ನಿಂದ ಚುನಾವಣೆಯಲ್ಲಿ ಗೆದ್ದಿದ್ದಾರೆ. ಅಜಿತ್ ಜೊತೆ ಬಂಡಾಯವೆದ್ದವರಲ್ಲಿ ಒಬ್ಬರು. ಹಿಂದಿನ ಸರ್ಕಾರದಲ್ಲೂ ಸಚಿವರಾಗಿದ್ದರು.

ಬಿಜೆಪಿ ನಾಯಕ ರಾಧಾಕೃಷ್ಣ ವಿಖೆ ಪಾಟೀಲ್ ಕೂಡ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಪಾಟೀಲ್ ಎರಡನೇ ಬಾರಿಗೆ ಸಚಿವರಾಗಿದ್ದಾರೆ. ಶಿರಸಿ ಕ್ಷೇತ್ರದಿಂದ ವಿಖೆ ಪಾಟೀಲ್ ಗೆಲುವು ಸಾಧಿಸಿದ್ದಾರೆ.

ಶಿವಸೇನೆ ಕೋಟಾದಿಂದ ಸಚಿವರಾದವರು ಏಕನಾಥ್ ಶಿಂಧೆ, ಸಂಜಯ್ ಶಿರ್ಸತ್, ಗುಲಾಬ್ರಾವ್ ಪಾಟೀಲ್, ದಾದಾ ಭೂಸೆ, ಉದಯ್ ಸಮಂತ್, ಶಂಭುರಾಜ್ ದೇಸಾಯಿ, ಯೋಗೇಶ್ ಕದಮ್, ಪ್ರಕಾಶ್ ಅಬಿತ್ಕರ್, ಪ್ರತಾಪ್ ಸರ್ನಾಯಕ್, ಆಶಿಶ್ ಜೈಸ್ವಾಲ್.

ಎನ್‌ಸಿಪಿ ಕೋಟಾದಿಂದ ಸಚಿವರಾದವರು ನರಹರಿ ಜಿರ್ವಾ, ಹಸನ್ ಮುಶ್ರೀಫ್, ಅನಿಲ್ ಭೈದಾಸ್ ಪಾಟೀಲ್, ಅದಿತಿ ತಟ್ಕರೆ, ಬಾಬಾಸಾಹೇಬ್ ಪಾಟೀಲ್, ದತ್ತಾ ಭರ್ನೆ, ಸನಾ ಮಲಿಕ್, ಇಂದ್ರನೀಲ್ ನಾಯಕ್, ಧನಂಜಯ್ ಮುಂಡೆ.

### ಆರೋಪಿಗಳು

ಕೊನೆಗೆ ಪೊಲೀಸರು ಮನೆಯ ಬಾಗಿಲಿಗೆ ನೋಟಿಸ್ ಅಂಟಿಸಿದ್ದರು. ಆದರೆ, ಆರೋಪಿಗಳನ್ನು ವಶಕ್ಕೆ ಪಡೆಯುವ ಪಣ ತೊಟ್ಟಿದ್ದ ಕರ್ನಾಟಕ ಪೊಲೀಸರು ಆರೋಪಿಗಳಿಗಾಗಿ ಬಲೆ ಬೀಸಿದ್ದರು.

**ಫೋನ್ ಕಾಲ್ ನಿಂದ ಬಲೆಗೆ ಬಿದ್ದ ಆರೋಪಿಗಳು:** ಆರೋಪಿಗಳು ದಿನಕ್ಕೊಂದು ಸ್ಥಳ ಬದಲಾಯಿಸುತ್ತಿದ್ದರು. ಆರೋಪಿಗಳು ದೂರವಾಣಿ ಮೂಲಕ ಯಾರೆಲ್ಲ ಜೊತೆ ಸಂಪರ್ಕದಲ್ಲಿದ್ದಾರೆ ಎಂಬುವುದರ ಮಾಹಿತಿ ಪಡೆದು, ಅವರ ಮೇಲೆಯೂ ನಿಗಾ ಇಟ್ಟಿದ್ದರು. ಆರೋಪಿಗಳು ಬರೀ ವಾಟ್ಸಪ್ ಕಾಲ್ ಮಾಡುತ್ತಿದ್ದರು. ಇದರಿಂದ ಅವರನ್ನು ಪತ್ತೆ ಹಚ್ಚುವುದು ಕಷ್ಟವಾಗಿತ್ತು. ಆದರೆ, ಆ ಒಂದು ಕಾಲ್ ನಿಂದ ಪೊಲೀಸರ ಬಲೆಗೆ ಬಿದ್ದರು.

ಎ1 ನಿಖಿತಾ ಸ್ಥಳ ಬದಲಾಯಿಸುವಾಗ ಮಿಸ್ ಆಗಿ ಪರಿಚಯಸ್ಥರಿಗೆ ಕಾಲ್ ಮಾಡಿದ್ದಳು. ಆಗ, ನಿಖಿತಾ ಇರುವ ಸ್ಥಳ ಪೊಲೀಸರಿಗೆ ಗೊತ್ತಾಗಿದೆ. ನಿಖಿತಾ ಮೊಬೈಲ್ ಲೊಕೇಶನ್ ಆಧರಿಸಿ ಬೆನ್ನು ಹತ್ತಿದ ಪೊಲೀಸರು ಹರಿಯಾಣದ ಗುರುಗ್ರಾಮ ತಲುಪಿದ್ದಾರೆ. ಗುರುಗ್ರಾಮದಲ್ಲಿ ನಿಕಿತಾ ರೂಂ ಒಂದರಲ್ಲಿ ಒಂಟಿಯಾಗಿದ್ದಳು.

ಅಲ್ಲಿ ಪೊಲೀಸರು ನಿಖಿತಾಳನ್ನು ವಶಕ್ಕೆ ಪಡೆದರು. ಬಳಿಕ, ನಿಖಿತಾಳ ಕಡೆಯಿಂದಲೇ ಆಕೆಯ ತಾಯಿ ಮತ್ತು ತಮ್ಮನಿಗೆ ಕರೆ ಮಾಡಿಸಿ, ಪ್ರಯಾಗ್ ರಾಜ್ ನಲ್ಲಿರುವ ಬಗ್ಗೆ ಪೊಲೀಸರು ಮಾಹಿತಿ ಪಡೆದಿದ್ದರು. ಬಳಿಕ ಅವರ ಮೊಬೈಲ್ ಟವರ್ ಲೊಕೇಷನ್ ಆಧರಿಸಿ ಸ್ಥಳಕ್ಕೆ ತೆರಳಿ ಎ2 ನಿಶಾ ಸಿಂಘಾನಿಯಾ ಮತ್ತು ಎ3 ಸಹೋದರ ಅನುರಾಗ್ ನನ್ನು ಪ್ರಯಾಗ್ ರಾಜ್ ನಲ್ಲಿ ಬಂಧಿಸಿದರು.

ಪೊಲೀಸರು ಟ್ರಾನ್ಸಿಸ್ಟ್ ವಾರೆಂಟ್ ಪಡೆಯದೇ ಕರ್ನಾಟಕಕ್ಕೆ ಕರೆತಂದಿದ್ದಾರೆ ಎನ್ನಲಾಗಿದೆ. ಬೇರೆ ರಾಜ್ಯದಲ್ಲಿರುವ ಆರೋಪಿಗಳನ್ನು ಬಂಧನ ಮಾಡಿದ ಬಳಿಕ, ಅಲ್ಲಿನ ಸ್ಥಳೀಯ ನ್ಯಾಯಾಲಯದಿಂದ ಅನುಮತಿ ಪಡೆಯಬೇಕು. ಇಲ್ಲವಾದರೆ ಬಂಧನ ಮಾಡಿದ 24 ಗಂಟೆಯ ಒಳಗಾಗಿ ಇಲ್ಲಿನ ನ್ಯಾಯಾಲಯದ ಮುಂದೆ ಹಾಜರುಪಡಿಸಬೇಕು.

ಮಾರತ್ತಹಳ್ಳಿ ಪೊಲೀಸರು ಆರೋಪಿಗಳನ್ನು ಬಂಧಿಸಿ, ಅಲ್ಲಿನ ನ್ಯಾಯಾಲಯದ ಮುಂದೆ ಹಾಜರು ಪಡಿಸದೆ ತಕ್ಷಣವೇ ಟಿಕೆಟ್ ಖರೀದಿಸಿ ವಿಮಾನ ಮೂಲಕ ಬೆಂಗಳೂರಿಗೆ ಕರೆತಂದಿದ್ದಾರೆ. ಇಲ್ಲಿ, 24 ಗಂಟೆ ಕಳೆಯುವುದರ ಒಳಗಾಗಿ ಹೇಳಿಕೆ ದಾಖಲಿಸಿ ನ್ಯಾಯಾಧೀಶರ ಮುಂದೆ ಹಾಜರುಪಡಿಸಿದರು.

ಬಳಿಕ ನ್ಯಾಯಲಯ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಇನ್ನು, ಅವಶ್ಯಕತೆ ಇದ್ದರೇ ಬಾಡಿ ವಾರೆಂಟ್ ಮೂಲಕ ಆರೋಪಿಗಳನ್ನು ಪೊಲೀಸರು ಕಸ್ಟಡಿಗೆ ಪಡೆಯಬಹುದಾಗಿದೆ. ಪೊಲೀಸರು ಮೂವರ ಮೊಬೈಲ್ ಫೋನ್ ಗಳನ್ನು ವಶಕ್ಕೆ ಪಡೆದಿದ್ದಾರೆ. ಇತ್ತ, ಜಾಮೀನು ಕೋರಿ ಅರ್ಜಿ ಸಲ್ಲಿಕೆಗೆ ಮೂವರು ಆರೋಪಿಗಳ ಸಿದ್ದತೆ ನಡೆಸಿದ್ದಾರೆ.

### 6 ಮಂದಿ ಸಾವು

ಸ್ಥಳೀಯರ ನೆರವಿನಿಂದ ಗಂಟೆಗಟ್ಟಲೆ ಪ್ರಯತ್ನದ ಬಳಿಕ ಕಾರಿನಲ್ಲಿ ಸಿಲುಕಿದ್ದವರನ್ನು ಹೊರ ತೆಗೆಯಲಾಯಿತು.

ಮಾಹಿತಿ ಪ್ರಕಾರ ಕಾರಿನಲ್ಲಿದ್ದವರು ದುಂಡಿಯ ಕುಂಭಕರ್ ಎಂಬಲ್ಲಿನ ಸಂಬಂಧಿಕರ ಮನೆಯಲ್ಲಿ ಕಾರ್ಯಕ್ರಮಕ್ಕೆ ಹಾಜರಾಗಿ ತಮ್ಮ ಗ್ರಾಮ ಗುರೇಡಕ್ಕೆ ವಾಪಸಾಗುತ್ತಿದ್ದ ವೇಳೆ ದುಂಡಿ ಪೊಲೀಸ್ ಠಾಣೆ ವ್ಯಾಪ್ತಿಯ ಭಾನು ಪ್ರತಾಪುರ-ದಳ್ಳಿ ರಾಜಹಾರ ಮುಖ್ಯರಸ್ತೆಯ ಚೌರಪದವ್ ಬಳಿ ಅವರ ಕಾರಿಗೆ ಟ್ರಕ್ ಡಿಕ್ಕಿ ಹೊಡೆದಿದೆ. ಪ್ರದೇಶ, ಮತ್ತು ಆರು ಜನರು ಸ್ಥಳದಲ್ಲೇ ಸಾವನ್ನಪ್ಪಿದರು.

### ಪೊಲೀಸ್ ಕಸ್ಟಡಿ ಅಂತ್ಯ

ಶಾಲಾ ಕಾಲೇಜುಗಳಿಗೂ ಮೆಡಿಕಲ್ ಕಾಲೇಜುಗಳ ಲ್ಯಾಬ್ ಗಳಿಗೂ ಸೋಡಿಯಂ ಮಾರಾಟ ಮಾಡುವ ಅಂಗಡಿ ಇದಾಗಿದೆ. ಇಲ್ಲಿಂದ ಡ್ರೋನ್ ಪ್ರತಾಪ್ ತನ್ನ ಸ್ನೇಹಿತ ಪ್ರಜ್ವಲ್ ಮೂಲಕ ಸೋಡಿಯಂ ಖರೀದಿ ಮಾಡಿದ್ದ ಎಂಬುದು ವಿಚಾರಣೆ ವೇಳೆ ಗೊತ್ತಾಗಿದೆ.

ತಡರಾತ್ರಿಯೇ ಮಿಡಿಗೇಶಿ ಪೊಲೀಸರು ಕ್ಯಾಮರಾಮನ್ ವಿನಯ್ ಹಾಗೂ ಮತ್ತೊಬ್ಬ ಸ್ನೇಹಿತ ಪ್ರಜ್ವಲ್ ನನ್ನು ಬಂಧಿಸಿ ಸಂಪೂರ್ಣ ವಿಚಾರಣೆ ನಡೆಸುತ್ತಿದ್ದಾರೆ. ಜಿತೇಂದ್ರ ಕುಮಾರ್ ಜೈನ್ ಗೆ ಪೊಲೀಸರು ನೋಟಿಸ್ ನೀಡಲು ಸಿದ್ಧತೆ ಮಾಡಿದ್ದು, ಅವರನ್ನೂ ಬಂಧಿಸುವ ಸಾಧ್ಯತೆ ಇದೆ.

**ಪೊಲೀಸ್ ಕಸ್ಟಡಿ ಅಂತ್ಯ:** ಇಂದಿಗೆ ಪೊಲೀಸ್ ಕಸ್ಟಡಿ ಅಂತ್ಯವಾಗಲಿದ್ದು, ಬೆಳಿಗ್ಗೆ 11.30 ಕ್ಕೆ ಮಧುಗಿರಿ ನ್ಯಾಯಾಲಯಕ್ಕೆ ಡ್ರೋನ್ ಪ್ರತಾಪ್, ಕ್ಯಾಮರಾಮನ್ ವಿನಯ್ ಹಾಗೂ ಪ್ರಜ್ವಲ್ ರನ್ನು ಹಾಜರು ಪಡಿಸಲಾಗುತ್ತಿದೆ. ಸದ್ಯಕ್ಕೆ ಒಂದು ತಿಂಗಳ ವರೆಗೂ ಜಾಮೀನು ಸಿಗುವುದು ಅನುಮಾನ ಎನ್ನಲಾಗಿದೆ.

Explosive substance act 1908 ಹಾಗೂ ಸೆಕ್ಷನ್ 3 ಜೊತೆಗೆ ಃಓಖ 288 ಅಡಿ ಎಫ್ ಐಆರ್ ದಾಖಲಾಗಿದ್ದು, ಆರೋಪ ಸಾಬೀತಾದರೆ ಡ್ರೋನ್ ಪ್ರತಾಪ್ ಕನಿಷ್ಠ 10 ವರ್ಷಗಳ ಕಾಲ ಜೈಲು ಶಿಕ್ಷೆಗೆ ಗುರಿಯಾಗಬಹುದು.

### ಫ್ಲೈಓವರ್

ಕೇಂದ್ರ ಸರ್ಕಾರ ಈಗಾಗಲೇ ಫೇಸ್ 3 ನ ಕಾರಿಡಾರ್-1 ಜೆಪಿನಗರ ನಾಲ್ಕನೇ ಹಂತದಿಂದ ಕೆಂಪಾಪುರ ( 32.15) ಕಿಮೀ ಮತ್ತು ಕಾರಿಡಾರ್ 2 ಹೊಸಹಳ್ಳಿ ಟು ಕಡಬಗೆರೆ (12.5 ) ಅರೆಂಜ್ ಮಾರ್ಗಕ್ಕೆ ಅನುಮೋದನೆ ನೀಡಿದೆ. ಈ ಎರಡು ಕಾರಿಡಾರ್ ಬರೋಬ್ಬರಿ 15,611 ಕೋಟಿ ರುಪಾಯಿ ವೆಚ್ಚದಲ್ಲಿ ನಿರ್ಮಾಣ ಆಗಲಿದೆ. ಆರ್ ವಿ ರೋಡ್ ಟು ಬೊಮ್ಮಸಂದ್ರ ಯೆಲ್ಲೋ ಮಾರ್ಗದಲ್ಲಿ ನಿರ್ಮಾಣವಾಗಿರುವ ಡಬಲ್ ಡೆಕ್ಕರ್ ಫ್ಲೈ ಓವರ್ ಸಿಲ್ಕ್ ಬೋರ್ಡ್ ಟ್ರಾಫಿಕ್ ಗೆ ಪರಿಹಾರ ನೀಡಿದರೆ, ಹೊಸದಾಗಿ ನಿರ್ಮಾಣವಾಗಲಿರುವ ಎರಡು ಡಬಲ್ ಡೆಕ್ಕರ್ ಫ್ಲೈ ಓವರ್ ಗಳು ಕನಕಪುರ ರೋಡ್ ಜಂಕ್ಷನ್ ಮತ್ತು ಕಾಮಾಕ್ಯ ಜಂಕ್ಷನ್ ಟ್ರಾಫಿಕ್ ಗೆ ಮುಕ್ತಿ ಹಾಡಲಿವೆ. ಈ ಎರಡು ಜಂಕ್ಷನ್ ನಲ್ಲೂ ಪ್ರತಿದಿನ ಸಾವಿರಾರು ವಾಹನ ಸವಾರರು ನರಕಯಾತನೆ ಅನುಭವಿಸುತ್ತಿದ್ದು,ಈ ಎರಡು ಡಬಲ್ ಡೆಕ್ಕರ್ ಫ್ಲೈ ಓವರ್ ಗಳಿಂದ ವಾಹನ ಸವಾರರು ನಿಟ್ಟುಸಿರು ಬಿಡಲಿದ್ದಾರೆ.

ಒಟ್ಟಿನಲ್ಲಿ ರಾಗಿಗುಡ್ಡ ಟು ಸೆಂಟ್ರಲ್ ಸಿಲ್ಕ್ ಬೋರ್ಡ್ ಡಬಲ್ ಡೆಕ್ಕರ್ ಫ್ಲೈ ಓವರ್ ನಿಂದ ಆ ಭಾಗದಲ್ಲಿ ದೊಡ್ಡ ಮಟ್ಟದ ಟ್ರಾಫಿಕ್ ಸಮಸ್ಯೆಗೆ ಪರಿಹಾರ ದೊರೆತಿದ್ದು, ಅದರಿಂದಾಗಿ ಇದೀಗ ನಮ್ಮ ಮೆಟ್ರೋ ಮತ್ತೆರಡು ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣ ಮಾಡಲು ಮುಂದಾಗಿದೆ.

### 9 ಸಾವಿರ ಶಿಕ್ಷಕರು!

ಇತ್ತೀಚೆಗೆ, ಸರ್ಕಾರವು ನಿಯಮಗಳಲ್ಲಿ ಮಾಡಿದ ಬದಲಾವಣೆಗಳಿಂದ ಸುಮಾರು ಒಂದು ಲಕ್ಷ ಶಿಕ್ಷಕರಿಗೆ ಹಿಂಬಡ್ತಿ ನೀಡಲಾಯಿತು. 2016 ರ ಮೊದಲು ನೇಮಕಗೊಂಡವರು 1ರಿಂದ 5ನೇ ತರಗತಿಗೆ ಮಾತ್ರ ಬೋಧಿಸುವಂತೆ ಸರಕಾರ ಹೇರಿರುವ ನಿರ್ಧಾರದಿಂದ ಹಲವು ಶಿಕ್ಷಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ಅಭಿವೃದ್ಧಿ ಶಿಕ್ಷಣತಜ್ಞ ನಿರಂಜನಾರಾಧ್ಯ, ವಿಪಿ ಹೇಳಿದ್ದಾರೆ.

ಇಲಾಖೆಯಲ್ಲಿ 35,000 ಅತಿಥಿ ಶಿಕ್ಷಕರಿದ್ದು, ಅವರು 21.8 ಲಕ್ಷ ವಿದ್ಯಾರ್ಥಿಗಳಿಗೆ ಪಾಠ ಮಾಡುತ್ತಿದ್ದಾರೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆದರೆ, ಅತಿಥಿ ಶಿಕ್ಷಕರ ಮೇಲಿನ ಅವಲಂಬನೆಯನ್ನು ಶಿಕ್ಷಣ ತಜ್ಞರು ಆಕ್ಷೇಪಿಸಿದ್ದಾರೆ. ಜತೆಗೆ, ಇದು ದೋಷಪೂರಿತ ವಿಧಾನ ಎಂದಿದ್ದಾರೆ.

### ಐವಿಎಫ್

ಮಕ್ಕಳನ್ನು ಪಡೆಯಲು ಸಾಧ್ಯವಾಗದೇ ಸಂಕಷ್ಟ ಪಡುತ್ತಿದ್ದಾರೆ. ಇತಂಹ ಪೋಷಕರಿಗೆ ಈಗ ಆರೋಗ್ಯ ಇಲಾಖೆ ಗಿಫ್ಟ್ ನೀಡಲು ಮುಂದಾಗಿದೆ.

ಪ್ರಾರಂಭಿಕ ಹಂತದಲ್ಲಿ ಆರೋಗ್ಯ ಇಲಾಖೆ ಮಲ್ಲೇಶ್ವರಂ ಕೆಸಿ ಜನರಲ್ ಆಸ್ಪತ್ರೆಯಲ್ಲಿ ಉಚಿತ ಐವಿಎಫ್ ಚಿಕಿತ್ಸೆ ನೀಡಲು ಚಿಂತನೆ ಮಾಡಿದ್ದು, ಈಗ ಈ ವಿಚಾರವಾಗಿ ಸಮಗ್ರವಾದ ವರದಿಯೂ ತಜ್ಞರಿಂದ ಸಲ್ಲಿಕೆಯಾಗಿದೆ.

ಇಷ್ಟು ದಿನ ಶ್ರೀಮಂತ ವರ್ಗದ ಜನರಿಗೆ ಮಾತ್ರ ಸಿಗುತ್ತಿದ್ದ ಖಗಿಈ ಚಿಕಿತ್ಸೆ, ಇನ್ಮುಂದೆ ಬಡ ಹಾಗೂ ಮಧ್ಯಮ ವರ್ಗದವರಿಗೂ ಸಿಗಲಿದೆ ಎಂದು ಕೆಸಿ ಜನರಲ್ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ, ಹಾಗೂ ಐವಿಎಫ್ ಎಕ್ಸಪರ್ಟ್ ಡಾ ಶಶಿಕಲಾ ತಿಳಿಸಿದ್ದಾರೆ.

ಐವಿಎಫ್ ಚಿಕಿತ್ಸೆ ಎಂದರೇನು

ಐವಿಎಫ್ ಚಿಕಿತ್ಸೆ ಎಂದರೆ, ಅಂಡಾಣು ಮತ್ತು ವೀರ್ಯಾಣುವನ್ನು ದೇಹದ ಹೊರಗೆ ಫಲಿಸುವಂತೆ ಮಾಡುವುದು ಮತ್ತು ನಂತರ ಮಹಿಳೆಯ ಗರ್ಭಾಶಯಕ್ಕೆ ಇಂಜೆಕ್ಟ್ ಮಾಡುವ ಪ್ರಕ್ರಿಯೆಯಾಗಿದೆ.

ಒಟ್ಟಿನಲ್ಲಿ ಇಷ್ಟು ದಿನ ಬಡವರಿಗೆ ನಿಲುಕದ ಕನಸಾಗಿದ್ದ ಐವಿಎಫ್ ಚಿಕಿತ್ಸೆ ಇನ್ನು ಸರ್ಕಾರಿ ಆಸ್ಪತ್ರೆಗಳಲ್ಲಿಯೂ ಸಿಗಲಿದ್ದು, ಸಂಕಷ್ಟದಲ್ಲಿರುವ ಬಡ ಪೋಷಕರಿಗೆ ವರದಾನವಾಗಲಿದೆ. ಕೆಸಿಜಿ ಆಸ್ಪತ್ರೆಯ ಹೊಸ ಕಟ್ಟಡದಲ್ಲಿಯೂ ಐವಿಎಫ್ ಘಟಕಕ್ಕೂ ಸ್ಥಳವಕಾಶ ನೀಡಲು ಸರ್ಕಾರ ಮುಂದಾಗಿದೆ.

### ದುರಹಂಕಾರಿ

ಮುಖೇಶ್ ಖನ್ನಾ ಅವರು 'ಮಹಾಭಾರತ' ಟಿವಿ ಶೋನಲ್ಲಿ ಭೀಷ್ಮ ಪಿತಾಮಹ ಪಾತ್ರದಲ್ಲಿ ಹೆಸರುವಾಸಿಯಾಗಿದ್ದಾರೆ. ಅಲ್ಲದೆ, 'ಶಕ್ತಿಮಾನ್' ಪಾತ್ರಕ್ಕಾಗಿ ಅವರು ಇಂದಿಗೂ ನೆನಪಿನಲ್ಲಿ ಉಳಿಯುತ್ತಾರೆ. ಇತ್ತೀಚೆಗೆ ಅವರು ಕಪಿಲ್ ಶರ್ಮಾ ಅವರ ಕಾಮಿಡಿ ಶೋ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ

ಕಪಿಲ್ ಶರ್ಮಾ ಅವರ ಶೋನಲ್ಲಿ ಕಾಣಿಸಿಕೊಳ್ಳಲು ಅವರನ್ನು ಎಂದಿಗೂ ಸಂಪರ್ಕಿಸಲಾಗಿಲ್ಲ ಮತ್ತು ಅವರನ್ನು ಸಂಪರ್ಕಿಸಿದರೂ ನಿರಾಕರಿಸುತ್ತಿದ್ದೆ ಎಂದು ನಟ ಹೇಳುತ್ತಾರೆ. ಕಪಿಲ್ ಅವರ ಕಾರ್ಯಕ್ರಮವನ್ನು ಮುಖೇಶ್ ಖನ್ನಾ ಕೂಡ ಅಶ್ಲೀಲ ಎಂದು ಕರೆದಿದ್ದಾರೆ.

'ಕಪಿಲ್ ಶರ್ಮಾ ಅವರ ಸಮಸ್ಯೆ ಏನೆಂದು ನನಗೆ ತಿಳಿದಿಲ್ಲ. ಆದರೆ ಅವರು ನನ್ನನ್ನು ಸಂಪರ್ಕಿಸಲಿಲ್ಲ. ಬಹುಶಃ ಅಹಂಕಾರ ಮತ್ತು ಸಂಕೋಚದ ಕಾರಣ ಇರಬಹುದು. ಜನರು ಅವರ ಪ್ರದರ್ಶನವನ್ನು ನೋಡಿ ನಗುತ್ತಾರೆ. ಆದರೆ ನನಗೆ ಅದರಲ್ಲಿ ಯಾವುದೇ ಸಭ್ಯತೆ ಕಾಣಿಸುತ್ತಿಲ್ಲ. ಈ ಕಾರ್ಯಕ್ರಮ ನೋಡೋಕೆ ಆಗಲ್ಲ' ಎಂದು ಹೇಳಿದ್ದಾರೆ.

**ಶ್ರೀರಾಮನ ಪಾತ್ರಧಾರಿಗೆ ಅವಮಾನ ಮಾಡಿದ ಆರೋಪ:** ಅರುಣ್ ಗೋವಿಲ್ ಈ ಮೊದಲು ಕಪಿಲಶ್ ಶರ್ಮಾ ಶೋಗೆ ಬಂದಿದ್ದರು. 'ನೀವು ಸ್ನಾನ ಮಾಡುತ್ತೀರಾ' ಎಂದು ಕಪಿಲ್ ಶರ್ಮಾ ಅರುಣ್ ಗೋವಿಲ್ ಗೆ ಕೇಳಿದ್ದರು. ಇದನ್ನು ಕೇಳಿದ ಅರುಣ್ ಗೋವಿಲ್ ಸದ್ದಿಲ್ಲದೆ ನಗುತ್ತಾ ಕುಳಿತಿದ್ದರು. 'ನಾನು ಅಲ್ಲಿದ್ದಿದ್ದರೆ ಇರಿಟೇಟ್ ಆಗುತ್ತಿತ್ತು. ಇಷ್ಟು ಗೌರವ ಇರುವ ವ್ಯಕ್ತಿಗೆ ಇಂತಹ ಪ್ರಶ್ನೆಗಳನ್ನು ಕೇಳುತ್ತಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಬೆಳ್ಳಂ ಬೆಳಗ್ಗೆ ಸದ್ದು ಮಾಡಿದ ಬೆಂಗಳೂರು ಪೊಲೀಸರ ಬಂದೂಕು, ರೌಡಿ ಶೀಟರ್‌ಗೆ ಗುಂಡೇಟು



**ಆನೆಕಲ್:** ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲೂಕಿನ ಮಾಯಸಂದ್ರ ಬಳಿ ಜಿಗಣಿ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಮಂಜುನಾಥ್ ಅವರು ಆತ್ಮರಕ್ಷಣೆಗಾಗಿ ರೌಡಿಶೀಟರ್ ಬೆಸ್ತಮಾನಹಳ್ಳಿ ಲೋಕೇಶ್ ಅಲಿಯಾಸ್ ಲೋಕಿ ಕಾಲಿಗೆ ಗುಂಡು ಹೊಡೆದು ಬಂಧಿಸಿದ್ದಾರೆ. ಇಂದು (ಡಿಸೆಂಬರ್ 16) ಬೆಳಗಿನ ಜಾವ ಘಟನೆ ನಡೆದಿದೆ. ಲೋಕಿ ಗ್ಯಾಂಗ್ ರೌಡಿಶೀಟರ್ ಮನೋಜ್ ಎಂಬುವನ ಮೇಲೆ ದಾಳಿ ಮಾಡಿ, ಹಲ್ಲೆ ಮಾಡಿತ್ತು. ಘಟನೆ ಬಳಿಕ ಲೋಕಿ ಆಯಂಡ್ ಗ್ಯಾಂಗ್ ತಲೆಮರೆಸಿಕೊಂಡಿತ್ತು.



ಪ್ರಕರಣ ಸಂಬಂಧ ಬಂಧಿಸಲು ತೆರಳಿದ್ದಾಗ ಆರೋಪಿ ಲೋಕೇಶ್ ಅಲಿಯಾಸ್ ಲೋಕಿ ಪೊಲೀಸರ ಮೇಲೆ ಹಲ್ಲೆ ಮಾಡಲು ಪರಾರಿಯಾಗಲು ಯತ್ನಿಸಿದ್ದಾನೆ. ಈ ವೇಳೆ ಇನ್ಸ್‌ಪೆಕ್ಟರ್ ಮಂಜುನಾಥ್ ಅವರು ಆತ್ಮರಕ್ಷಣೆಗಾಗಿ ಲೋಕಿ ಬಲಗಾಲಿಗೆ ಗುಂಡು ಹೊಡೆದು ಬಂಧಿಸಿದ್ದಾರೆ. ಗಾಯಗೊಂಡಿರುವ ರೌಡಿಶೀಟರ್ ಲೋಕಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ಘಟನಾ ಸ್ಥಳಕ್ಕೆ ಡಿವೈಎಸ್ ಪಿ ಮೋಹನ್ ಕುಮಾರ್ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಆರೋಪಿ ಲೋಕೇಶ್ ಅಲಿಯಾಸ್ ಲೋಕಿ ಮೂರು ಪ್ರಕರಣಗಳಲ್ಲಿ ಬೇಕಾಗಿದ್ದಾನೆ.

ಪ್ರಕರಣ ಸಂಬಂಧ ಬೆಂಗಳೂರು ಗ್ರಾಮಾಂತರ ಹೆಚ್ಚುವರಿ ಎಸ್ಪಿ ನಾಗೇಶ್ ಕುಮಾರ್ ಮಾತನಾಡಿ, ಜಿಗಣಿ ಪೊಲೀಸ್ ಠಾಣೆಯಲ್ಲಿ ಆರೋಪಿ ಲೋಕಿ ವಿರುದ್ಧ ಯತ್ನ ಕೇಸ್ ದಾಖಲಾಗಿದೆ. ಆರೋಪಿಯನ್ನು ಬಂಧಿಸಲು ಪಿಎಸ್‌ಐ ಸಿದ್ದನಗೌಡ ನೇತೃತ್ವದ ತಂಡ ತೆರಳಿತ್ತು. ಈ ವೇಳೆ ಆರೋಪಿ ಲೋಕಿ ಪೊಲೀಸರ ಮೇಲೆ ಹಲ್ಲೆ ಮಾಡಿ, ಪರಾರಿಯಾಗಲು ಯತ್ನಿಸಿದ್ದನು. ಈ ವೇಳೆ ಕಾಲಿಗೆ ಗುಂಡು ಹೊಡೆದು ಬಂಧಿಸಲಾಗಿದೆ ಎಂದು ತಿಳಿಸಿದರು.

ಆರೋಪಿ ಲೋಕಿ ಮೇಲೆ ಕೊಲೆ, ಕೊಲೆ ಯತ್ನ ಕೇಸ್ ಗಳಿವೆ. ರೌಡಿ ಶೀಟರ್ ಮನು ಹತ್ಯೆಗೆ ಯತ್ನಸಿದ್ದ ಪ್ರಕರಣದಲ್ಲಿ ಲೋಕಿ ಪ್ರಮುಖ ಆರೋಪಿಯಾಗಿದ್ದಾನೆ. ಲೋಕಿ ಸಹಚರರ ಪತ್ತೆಗಾಗಿ ನಾಲ್ಕು ತಂಡ ರಚನೆ ಮಾಡಲಾಗಿದೆ ಬೆಂಗಳೂರು ಗ್ರಾಮಾಂತರ ವಿಭಾಗದಲ್ಲಿ ಗೌಡಿಸಂ ಮಟ್ಟ ಹಾಕುತ್ತೇವೆ. ಶೀಘ್ರದಲ್ಲಿ ಉಳಿದ ಆರೋಪಿಗಳ ಬಂಧನ ಮಾಡಲಾಗುವುದು ಎಂದರು.

# ಕಸಾಪ ವತಿಯಿಂದ ಬೃಹತ್ ಬೈಕ್ ಜಾಥಾಗೆ ಚಾಲನೆ: ಡಾ. ಕುಮಾರ



**ಮಂಡ್ಯ:** ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಇಂದು ಕರ್ನಾಟಕ ಸರ್ಕಾರ, ಜಿಲ್ಲಾಡಳಿತ ಮಂಡ್ಯ ಹಾಗೂ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರದ ಪ್ರಯುಕ್ತ ದ್ವಿಚಕ್ರ ವಾಹನಗಳ ಜಾಥಾಗೆ ಜಿಲ್ಲಾಧಿಕಾರಿಗಳಾದ ಡಾ. ಕುಮಾರ ಅವರು ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು ಡಿಸೆಂಬರ್ 20, 21, 22 ರಂದು ಮೂರು ದಿನಗಳ ಕಾಲ ನಮ್ಮ ಮಂಡ್ಯ ಜಿಲ್ಲೆಯಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವು ನಡೆಯಲಿದ್ದು, ಈ ನಿಟ್ಟಿನಲ್ಲಿ ಬೈಕ್ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲಾ ಕನ್ನಡಿಗ ಮನಸ್ಸುಗಳು ಒಂದಾಗಿ ಸೇರಿ ಜೊತೆಗೂಡಿ ಸಾಹಿತ್ಯದ ಹಬ್ಬವನ್ನು ಆಚರಿಸುವುದು ಇದರ ಉದ್ದೇಶವಾಗಿದೆ. ಎಲ್ಲಾ ಮಂಡ್ಯ ಜನತೆಯು ಸಹಕಾರದಿಂದ ಕೈಜೋಡಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಕಸಾಪ ಸಮ್ಮೇಳನ ಸಂಚಾಲಕಿ ಮೀರಾ ಶಿವಲಿಂಗಯ್ಯ ಅವರು ಮಾತನಾಡಿ, ಕರ್ನಾಟಕ ಸರ್ಕಾರ, ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಜಿಲ್ಲಾಡಳಿತ ಸೇರಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮಂಡ್ಯದಲ್ಲಿ ಹಮ್ಮಿಕೊಳ್ಳಲಾಗಿರುವ ವಿಷಯವು ಈಗಾಗಲೇ ಎಲ್ಲರಿಗೂ ತಿಳಿದಿದೆ.ಕನ್ನಡ ಪ್ರಜ್ಞೆ, ಕನ್ನಡ ಪ್ರೇಮ ಪ್ರತಿಯೊಬ್ಬರಲ್ಲಿಯೂ ಜಾಗೃತವಾಗಿ ಎಲ್ಲರೂ ಸಮ್ಮೇಳನದಲ್ಲಿ ಭಾಗವಹಿಸಬೇಕು. ಮಂಡ್ಯ ಜನತೆಗೆ ಜಾಗೃತಿ ಮೂಡಿಸಲು ಮೋಟಾರ್ ಬೈಕ್ ಜಾಥಾವನ್ನು ಆಯೋಜಿಸಲಾಗಿದೆ.ಎಲ್ಲರೂ ಸೇರಿ ಜಾಥಾವನ್ನು ಯಶಸ್ವಿಗೊಳಿಸಿ ಎಂದರು.

ಕಸಾಪ ನಗರ ಘಟಕದ ಅಧ್ಯಕ್ಷೆ ಸುಜಾತ ಕೃಷ್ಣ ಅವರು ಮಾತನಾಡಿ, ಸಮ್ಮೇಳನದ ಅಂಗವಾಗಿ ಇಂದು ಬೈಕ್ ಜಾಥಾವನ್ನು ಹಮ್ಮಿಕೊಳ್ಳುವ ಮೂಲಕ ಪ್ರಚಾರ ಮಾಡುತ್ತಿದ್ದೇವೆ. ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಾಕಷ್ಟು ಮಹಿಳೆಯರು ಹಾಗೂ ಪುರುಷರು ಒಟ್ಟಿಗೆ ಪಾಲ್ಗೊಂಡು ನಗರದ ಎಲ್ಲಾ ಭಾಗಗಳಲ್ಲಿ ಸಮ್ಮೇಳನದ ಪ್ರಚಾರ ಮಾಡುತ್ತಿದ್ದಾರೆ.ಮಂಡ್ಯ ಜನರು ಸಮ್ಮೇಳನಕ್ಕೆ ಬರುವ ಪ್ರತಿಯೊಬ್ಬರಿಗೂ ಆಥಿತ್ಯ ನೀಡಿ ಜಿಲ್ಲೆಯ ಹೆಸರನ್ನು ಎಲ್ಲೆಡೆ ಪಸರಿಸುವಂತಾಗಬೇಕು ಎಂದರು.

ಜಾಥಾವು ಜಿಲ್ಲಾಧಿಕಾರಿಗಳ ಕಚೇರಿಯಿಂದ ಹೊರಟು ಬೆಂಗಳೂರು – ಮೈಸೂರು ಹೆದ್ದಾರಿ ಮಾರ್ಗವಾಗಿ ಕಲ್ಲಹಳ್ಳಿಯ ಎಪಿಎಂಸಿ ಮಾರುಕಟ್ಟೆ, ವಿವಿ ನಗರ, ಅನ್ನಪೂರ್ಣೇಶ್ವರಿ ನಗರ, ಕಾರಸವಾಡಿ ರಸ್ತೆಯ ಅರಳಿಮರ ಸರ್ಕಲ್ ಮುಖಾಂತರ ಕಾಲುವೆ ರಸ್ತೆಯಲ್ಲಿ ಸಾಗಿ ಹೊಸಹಳ್ಳಿಯ ಶ್ರೀ ವೆಂಕಟೇಶ್ವರ ದೇವಸ್ಥಾನ, ಬಿಸಿಲು ಮಾರಮ್ಮನ ದೇವಸ್ಥಾನ ಹೊಸಹಳ್ಳಿ ವೃತ್ತ, 100 ಅಡಿ ರಸ್ತೆಯಲ್ಲಿ ಕನ್ನಿಕಾ ಪರಮೇಶ್ವರಿ ದೇವಸ್ಥಾನದ ಬಳಿಯಿಂದ ಸುಭಾ?ನಗರದ ವಿನೋಬ ರಸ್ತೆ, ಸಂಜಯ ಸರ್ಕಲ್, ಆರ್‌ಪಿ ರಸ್ತೆಯ ಮೂಲಕ ಕರ್ನಾಟಕ ಬಾರ್ ಸರ್ಕಲ್, ಜಾಥಾ ನೂರಡಿ ರಸ್ತೆಯಲ್ಲಿ ಸಂಚರಿಸಿ ವಿವಿ ರಸ್ತೆಯ ಮೂಲಕ ಮಹಾವೀರ ವೃತ್ತ, ಸಿಮೆಂಟ್ ಡಬಲ್ ರೋಡ್, ಬೆಸಗರಹಳ್ಳಿ ರಾಮಣ್ಣ ವೃತ್ತ, ಆಸ್ಪತ್ರೆ ರಸ್ತೆ, ನಂದಾ ವೃತ್ತ, ಫ್ಯಾಕ್ಟರಿ ಸರ್ಕಲ್, ಗುತ್ತಲು ರಸ್ತೆ, ಸ್ವರ್ಣಸಂದ್ರ, ಶನೇಶ್ವರ ದೇವಸ್ಥಾನದ ಮೂಲಕ ಮತ್ತೆ ಫ್ಯಾಕ್ಟರಿ ವೃತ್ತ, ದಾಟಿ ಕಾಳಮ್ಮನ ದೇವಸ್ಥಾನ ಕಾರೆಮನೆ ಗೇಟ್, ಹೊಳಲು ವೃತ್ತದ ಮೂಲಕ ಸಂಚರಿಸಿ ರೈತ ಸಭಾಂಗಣ ತಲುಪಿ ಸಮಾರೋಪ ಸಮಾರಂಭದೊಂದಿಗೆ ಅಂತ್ಯಗೊಂಡಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನ ಗೌರವ ಕಾರ್ಯದರ್ಶಿ ಹುಸ್ಕೂರು ಕೃಷ್ಣೇಗೌಡ, ಕೋಶಾಧ್ಯಕ್ಷ ಅಪ್ಪಾಜಪ್ಪ, ತಾಲ್ಲೂಕು ಅಧ್ಯಕ್ಷ ಚಂದ್ರಲಿಂಗು, ಪದಾಧಿಕಾರಿಗಳಾದ ರತ್ನಾಶ್ರೀ, ವಿಜಯಲಕ್ಷ್ಮಿ, ಲತಾ, ಪ್ರೊ ಎಂ ಎ ಪ್ರಮೀಳಾ, ಪುಷ್ಪ ಲತಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## 3 ದಿನಗಳ ರಾಷ್ಟ್ರೀಯ ಸಮ್ಮೇಳನ

**ಬೆಂಗಳೂರು:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "Exploring Nature's Pharmacy: Potential of Medicinal and Aromatic Plants and Their Conservation"ವಿಷಯದ ಮೇಲೆ 2025 ಜನವರಿ 7 ರಿಂದ 9 ರ ವರೆಗೆ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಅಕಾಡೆಮಿಯ ಕಛೇರಿಯಲ್ಲಿ ಆಯೋಜಿಸಲಾಗುತ್ತಿದೆ. ಈ ಸಮ್ಮೇಳನದಲ್ಲಿ ಔಷಧೀಯ ಮತ್ತು ಸುಗಂಧ ಸಸ್ಯಗಳ ಕುರಿತ ಪ್ರದರ್ಶನದ ಮಳಿಗೆಯನ್ನು 10 ಫ 10 ಅಡಿ ವಿಸ್ತೀರ್ಣ ಹಾಕಲು ಅವಕಾಶ ಕಲ್ಪಿಸಲಾಗಿದೆ. ಸದರಿ ಸಮ್ಮೇಳನದಲ್ಲಿ ರಾಜ್ಯ ಹಾಗೂ ಹೊರ ರಾಜ್ಯದ ಪ್ರತಿನಿಧಿಗಳು ಭಾಗವಹಿಸಿರುವುದರಿಂದ ಔಷಧೀಯ ಮತ್ತು ಸುಗಂಧ ಸಸ್ಯ ಆಧಾರಿತ ಉತ್ಪನ್ನಗಳಿಗೆ ಹೆಚ್ಚಿನ ಪ್ರಚಾರ ದೊರೆಯಲಿದೆ. ಪ್ರದರ್ಶನದ ಮಳಿಗೆಯನ್ನು ಹಾಕಲು ಇಚ್ಛಿಸುವ ಆಸಕ್ತ ಕಂಪನಿಗಳು ಮತ್ತು ಉದ್ಯಮದಾರರು ಡಿಸೆಂಬರ್ 31 ರೊಳಗಾಗಿ ಅಕಾಡೆಮಿಯ ಅಧಿಕಾರಿಗಳ ಮೊ.ಸಂ. 9880405181, 9743084194 ಮತ್ತು 9845258894 ಅಥವಾ ಅಕಾಡೆಮಿಯ ವೆಬ್ಸೈಟ್ http://kstacademy.in ವೀಕ್ಷಿಸಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎ. ಎಂ. ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಬೆಂಗಳೂರು ವಿಶ್ವವಿದ್ಯಾಲಯದ ಈ ಸಂಸ್ಥೆಯ ಪರವಾಗಿ ಉಚ್ಚನ್ಯಾಯಾಲಯಗಳಲ್ಲಿ ದಾಖಲಾಗಬಹುದಾದ/ದಾಖಲಾಗಿರುವ ರಿಟ್ ಅರ್ಜಿಗಳು ಹಾಗೂ ಸಂಬಂಧಿಸಬಹುದಾದ ವ್ಯಾಜ್ಯಗಳ ಕುರಿತು ಮತ್ತಿತರೆ ನ್ಯಾಯಾಲಯಗಳಲ್ಲಿ ಇರುವ ಪ್ರಕರಣಗಳ ಬಗ್ಗೆ ವಿಶ್ವವಿದ್ಯಾಲಯದ ಪರವಾಗಿ ವಕಾಲತ್ತನ್ನು ವಹಿಸಲು ವಕೀಲರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ವಕೀಲರು ತಮ್ಮ ಹೆಸರನ್ನು ವಕೀಲರ ಸಂಘದಲ್ಲಿ ನೋಂದಾಯಿಸಿರತಕ್ಕದ್ದು. ವಕೀಲ ವೃತ್ತಿಯಲ್ಲಿ ಉಚ್ಚ-ನ್ಯಾಯಾಲಯದಲ್ಲಿ ಕನಿಷ್ಠ 10 ವರ್ಷಗಳ ವಕಾಲತ್ತು ಅನುಭವ ಹೊಂದಿರಬೇಕು ಅಥವಾ ಇತರೆ ಸರ್ಕಾರಿ ಸಂಸ್ಥೆಗಳಲ್ಲಿ ಕಚಿಟಿಜಟ ಠಜಿ ಂಜತಿಠಛಿಚಿಣಜ ಆಗಿರಬೇಕು. ಸಂಸ್ಥೆಯ ರಿಟೈನರ್ ಶುಲ್ಕಕ್ಕೆ ಒಪ್ಪಿಗೆ ಪತ್ರ. ವಯೋಮಿತಿ 60 ವರ್ಷಗಳನ್ನು ಮೀರಿರಬಾರದು. ಇಚ್ಛೆಯುಳ್ಳ ವಕೀಲರು ಪ್ರಕಟಣೆಯ ಪ್ರಕಟಗೊಂಡ 07 ದಿನಗಳೊಳಗಾಗಿ ಇವರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಅರ್ಜಿಯನ್ನು ವಿಶ್ವವಿದ್ಯಾಲಯದ ಮಿಂಚಂಚೆ ವಿಳಾಸ bnuregistrar@karnataka.gov.inದಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಟಮಕ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಸಚಿವರನ್ನು ಸಂಪರ್ಕಿಸಬಹುದು ಎಂದು ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

**ಕೋಲಾರ:** ಮೆಟ್ರಿಕ್ ನಂತರದ ಕೋರ್ಸುಗಳಾದ ಸ್ನಾತಕೋತ್ತರ ಪದವಿ, ವೃತ್ತಿಪರ ಪದವಿ ಮತ್ತು ವೃತ್ತಿಪರ ಸ್ನಾತಕೋತ್ತರ ಪದವಿಗಳ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ ಪ್ರಸಕ್ತ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ''ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ'', ''ಶುಲ್ಕ ವಿನಾಯಿತಿ'', ''ವಿದ್ಯಾಸಿರಿ'' (ಊಟ ಮತ್ತು ವಸತಿ ಸಹಾಯ ಯೋಜನೆ), ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿ ಮಾಡಿಕೊಂಡಿರುತ್ತಾರೆ. ಆದ ಕಾರಣ ಅರ್ಜಿ ಡಿಸೆಂಬರ್ 20 ರವರೆಗೆ ವಿಸ್ತರಿಸಲಾಗಿದೆ. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್‌ಸೈಟ್ https://bcwd.karnataka.gov.in/ ನಲ್ಲಿ ನೋಡಬಹುದು. ಅರ್ಜಿಯನ್ನು ವಿದ್ಯಾರ್ಥಿಗಳು https://ssp.postmatric.karnataka.gov.in/ ಆನ್‌ಲೈನ್‌ನಲ್ಲಿ ಸಲ್ಲಿಸಬಹುದು. ಇ-ಮೇಲ್ ಮುಖಾಂತರ bcwdhelpline@karnataka.gov.in ಹಾಗೂ ಸಹಾಯವಾಣಿ ಸಂಖ್ಯೆ. 8050770005 ಯನ್ನು ಸಂಪರ್ಕಿಸಬಹುದು. ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಇ-ಮೇಲ್ postmatrichelp@karnataka.gov.in ಹಾಗೂ ದೂ.ಸಂ.1902 ಯನ್ನು ಸಂಪರ್ಕಿಸಬಹುದು.

## ಅರ್ಜಿ ಸಲ್ಲಿಕೆಯ ಅವಧಿ ವಿಸ್ತರಣೆ

**ಚಾಮರಾಜನಗರ:** ಹಿಂದುಳಿದ ವರ್ಗಗಳ ಇಲಾಖೆಯಿಂದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ, ಅರೆ ಅಲೆಮಾರಿ ಪ್ರವರ್ಗ-1ರ ವಿದ್ಯಾರ್ಥಿಗಳಿಂದ ವಿದ್ಯಾರ್ಥಿವೇತನ, ಶುಲ್ಕಮರುಪಾವತಿ, ವಿದ್ಯಾಸಿರಿ (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಡಿಸೆಂಬರ್ 20 ರವರೆಗೆ ವಿಸ್ತರಿಸಲಾಗಿದೆ. ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮನಾಂತರ, ಸಾಮಾನ್ಯ ಪದವಿ, ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ 2024-25ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಸೌಲಭ್ಯಕ್ಕೆ ಆನ್‌ಲೈನ್ ಮೂಲಕ ವೆಬ್‌ಸೈಟ್https://ssp.postmatric.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in, ಇಲಾಖಾ ಸಹಾಯವಾಣಿ ದೂ.ಸಂ 8050770005, ಇ-ಮೇಲ್ bcwdhelpline@gmail.in, , ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ-ಮೇಲ್ postmatrichelp@karnataka.gov.in ಮತ್ತು ದೂ.ಸಂ 1902 ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 20 ಅಂತಿಮ ದಿನವಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 22 ರಂದು ನಡೆಯುವ ಕಾರ್ಯಕ್ರಮಗಳು

ಗೋಷ್ಠಿಗಳು: ಡಿಸೆಂಬರ್ 22 ರಂದು ಬೆಳಿಗ್ಗೆ 9.30 ರಿಂದ 11 ಗಂಟೆಯವರೆಗೆ ಜಾಗತಿಕ ನೆಲೆಯಲ್ಲಿ ಕನ್ನಡ ಕಟ್ಟುವ ಬಗೆ ವಿಷಯದ ಬಗ್ಗೆ ಗೋಷ್ಠಿ – 8 ನಡೆಯಲಿದೆ.ಅಮೆರಿಕಾದ ಅಮರನಾಥ ಗೌಡ ಅವರು ಅಧ್ಯಕ್ಷತೆ ವಹಿಸಲಿದ್ದು, ಬಹರೇನ್ ನ ಕಿರಣ್ ಉಪಾಧ್ಯಾಯ ಅವರು ಆಶಯ ನುಡಿ ಆಡಲಿದ್ದಾರೆ.ವಿದೇಶದಲ್ಲಿರುವ ಕನ್ನಡಿಗರ ಸಮಸ್ಯೆಗಳು, ಪರಿಹಾರಗಳು ವಿಷಯದ ಬಗ್ಗೆ ಕತಾರ್ ನ ಎಚ್. ಕೆ.ಮಧು ಅವರು, ಜಗತ್ತಿನ ರಾಷ್ಟ್ರಗಳಲ್ಲಿ ಮಾತೃಭಾ?ಯನ್ನು ನೋಡುವ ಕ್ರಮ ವಿಷಯದ ಬಗ್ಗೆ ಇಂಗ್ಲೆಂಡ್ ನ ಅಶ್ವಿನ್ ಶೇ?ಾದ್ರಿ, ಹೊರನಾಡಿನಲ್ಲಿ ಕನ್ನಡದ ಅಸ್ತಿತ್ವ, ಸವಾಲುಗಳು ವಿಷಯದ ಬಗ್ಗೆ ಮಹಾರಾಷ್ಟ್ರದ ಕಮಲಾಕರ ಕಡವೆ, ವಿದೇಶದಲ್ಲಿರುವ ಕನ್ನಡ ಶಾಲೆಗಳ ಸ್ಥಿತಿಗತಿಗಳು ವಿಷಯದ ಬಗ್ಗೆ ಯುಎಇ ಶಶಿಧರ ನಾಗರಾಜಪ್ಪ ಹಾಗೂ ಜರ್ಮನಿಯ ರಶ್ಮಿ ನಾಗರಾಜ್ ಅವರು ವಿಷಯ ಮಂಡನೆ ಮಾಡಲಿದ್ದಾರೆ. ಕ.ಸಾ.ಪ ಅಂತರಾಷ್ಟ್ರೀಯ ಸಮನ್ವಯಾಧಿಕಾರಿ ನಿವೇದಿತ ಹಾವನೂರ – ಹೊನ್ನತ್ತಿ ಅವರು ವಿಶೇಷ ಉಪಸ್ಥಿತಿ ವಹಿಸಲಿದ್ದಾರೆ.

ಕಾರ್ಯಕ್ರಮದ ನಿರ್ವಹಣೆ – ಪೋಲೆಂಡ್ ನ ಪಂಚಾಕ್ಷರಿ ಎಲ್, ಸ್ವಾಗತ – ಕತಾರ್ ನ ಮಹೇಶ್ ಗೌಡ, ನಿರೂಪಣೆ – ಹಾಲೆಂಡ್ ನ ಲೀಲಾಧರ ಕೆ ಆರ್, ವಂದನಾರ್ಪಣೆ – ಆಸ್ಟ್ರೇಲಿಯಾದ ಸುನಯನಾ ಗಾಡಗೋಳಿ ಅವರು ನೆರವೇರಿಸಲಿದ್ದಾರೆ.

ಗೋಷ್ಠಿ–9: ಬೆಳಿಗ್ಗೆ 11 ರಿಂದ 12:30 ಗಂಟೆಯವರೆಗೆ ಸ್ತ್ರೀ ಎಂದರೆ ಅಷ್ಟೇ ಸಾಕೇ? ವಿಷಯದ ಬಗ್ಗೆ ಗೋಷ್ಠಿ – 9 ನಡೆಯಲಿದೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಹಿರಿಯ ಸಾಹಿತಿ ಡಾ. ಹೇಮಾ ಪಟ್ಟಣಶೆಟ್ಟಿ ಅವರು ಆಶಯ ನುಡಿಯನ್ನಾಡಲಿದ್ದಾರೆ. ಭ್ರೂಣ ಹತ್ಯೆ ವಿಷಯದ ಬಗ್ಗೆ ಸುಮತಿ ಜಿ, ವರ್ತಮಾನದ ತಲ್ಲಣಗಳು ವಿಷಯದ ಬಗ್ಗೆ ಡಾ ಶುಭಶ್ರೀ ಪ್ರಸಾದ್, ವಿವಾಹ ಮತ್ತು ಮರ್ಯಾದಾ ಹತ್ಯೆ ವಿಷಯದ ಬಗ್ಗೆ ಡಾ.ತಾರಿಣಿ ಶುಭದಾಯಿನಿ ಅವರು ವಿಷಯ ಮಂಡನೆ ಮಾಡಲಿದ್ದಾರೆ.

ಕಾರ್ಯಕ್ರಮದ ನಿರ್ವಹಣೆ – ರತ್ನಪ್ರಭಾ ವಿಶ್ವನಾಥ ಬೆಲ್ಲದ, ಸ್ವಾಗತ – ಪ್ರೊ ಮಲ್ಲಮ್ಮ ಆರ್. ಪಾಟೀಲ, ನಿರೂಪಣೆ – ಭಾರತಿ ಬಿ ಮುದಭಾವಿ, ವಂದನಾರ್ಪಣೆ – ಜೆ.ಲತಾ ಮುದ್ದು ಮೋಹನ್ ಅವರು ನೆರವೇರಿಸಲಿದ್ದಾರೆ.

ಗೋಷ್ಠಿ–10:– ಮಧ್ಯಾಹ್ನ 12:30 ರಿಂದ 2.10 ಗಂಟೆಯವರೆಗೆ ಸರ್ಕಾರಿ ಕನ್ನಡ ಶಾಲೆಗಳ ಸಬಲೀಕರಣ: ಸಾಧ್ಯತೆ ಮತ್ತು ಸವಾಲುಗಳು ವಿಷಯದ ಬಗ್ಗೆ ಗೋಷ್ಠಿ – 10 ನಡೆಯಲಿದೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರು?ೋತ್ತಮ ಬಿಳಿಮಲೆ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಡಾ.ಎಲ್. ಎನ್. ಮುಕುಂದರಾಜ್ ಅವರು ಆಶಯ ನುಡಿಯನ್ನಾಡಲಿದ್ದಾರೆ.ಡಾ ನಿರಂಜನಾರಾಧ್ಯ ವಿ. ಪಿ. ಅವರು ಸರ್ಕಾರಿ ಕನ್ನಡ ಶಾಲೆಗಳ ಇಂದಿನ ಸ್ಥಿತಿಗತಿಯ ಅವಲೋಕನ ವಿಷಯದ ಬಗ್ಗೆ, ಎಫ್.ಸಿ. ಚೇಗರಡ್ಡಿ ಅವರು ಸರ್ಕಾರಿ ಕನ್ನಡ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಸವಾಲುಗಳು, ಆನಂದ್ ಜಿ. ಅವರು ಸರ್ಕಾರಿ ಶಾಲೆಗಳಲ್ಲಿ ಕಲಿತ ಮಕ್ಕಳಿಗೆ ವೃತ್ತಿ ಶಿಕ್ಷಣ ಮತ್ತು ಉದ್ಯೋಗದ ಅವಕಾಶಗಳು ಹಾಗೂ ಸೋಮಣ್ಣ ಬೇವಿನ ಮರದ ಅವರು ಗಡಿ ಭಾಗದ ಸರ್ಕಾರಿ ಕನ್ನಡ ಶಾಲೆಗಳ ಸ್ಥಿತಿಗತಿ ವಿಷಯದ ಬಗ್ಗೆ ವಿಷಯ ಮಂಡನೆ ಮಾಡಲಿದ್ದಾರೆ.

ಕಾರ್ಯಕ್ರಮದ ನಿರ್ವಹಣೆ – ಚಂದ್ರಕಾಂತ, ಸ್ವಾಗತ – ವಿಜಯಕುಮಾರ ಪಾಟೀಲ ತೇಗಲತಿಪ್ಪಿ, ನಿರೂಪಣೆ – ಡಾ.ಧನಂಜಯ ಕುಂಬ್ಳೆ, ವಂದನಾರ್ಪಣೆ – ಜೆ. ಕೆ.ತಳವಾರ ಅವರು ನೆರವೇರಿಸಲಿದ್ದಾರೆ.

### ಸಾಧಕರಿಗೆ ಸನ್ಮಾನ

**ಮಧ್ಯಾಹ್ನ 2.10 ರಿಂದ 3.30 ಗಂಟೆಯವರೆಗೆ ಸಾಹಿತ್ಯ ಸಮ್ಮೇಳನದ ಅಂಗವಾಗಿ ಹಾಗೂ ಸುವರ್ಣ ಮಹೋತ್ಸವದ ನೆನಪಿನಲ್ಲಿ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ.ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ.ತುಮಕೂರು ಶ್ರೀ ಸಿದ್ದಗಂಗಾ ಮಠದ ಅಧ್ಯಕ್ಷರಾದ ಪರಮಪೂಜ್ಯ ಶ್ರೀ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ಅವರ ಸನ್ನಿಧಾನದಲ್ಲಿ, ನವದೆಹಲಿಯ ಭಾರತ ಲೋಕಪಾಲ್ ನ ನ್ಯಾಯಾಂಗ ಸದಸ್ಯ ನ್ಯಾಯಮೂರ್ತಿ ಎಲ್ ನಾರಾಯಣ ಸ್ವಾಮಿ ಅವರು ಸನ್ಮಾನಿಸಲಿದ್ದಾರೆ.**

## ಮೂರು ದಿನಗಳಲ್ಲಿ ವೇದಿಕೆ ನಿರ್ಮಾಣ ಕಾರ್ಯ ಪೂರ್ಣ

# ಸಾಹಿತ್ಯ ಸಮ್ಮೇಳನಕ್ಕೆ ಮಂಡ್ಯ ಸಜ್ಜು

**ಮಂಡ್ಯ:** 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮಂಡ್ಯ ಸಕಲ ರೀತಿಯಲ್ಲಿ ಸಜ್ಜಾಗಿದೆ. 64 ಎಕರೆ ಪ್ರದೇಶದಲ್ಲಿ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಂತೆ ವೇದಿಕೆ ನಿರ್ಮಾಣ ಕಾರ್ಯದ ಸಿದ್ಧತೆ ಭರದಿಂದ ಸಾಗುತ್ತಿದೆ. ಇನ್ನೂ ಮೂರು ದಿನಗಳಲ್ಲಿ ವೇದಿಕೆ ನಿರ್ಮಾಣ ಕಾರ್ಯ ಪೂರ್ಣಗೊಳ್ಳಲಿದೆ ಎಂದು ಶಾಸಕರು ಹಾಗೂ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ನಿರ್ವಹಣಾ ಸಮಿತಿ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಅವರು ಹೇಳಿದರು.

ನಗರದ ಸ್ಯಾಂಜೊ ಆಸ್ಪತ್ರೆ ಹಾಗೂ ಅಮರಾವತಿ ಹೋಟೆಲ್ ಹಿಂಭಾಗದಲ್ಲಿ ವೇದಿಕೆ ನಿರ್ಮಾಣವಾಗುತ್ತಿರುವ ಸ್ಥಳದ ಸಿದ್ಧತೆ ಪರಿಶೀಲನೆ ನಡೆಸಿದ ನಂತರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

ಪ್ರಧಾನ ವೇದಿಯಲ್ಲಿ ಸುಮಾರು 40 ಸಾವಿರ ಜನರಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ.450 ಪುಸ್ತಕ ಮಳಿಗೆ, 350 ವಾಣಿಜ್ಯ ಮಳಿಗೆ, 55 ಸರ್ಕಾರಿ ಮಳಿಗೆಗಳನ್ನು ನಿರ್ಮಿಸಲಾಗಿದೆ.ಊಟದ ವ್ಯವಸ್ಥೆಗೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ.ಜನದಟ್ಟಣೆಯಾಗದಂತೆ ತಡೆಯಲು ಪ್ರತ್ಯೇಕ ಫುಡ್ ಕೌಂಟರ್ ತೆರೆಯಲಾಗಿದೆ. ನೋಂದಾಯಿತ ಪ್ರತಿನಿಧಿಗಳಿಗೆ 40, ಜನಸಾಮಾನ್ಯರಿಗೆ 120 ಫುಡ್ ಕೌಂಟರ್ ಗಳ ಜೊತೆಗೆ ಮಾಧ್ಯಮದವರಿಗೆ, ವಿಐಪಿಗಳಿಗೆ ಪ್ರತ್ಯೇಕ ಆಹಾರದ ಕೌಂಟರ್ ಮಾಡಲಾಗಿದೆ ಎಂದು ವಿವರಿಸಿದರು.

ಸಹಸ್ರಾರು ಸಂಖ್ಯೆಯಲ್ಲಿ ಜನ ಸೇರುವುದರಿಂದ ಶುಚಿತ್ವಕ್ಕೆ ಮತ್ತು ಶೌಚಾಲಯಕ್ಕೆ ಪ್ರಾಧಾನ್ಯತೆ ನೀಡಲಾಗಿದೆ.250 ಶೌಚಾಲಯ, ಅಡುಗೆ ಸಿಬ್ಬಂದಿಗಳಿಗೆ 50 ಸ್ನಾನದಗೃಹದ ವ್ಯವಸ್ಥೆ ಮಾಡಲಾಗಿದೆ. ವಿದ್ಯುತ್ ಅಡಚಣೆಯಿಂದ ತೊಂದರೆ ಆಗದಂತೆ ಜನರೇಟರ್ ವ್ಯವಸ್ಥೆ ಕೂಡ ಮಾಡಲಾಗಿದೆ. ಅಗ್ನಿ ದುರಂತ ಸಂಭವಿಸದಂತೆ ಮುಂಜಾಗ್ರತಾ ಕ್ರಮಗಳನ್ನು ಸಹ ಕೈಗೊಂಡಿದ್ದು ಮಂಡ್ಯದಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಬಹಳ ವಿಜೃಂಭಣೆಯಿಂದ, ವೈಭವೋಪೇತದಿಂದ ಕೂಡಿರಲಿದೆ ಎಂದರು.

ಜಿಲ್ಲಾಡಳಿತ ಸಾಕಷ್ಟು ಮುತುವರ್ಜಿಯಿಂದ ಕಾರ್ಯನಿರ್ವಹಿಸುತ್ತಿದೆ. ಸಾರ್ವಜನಿಕರು, ನೋಂದಾಯಿತ ಪ್ರತಿನಿಧಿಗಳು, ಗಣ್ಯರಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗಿದೆ.ಪೊಲೀಸ್, ಅಗ್ನಿಶಾಮಕ ಸಿಬ್ಬಂದಿಯವರನ್ನು ನೇಮಿಸಲಾಗಿದೆ.ಸಮ್ಮೇಳನದ ಅಂಗವಾಗಿ ಮಳವಳ್ಳಿಯಲ್ಲಿ ಡಿ.18ರಂದು ನಾನಾ ಸಂಘಟನೆಗಳ ವತಿಯಿಂದ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದರು.

ಅತಿಥಿ ಸತ್ಕಾರಕ್ಕೆ ಹೆಸರಾಗಿರುವ ಮಂಡ್ಯ ಜಿಲ್ಲೆಗೆ ಎಲ್ಲೂ ಚ್ಯುತಿ ಬಾರದ ರೀತಿಯಲ್ಲಿ ಮಂಡ್ಯದ ಹಿರಿಮೆ, ಗರಿಮೆ ಎತ್ತಿಯಿಡುವ ನಿಟ್ಟಿನಲ್ಲಿ ಸಾಹಿತ್ಯ ಸಮ್ಮೇಳನ ಆಯೋಜಿಸಿ ಜಿಲ್ಲೆಗೆ ಕೀರ್ತಿ ತರಲಾಗುವುದು.ಇದಕ್ಕೆ ಎಲ್ಲರ ಸಹಕಾರ, ಸಹಭಾಗಿತ್ವ ಕೂಡ ಮುಖ್ಯವಾಗಿದ್ದು ಸಮ್ಮೇಳನದ ಯಶಸ್ವಿಗೆ ಎಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು.




### ಆಹಾರದ ಗುಣಮಟ್ಟ, ನೀರಿನ ಶುದತೆ ಪರಿಶೀಲನೆ

**ಸಾಹಿತ್ಯ ಸಮ್ಮೇಳನದಲ್ಲಿ ಲಕ್ಷಾಂತರ ಜನರು ಊಟ ಮಾಡುವುದರಿಂದ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಆಹಾರದ ಗುಣಮಟ್ಟ ಪರಿಶೀಲನೆಗಾಗಿ 10 ಜನರ ಆಹಾರ ತಜ್ಞರ ತಂಡವೊಂದನ್ನು ರಚನೆ ಮಾಡಲಾಗಿದೆ.ಮೂರು ದಿನವೂ ಆ ತಂಡ ಆಹಾರದ ಗುಣಮಟ್ಟದ ಪರಿಶೀಲನೆ ನಡೆಸಿ ವರದಿ ನೀಡಲಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು. ನೀರಿನ ವ್ಯವಸ್ಥೆಗೆ ಕ್ರಮಕೈಗೊಳ್ಳಲಾಗಿದೆ. ಒಟ್ಟು ಮೂರು ಬೋರ್ ವೆಲ್ ಗಳಿದ್ದು ನೀರು ಪೂರೈಕೆಗೆ 5.8 ಕಿ.ಮೀ. ಉದ್ದದ ಪೈಪ್ ಲೈನ್ ವ್ಯವಸ್ಥೆ ಮಾಡಲಾಗಿದೆ.ಓವರ್ ಹೆಡ್ ಟ್ಯಾಂಕ್ ನಿಂದ ಆಹಾರ ತಯಾರಿಕಾ ಸ್ಥಳ, ಶೌಚಾಲಯಗಳಿಗೆ ನೀರು ಪೂರೈಕೆ ಆಗಲಿದೆ.3 ಕಡೆ ಆರ್ ಓ ಪ್ಲಾಂಟ್ ನಿರ್ಮಿಸಲಾಗಿದೆ.ನೀರಿನ ಶುದ್ಧತೆ ಕೂಡ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು. 24 ಎಕರೆ ಜಾಗವನ್ನು ಪಾರ್ಕಿಂಗ್ ಗೆಂದೇ ನಿಗದಿಗೊಳಿಸಲಾಗಿದೆ.ನಗರದಿಂದ ಉಚಿತ ಬಸ್ ಸಂಚಾರ ಇರಲಿದೆ.ಸಮ್ಮೇಳನಕ್ಕೆ ಆಗಮಿಸುವವರಿಗೆಂದು ತಾಲೂಕು ಕೇಂದ್ರಗಳಿಂದ ಕೂಡ ಬಸ್ ವ್ಯವಸ್ಥೆ ಮಾಡಲಾಗಿದೆ. 6 ಸಾವಿರ ನೋಂದಾಯಿತ ಪ್ರತಿನಿಧಿಗಳಿಗೆ ಅರ್ಧ ಕೆಜಿ ಬೆಲ್ಲ, ಅರ್ಧ ಕೆಜಿ ಸಕ್ಕರೆ, ಬ್ರೆಶ್, ಪೇಸ್ಟ್, ಸೋಪು,ಬೆಡ್ ಶಿಟ್ ಒಳಗೊಂಡ ಲೇದರ್ ಬ್ಯಾಗ್ ನಲ್ಲಿ ವಸತಿ ಮತ್ತು ಸಮ್ಮೇಳನದ ಕಿಟ್ ನೀಡಲಾಗುವುದು ಎಂದರು. ಪ್ಲಾಸ್ಟಿಕ್ ಮುಕ್ತ ಸಮ್ಮೇಳನ ಇದಾಗಿರಲಿದೆ.ಮಹಿಳೆಯರಿಗೆ ಸಕಲ ಸೌಲಭ್ಯ ಕಲ್ಪಿಸಲಾಗಿದೆ.ಆರೋಗ್ಯದ ಹಿತದೃಷ್ಟಿಯಿಂದ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.ಉಚಿತ ಸಾರಿಗೆ ವ್ಯವಸ್ಥೆ ಬಗ್ಗೆ ರೂಟ್ ಮ್ಯಾಪ್ ಸಿದ್ಧಪಡಿಸಿ ಹಲವು ಕಡೆಗಳಲ್ಲಿ ಅವುಗಳ ಮಾಹಿತಿಯನ್ನು ಪ್ರದರ್ಶಿಸಲಾಗುವುದು.ಒಟ್ಟಾರೆ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಜಿಲ್ಲಾಡಳಿತ ಸಕಲ ರೀತಿಯಲ್ಲೂ ಸಜ್ಜಾಗಿದ್ದು ನುಡಿಹಬ್ಬವನ್ನು ಮನೆಹಬ್ಬದಂತೆ ಎಲ್ಲರೂ ಆಚರಿಸಬೇಕು ಎಂದು ಹೇಳಿದರು.**

### ಸನ್ಮಾನಿತರು

ಸಂದೇಶ ಸಾಂಸ್ಕೃತಿಕ ಮತ್ತು ಶಿಕ್ಷಣ ಪ್ರತಿ?ಾನ (ರಿ) (ಮಂಗಳೂರು) ಕನ್ನಡ ಸೇವೆ ಸ್ವೀಕರಿಸುವವರು : ಫಾದರ್ ಸುದೀಪ್ ಪೌಲ್ ನಿರ್ದೇಶಕರು, ಲೆಫ್ಟಿನೆಂಟ್ ಜನರಲ್ ಬಗ್ಗವಳ್ಳಿ ಸೋಮಶೇಖರ ರಾಜು, ಭಾರತೀಯ ಸೇನೆ, ಪರಮ ವಿಶಿಷ್ಟ ಸೇವಾ ಮೆಡಲ್, ಉತ್ತಮ ವಿಶಿಷ್ಟ ಸೇವಾ ಮೆಡಲ್, ಅತಿ ವಿಶಿಷ್ಟ ಸೇವಾ ಮೆಡಲ್ ಮತ್ತು ಯುದ್ಧ ಸೇವಾ ಮೆಡಲ್ ಪುರಸ್ಕೃತರು, ರವಿಶಂಕರ ಕೆ. ಭಟ್ (ಕನ್ನಡ ಮಾಧ್ಯಮ ಕ್ಷೇತ್ರ), ಕೆ.ಎನ್. ಚನ್ನೇಗೌಡ (ಕನ್ನಡ ಮಾಧ್ಯಮ ಕ್ಷೇತ್ರ), ಸುದರ್ಶನ ಚನ್ನಂಗಿಹಳ್ಳಿ (ಕನ್ನಡ ಮಾಧ್ಯಮ ಕ್ಷೇತ್ರ), ಡಾ. ಎಂ.ಬಿ. ಬೋರಲಿಂಗಯ್ಯ ಭಾ.ಪೊ.ಸೇ. ಆಡಳಿತ–(ಕನ್ನಡ), ಗಾಯತ್ರಿ ಕೆ.ಎಂ.ಭಾ.ಆ.ಸೇ. ಆಡಳಿತ–(ಕನ್ನಡ), ಬಸವರಾಜು ಭಾ.ಆ.ಸೇ ಆಡಳಿತ–(ಕನ್ನಡ), ಕರಿಗೌಡ ಭಾ.ಆ.ಸೇ ಆಡಳಿತ–(ಕನ್ನಡ), ಪೃಥ್ವಿ ಶಂಕರ್ ಭಾ.ಆ.ಸೇ ಆಡಳಿತ–(ಕನ್ನಡ), ಡಾ.ಬಿ. ಪ್ರಭುದೇವ್ ಕೆ.ಪಿ.ಎಸ್.ಸಿ.ಸದಸ್ಯರು ಆಡಳಿತ (ಕನ್ನಡ), ಅನುಪಮಾ ಬಿ.ಎಸ್ (ಯುವ ಸಬಲೀಕರಣ), ಡಾ.ಪಿ.ಜಿ. ಕೆಂಪಣ್ಣನವರ್ (ಸಮಾಜ ಸೇವೆ), ಡಾ.ಯುವರಾಜ್ ಬಿ.ಆರ್.(ವೈದ್ಯಕೀಯ ಕ್ಷೇತ್ರ), ಅಂಜನಶೆಟ್ಟಿ (ಕನ್ನಡ ಮಾಧ್ಯಮ ಕ್ಷೇತ್ರ), ಗೋವಿಂದಹಳ್ಳಿ ಕೃ?ೆ್ಣಗೌಡ (ಸಮಾಜ ಸೇವೆ), ಮುನಿರಾಜ ರೆಂಜಾಳ (ಶಿಕ್ಷಣ), ಡಾ.ವೆಂಕಟರಮಣ (ವೈದ್ಯಕೀಯ ಕ್ಷೇತ್ರ), ಡಾ.ತಲಕಾಡು ಚಿಕ್ಕರಂಗೇಗೌಡ (ಸಂಶೋಧನೆ), ಡಾ. ದಯಾನಂದ ಪಟೇಲ್ (ಪ್ರಾಚ್ಯವಸ್ತು ಶಾಸ್ತ್ರ), ಡಿ. ಕೆಂಪಣ್ಣ (ರಂಗಭೂಮಿ), ಅಮರನಾಥ ಗೌಡ ಮಿಷಿಗನ್, ಅಮೆರಿಕಾ, ಅಕ್ಕ ಸಂಸ್ಥೆ ಸಂಸ್ಥಾಪಕರು, ಕನ್ನಡ ಸಂಘಟನೆ, ಬಿ ವಿ ನಾಗರಾಜು ಟೊರಾಂಟೊ, ಕೆನಡಾ, ಕನ್ನಡ ಸಂಘಟನೆ, ಜಗನ್ನಾಥ್ ಹೇಮಾದ್ರಿ (ಸಾಹಿತ್ಯ), ವಿ.ಪಿ. ರಮೇಶ್ ಆಡಳಿತ, (ಕನ್ನಡ ಸೇವೆ), ಭಾರತಿ ಶೇಷಗಿರಿ ರಾವ್ (ಸಾಹಿತ್ಯ), ಹೆಚ್.ಎಲ್.ಎನ್. ರಾವ್ (ಸಂಘಟನೆ), ಕೆ.ಎನ್. ಪರಮೇಶ್ವರನ್ (ಸಾಹಿತ್ಯ), ಕ್ಯಾತನಹಳ್ಳಿ ರಾಮಣ್ಣ (ಜಾನಪದ), ಕಾಗತಿ ವೆಂಕಟರತ್ನಂ (ಸಾಹಿತ್ಯ), ಕೆ.ಎಂ. ನಾಗರಾಜು (ಕನ್ನಡ ಸೇವೆ), ಸೊಂದಲಗೆರೆ ಲಕ್ಷ್ಮೀಪತಿ (ಸಾಹಿತ್ಯ), ಆರ್. ಮಲ್ಲಿಕಾರ್ಜುನಯ್ಯ (ಸಾಹಿತ್ಯ), ಜೆ.ಎಲ್. ಪದ್ಮನಾಭ (ಶಿಕ್ಷಣ), ಮೂಗೂರು ನಂಜುಂಡಸ್ವಾಮಿ (ಕನ್ನಡ ಸಂಘಟನೆ), ಚಾ.ರಂ.ಶ್ರೀನಿವಾಸಗೌಡ (ಕನ್ನಡ ಸೇವೆ), ಬಿ.ಜೆ.ಗೋಪಾಲಕೃಷ್ಣ (ಕನ್ನಡ ಸೇವೆ), ಸುಬ್ರಾಯ ಸಂಪಾಜೆ (ಸಾಹಿತ್ಯ), ಅರುಣ್ ವೆಂಕಟೇಶ ಸಿಡ್ನಿ, ಆಸ್ಟ್ರೇಲಿಯಾ, (ಕನ್ನಡ ಸಂಘಟನೆ), ಬಿ.ಆರ್.ಸುರೇಂದ್ರ ನ್ಯೂಯಾರ್ಕ್, ಅಮೆರಿಕಾ, (ಕನ್ನಡ ಸಂಘಟನೆ), ತೀರ್ಥಪ್ರಸಾದ್ ಎಸ್.ಡಿ. ಅರಬ್ ದೇಶ, (ಕನ್ನಡ ಸಂಘಟನೆ), ಶ್ರೀನಿವಾಸ ಕೃ ದೇಸಾಯಿ (ಸಾಹಿತ್ಯ), ನಾಗರತ್ನ ಹೆಮ್ಮಿಗೆ (ಶಿಕ್ಷಣ), ಬಿ.ಎಲ್. ಶಿವಕುಮಾರ್ (ಕನ್ನಡ ಸಂಘಟನೆ), ಬಿ.ಶಿವು (ಕ್ರೀಡಾ ಕ್ಷೇತ್ರ).

ಕಾರ್ಯಕ್ರಮದ ನಿರ್ವಹಣೆ – ರವಿ ದಳವಾಯಿ, ಸ್ವಾಗತ – ಡಿ. ಮಂಜುನಾಥ್, ನಿರೂಪಣೆ – ಡಾ. ನಿಷ್ಟಿ ರುದ್ರಪ್ಪ, ವಂದನಾರ್ಪಣೆ – ತಾಯಪ್ಪ ಬಿ. ಹೊಸೂರ ಅವರು ನೆರವೇರಿಸಲಿದ್ದಾರೆ.

# ಸಾಹಿತ್ಯ ಸಮ್ಮೇಳನದ ಸಮಾರೋಪ

ಸಂಜೆ 4:30 ರಿಂದ 7:30 ಗಂಟೆಯವರೆಗೆ ಸಾಹಿತ್ಯ ಸಮ್ಮೇಳನದ ಸಮರೂಪ ಸಮಾರಂಭ ನಡೆಯಲಿದೆ.ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ ನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘನ ಉಪಸ್ಥಿತಿ ವಹಿಸಲಿದ್ದು, ನವದೆಹಲಿಯ ಭಾರತ ಲೋಕಪಾಲ್ ನ ನ್ಯಾಯಂಗ ಸದಸ್ಯ ನ್ಯಾಯಮೂರ್ತಿ ಎಲ್ ನಾರಾಯಣಸ್ವಾಮಿ, ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದ ಹೆಚ್ ಡಿ ಕುಮಾರಸ್ವಾಮಿ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಸಮ್ಮೇಳನ ಸ್ವಾಗತ ಸಮಿತಿಯ ಅಧ್ಯಕ್ಷ ಎನ್ ಚಲುವರಾಯಸ್ವಾಮಿ ಅವರುಗಳು ಕಾರ್ಯಕ್ರಮದ ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಸಮಾರೋಪ ಭಾಷಣಕಾರರಾಗಿ ಹಿರಿಯ ಸಾಹಿತಿ ಡಾ ಸಿ ಪಿ ಕೃಷ್ಣಕುಮಾರ್ ಹಾಗೂ ಸಮ್ಮೇಳನಾಧ್ಯಕ್ಷರು ನಾಡೋಜ ಡಾ.ಗೊ.ರು. ಚನ್ನಬಸಪ್ಪ ಅವರು ಆಗಮಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ ಮಹೇಶ ಜೋಶಿ ಅವರು ವಹಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಗೌರವ ಅತಿಥಿಗಳಾಗಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಸಮಾಜ ಕಲ್ಯಾಣ ಸಚಿವ ಹಾಗೂ ಸಮ್ಮೇಳನ ಸ್ವಾಗತ ಸಮಿತಿಯ ಉಪಾಧ್ಯಕ್ಷ ಡಾ. ಹೆಚ್. ಸಿ. ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಸಚಿವ ಹಾಗೂ ಸಮ್ಮೇಳನ ಸ್ವಾಗತ ಸಮಿತಿಯ ಉಪಾಧ್ಯಕ್ಷ ಶಿವರಾಜ ತಂಗಡಗಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣ ಸ್ವಾಮಿ, ವಿಧಾನ ಪರಿಷತ್ತಿನ ಉಪಸಭಾಪತಿ ಎಂ ಕೆ ಪ್ರಾಣೇಶ್, ವಿಧಾನ ಪರಿಷತ್ತಿನ ಆಡಳಿತ ಪಕ್ಷದ ಮುಖ್ಯ ಸಚೇತಕ ಸಲೀಂ ಅಹಮದ್, ವಿಧಾನಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್ ರವಿಕುಮಾರ್, ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷ ಎ.ಬಿ. ರಮೇಶ ಬಂಡಿಸಿದ್ದೇಗೌಡ ಅವರುಗಳು ಆಗಮಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ನ ಶಾಸಕರುಗಳಾದ ಮಧು ಜಿ ಮಾದೇಗೌಡ, ದಿನೇಶ್ ಗೂಳಿಗೌಡ, ಕೆ ವಿವೇಕಾನಂದ, ವಿಧಾನಸಭಾ ಶಾಸಕರುಗಳಾದ ಪಿ ಎಂ ನರೇಂದ್ರಸ್ವಾಮಿ, ಪಿ ರವಿಕುಮಾರ್, ದರ್ಶನ್ ಪುಟ್ಟಣ್ಣಯ್ಯ, ಹೆಚ್ ಟಿ ಮಂಜು, ಕೆ ಎಂ ಉದಯ, ಮಂಡ್ಯ ನಗರಸಭೆ ಅಧ್ಯಕ್ಷ ಎಂವಿ ಪ್ರಕಾಶ್, ಮೈಸೂರು ಸಕ್ಕರೆ ಕಂಪನಿ ನಿಯಮಿತದ ಅಧ್ಯಕ್ಷ ಸಿಡಿ ಗಂಗಾಧರ, ಮಂಡ್ಯ ನಗರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯೀಮ್, ಮಂಡ್ಯ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿಯಮಿತದ ಅಧ್ಯಕ್ಷ ಕೆ ಸಿ ಜೋಗಿಗೌಡ, ಗೆಜ್ಜಲಗೆರೆಯ ಮಂಡ್ಯ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ಅಧ್ಯಕ್ಷ ಬಿ ಬೋರೇಗೌಡ, ಬೂದನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಮಾನಸ, ಬೇಲೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಸುವರ್ಣವತಿ, ಉಮ್ಮಡಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಶ್ರೀಕಾಂತ್, ಮಂಡ್ಯ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಂಚಾಲಕಿ ಮೀರಾ ಶಿವಲಿಂಗಯ್ಯ ಅವರು ಆಗಮಿಸಲಿದ್ದಾರೆ.

ಕಾರ್ಯಕ್ರಮಕ್ಕೆ ವಿಶೇಷ ಆಹ್ವಾನಿತರಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಡಾ ಶಾಲಿನಿ ರಜನೀಶ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ ಎಲ್ ಕೆ ಅತೀಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರ್ಕಾರದ ಕಾರ್ಯದರ್ಶಿ ಡಾ ಮಂಜುಳಾ ಎನ್, ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅನ್ಬು ಕುಮಾರ್, ಮೈಸೂರು ವಲಯದ ಐ.ಜಿ.ಪಿ ಡಾ ಎಂ ಬಿ ಬೋರಲಿಂಗಯ್ಯ, ಮೈಸೂರು ವಿಭಾಗದ ಪ್ರಾದೇಶಿಕ ಆಯುಕ್ತ ರಮೇಶ್ ಡಿ ಎಸ್, ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯದ ನಿರ್ದೇಶಕಿ ಡಾ ಕೆ ಧರಣೀದೇವಿ ಅವರುಗಳು ಆಗಮಿಸಲಿದ್ದಾರೆ.

## ಕಾರ್ಯಕ್ರಮದಲ್ಲಿ ಸಿಎಂ ಇತರರು ಭಾಗಿ

**ಸಂಜೆ 4:30 ರಿಂದ 7:30 ಗಂಟೆಯವರೆಗೆ ಸಾಹಿತ್ಯ ಸಮ್ಮೇಳನದ ಸಮಾರೋಪ ಕಾರ್ಯಕ್ರಮ ನಡೆಯಲಿದೆ. ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ನೇ.ಭ ರಾಮಲಿಂಗಶೆಟ್ಟಿ ಅವರು ಸ್ವಾಗತ ಮಾಡಲಿದ್ದಾರೆ. ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನವದೆಹಲಿಯ ಭಾರತ ಲೋಕಪಾಲ್ ನ ನ್ಯಾಯಾಂಗ ಸದಸ್ಯ ನ್ಯಾಯಮೂರ್ತಿ ಎಲ್. ನಾರಾಯಣಸ್ವಾಮಿ, ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದ ಹೆಚ್ ಡಿ ಕುಮಾರಸ್ವಾಮಿ, ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಅವರುಗಳು ಕಾರ್ಯಕ್ರಮದಲ್ಲಿ ಸಮಾರೋಪದ ಶುಭನುಡಿ ನುಡಿಯಲಿದ್ದಾರೆ. ಸಮಾರೋಪ ಭಾಷಣಕಾರರಾಗಿ ಹಿರಿಯ ಸಾಹಿತಿ ಡಾ ಸಿ ಪಿ ಕೃಷ್ಣಕುಮಾರ್ ಹಾಗೂ ಸಮ್ಮೇಳನಾಧ್ಯಕ್ಷರ ನುಡಿಯನ್ನು ನಾಡೋಜ ಡಾ.ಗೊ.ರು. ಚನ್ನಬಸಪ್ಪ ಅವರು ನುಡಿಯಲಿದ್ದಾರೆ.ಕಾರ್ಯಕ್ರಮದ ಅಧ್ಯಕ್ಷೀಯ ನುಡಿಯನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ ಮಹೇಶ ಜೋಶಿ ಅವರು, ಸಮಾರೋಪದ ಶುಭನುಡಿಯನ್ನು ಗದಗ ಶ್ರೀ ಜಗದ್ಗುರು ತೋಂಟಂದಾರ್ಯ ಮಠದ ಡಾ ತೋಂಟದ ಸಿದ್ದರಾಮ ಮಹಾಸ್ವಾಮೀಜಿ ಅವರು ಆಡಲಿದ್ದಾರೆ. ಕಾರ್ಯಕ್ರಮದ ನಿರ್ವಹಣೆ – ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ ಡಾ ವಿ ಎಸ್ ಹಿರೇಮಠ, ನಿರೂಪಣೆ – ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕೋಶಾಧ್ಯಕ್ಷರು ಬಿ ಎಂ ಪಟೇಲ್ ಪಾಂಡು, ವಂದನಾರ್ಪಣೆ – ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಡಾ ಪದ್ಮಿನಿ ನಾಗರಾಜು ಅವರು ನೆರವೇರಿಸಲಿದ್ದಾರೆ.**

## ಕಸಾಪ ವತಿಯಿಂದ ಬೃಹತ್ ಬೈಕ್ ಜಾಥಾಗೆ ಚಾಲನೆ

**ಮಂಡ್ಯ:** ಜಿಲ್ಲೆಯಲ್ಲಿ ನಡೆಯುತ್ತಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡಕ್ಕಾಗಿ ಓಟ ಎಂಬ ಘೋಷವಾಕ್ಯದೊಂದಿಗೆ ಮ್ಯಾರಥಾನ್ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದ್ದು ಪ್ರತಿಯೊಬ್ಬರೂ ಕೂಡ ಇದರಲ್ಲಿ ಭಾಗವಹಿಸಬೇಕು ಎಂದು ಮಂಡ್ಯ ವಿಧಾನಸಭಾ ಕ್ಷೇತ್ರದ ಶಾಸಕ ಪಿ. ರವಿಕುಮಾರ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ 87ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಏರ್ಪಡಿಸಲಾಗಿರುವ ಕನ್ನಡಕ್ಕಾಗಿ ಓಟ ಮ್ಯಾರಥಾನ್ ಕಾರ್ಯಕ್ರಮದ ಟೀ ಶರ್ಟ್ ಬಿಡುಗಡೆ ಮಾಡಿ ಮಾತನಾಡಿದರು.

87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಕನ್ನಡಕ್ಕಾಗಿ ಓಟ ಮ್ಯಾರಥಾನ್ ಅನ್ನು ಡಿಸೆಂಬರ್ 17 ರಂದು ಬೆಳಿಗ್ಗೆ 7.00 ಗಂಟೆಗೆ ಮ್ಯಾರಥಾನ್ ಸ್ಪರ್ಧೆಯನ್ನು ನಗರದ ಸರ್. ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಿಂದ ಸಮ್ಮೇಳನ ನಡೆಯುವ ಸ್ಥಳ (ಸ್ಯಾಂಟೋ ಆಸ್ಪತ್ರೆ ಹಿಂಭಾಗ) ದವರೆಗೆ ಹಮ್ಮಿಕೊಳ್ಳಲಾಗಿದೆ.ಈ ಸ್ಪರ್ಧೆಯಲ್ಲಿ ಪ್ರತಿಯೊಬ್ಬರೂ ಭಾಗವಹಿಸಿ ಎಂದರು.

ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಕುಡಿಯುವ ನೀರು, ಬಿಸ್ಕೆಟ್ ವ್ಯವಸ್ಥೆ ಮಾಡಲಾಗಿದೆ.ಪೊಲೀಸ್ ಬಂದೋಬಸ್ತ್ ವ್ಯವಸ್ಥೆ, ವೈದ್ಯರ ತಂಡ ಸೇರಿದಂತೆ ಎಲ್ಲಾ ಸಕಲ ಸಿದ್ದತೆಗಳನ್ನು ಜಿಲ್ಲಾಡಳಿತ ಮಾಡಿಕೊಂಡಿದೆ ಎಂದು ಹೇಳಿದರು.

ಆರೋಗ್ಯಕ್ಕಾಗಿ ಓಡಿ ನಿಮ್ಮ ಆರೋಗ್ಯವನ್ನು ನೀವೇ ವೃದ್ಧಿಸಿಕೊಳ್ಳಬೇಕು ಅದಕ್ಕಾಗಿಯಾದರೂ ಓಡಬೇಕು. ಸಾರ್ವಜನಿಕರು ಸಂತೋಷದಿಂದ ಈ ಸ್ಪರ್ಧೆಯಲ್ಲಿ ಭಾಗಿಯಾಗಬೇಕು ಎಂದರು.

ಜಿಲ್ಲಾಧಿಕಾರಿ ಡಾ.ಕುಮಾರ ಅವರು ಮಾತನಾಡಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು 2024 ಡಿಸೆಂಬರ್ 20, 21 ಮತ್ತು 22 ರಂದು ಮಂಡ್ಯ ಜಿಲ್ಲೆಯಲ್ಲಿ ಸಂಘಟಿಸಲಾಗುತ್ತಿದ್ದು ಸಮ್ಮೇಳನವನ್ನು ಬಹಳ ಅರ್ಥಪೂರ್ಣವಾಗಿ, ವಿಜೃಂಭಣೆಯಿಂದ ಎಲ್ಲರೂ ಒಟ್ಟಾಗಿ ಸೇರಿ ಆಚರಣೆ ಮಾಡಬೇಕು ಎಂದು ಹೇಳಿದರು.

ಈ ಸಮ್ಮೇಳನವು ಯಾವುದೇ ಅಡತಡೆ ಇಲ್ಲದೆ ನಡೆಯಬೇಕೆಂದು ಕಳೆದ 4,5 ತಿಂಗಳಿಂದಲೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಾಗೂ ಮಂಡ್ಯ ಜಿಲ್ಲೆಯ ಉಸ್ತುವಾರಿ ಸಚಿವರು, ಜಿಲ್ಲೆಯ ಎಲ್ಲಾ ಶಾಸಕರು ಒಟ್ಟಾಗಿ ಸೇರಿ ನಿಭಾಯಿಸಿಕೊಂಡು ಹೋಗುತ್ತಿದ್ದಾರೆ. ಅದರಂತೆ ಜನರ ಸಹಕಾರವೂ ನಮಗೆ ಬಹಳ ಮುಖ್ಯ.ಆದ್ದರಿಂದ ಎಲ್ಲರೂ ಒಟ್ಟಾಗಿ ಸೇರಿ ಈ ಸಮ್ಮೇಳನದಲ್ಲಿ ಕೈ ಜೋಡಿಸಬೇಕು ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಅರ್ಥಪೂರ್ಣವಾಗಿ ಜಿಲ್ಲೆಯಲ್ಲಿ ಆಯೋಜಿಸುವ ಸಲುವಾಗಿ ಹಾಗೂ ಮಂಡ್ಯ ಜಿಲ್ಲೆಯ ಜನರು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನದ ಅರಿವು ಮೂಡಿಸುವ ಸಲುವಾಗಿ ಕನ್ನಡಕ್ಕಾಗಿ ಓಟ ಎಂಬ ಘೋಷವಾಕ್ಯದಡಿ ಡಿಸೆಂಬರ್ 17 ರಂದು ಬೆಳಿಗ್ಗೆ 7.00 ಗಂಟೆಗೆ ಮ್ಯಾರಥಾನ್ ಸ್ಪರ್ಧೆಯನ್ನು ನಗರದ ಸರ್.ಎಂ.ವಿಶ್ವೇಶ್ವರಯ್ಯ ಕ್ರೀಡಾಂಗಣದಿಂದ ಸಮ್ಮೇಳನ ನಡೆಯುವ ಸ್ಥಳ (ಸ್ಯಾಂಜೊ ಆಸ್ಪತ್ರೆ ಹಿಂಭಾಗ) ದವರೆಗೆ ಹಮ್ಮಿಕೊಳ್ಳಲಾಗಿದೆ.

ಕನ್ನಡ ಸಾಹಿತ್ಯ ಸಮ್ಮೇಳನವು ಹಿಂದೆಂದಿಗಿಂತಲೂ ವಿಶಿಷ್ಟಮಯವಾಗಿ ಹಾಗೂ ವಿಶ್ವಮಟ್ಟದಲ್ಲಿ ಹೆಸರು ಮಾಡುವ ನಿಟ್ಟಿನಲ್ಲಿ ಮಂಡ್ಯ ಜಿಲ್ಲೆಯಲ್ಲಿರುವ ಎಲ್ಲಾ ಸಾರ್ವಜನಿಕರು, ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ಎಲ್ಲಾ ಸಂಘ-ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರುಗಳು, ಎಲ್ಲಾ ಅಧಿಕಾರಿ- ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಮ್ಯಾರಥಾನ್ ಸ್ಪರ್ಧೆ ಯಲ್ಲಿ ಭಾಗವಹಿಸಿ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಸುಮಾರು 35,000 ದಿಂದ 40,000 ಸಾವಿರದವರೆಗೂ ಜನರು ಭಾಗವಹಿಸಬೇಕು.ಕಾರ್ಯಕ್ರಮದ ಉದ್ಘಾಟನೆಗೆ ಶ್ರೀ ಕ್ಷೇತ್ರ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಶ್ರೀ ಶ್ರೀ ನಿರ್ಮಲಾನಂದ ಸ್ವಾಮೀಜಿ ಅವರು ಆಗಮಿಸಲಿದ್ದು ಅವರೊಡನೆ ವಿನಯ್ ಗುರೂಜಿ ಹಾಗೂ ಚಲನಚಿತ್ರದ ನಟ-ನಟಿಯರು ಕೂಡ ಆಗಮಿಸಲಿದ್ದಾರೆ ಎಂದರು.

### ಪಶುಸಂಗೋಪನಾ ಮತ್ತು ರೇಷ್ಮೆ ಖಾತೆ ಸಚಿವ ಕೆ. ವೆಂಕಟೇಶ್ ಹೇಳಿಕೆ

# ಕನಕದಾಸರ ವಿಚಾರಧಾರೆಗಳು 20ನೇ ಶತಮಾನದಲ್ಲೂ ಜೀವಂತ

**ಪಿರಿಯಾಪಟ್ಟಣ:** 15ನೇ ಶತಮಾನದಲ್ಲಿ ತಮ್ಮ ಕೀರ್ತನಗಳ ಮೂಲಕ ಸಮಾಜ ಸುಧಾರಣೆ ಮಾಡಿದವರಲ್ಲಿ ಕನಕದಾಸರು ಅಗ್ರಗಣ್ಯರಾಗಿದರೆಂದು ಪಶುಸಂಗೋಪನಾ ಮತ್ತು ರೇಷ್ಮೆ ಖಾತೆ ಸಚಿವ ಕೆ. ವೆಂಕಟೇಶ್ ತಿಳಿಸಿದರು.



ಪಟ್ಟಣದ ಕನಕ ಸಮುದಾಯ ಭವನದಲ್ಲಿ ತಾಲೂಕು ಕುರುಬರ ಸಂಘ ಮತ್ತು ಕನಕ ಅಭಿವೃದ್ಧಿ ಸಹಕಾರ ಸಂಘ ಹಾಗೂ ಕನಕ ನೌಕರರ ಸಂಘದ ವತಿಯಿಂದ ಆಯೋಜಿಸಲಾಗಿದ್ದ ಸಂತ ಶ್ರೇಷ್ಠ ಭಕ್ತ ಕನಕದಾಸರ 537ನೇ ಕನಕ ಜಯಂತಿ ಕಾರ್ಯಕ್ರಮ, ಪ್ರತಿಭಾ ಪುರಸ್ಕಾರ, ಸಾಧಕರಿಗೆ ಸನ್ಮಾನ ಮತ್ತು 2025 ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕೀರ್ತನೆಗಳ ಮೂಲಕ ಸಮಾಜವನ್ನು ಕಟ್ಟುವ ಕೆಲಸ ಮಾಡುತ್ತಿದ್ದರು ಜಾತಿ ಜಾತಿಗಳ ನಡುವೆ ಇರುವ ತಾರತಮ್ಯವನ್ನು ಹೋಗಲಾಡಿಸಲು ನಿರಂತರ ಶ್ರಮಿಸಿದರು. ಸಮಾಜದಲ್ಲಿದ್ದ ವರ್ಣ ಮತ್ತು ವರ್ಗ ಸಂಘರ್ಷಗಳನ್ನು ಹೋಗಲಾಡಿಸಲು ಭಕ್ತ ಕನಕದಾಸರ ವೈಚಾರಿಕತೆಯ ದೃಷ್ಟಿಯು ಇಂದಿಗೂ ಪ್ರಸ್ತುತವಾಗಿದೆ ತಮ್ಮ ಸಾಹಿತ್ಯದ ಮೂಲಕ ಪ್ರತಿಯೊಬ್ಬರಲ್ಲಿಯೂ ಕೂಡ ಸಾಮಾಜಿಕ ಪ್ರಜ್ಞೆಯನ್ನು ಮೂಡಿಸುವ ಜವಾಬ್ದಾರಿಯನ್ನು ಕನಕದಾಸರು ಮಾಡಿದ್ದಾರೆ ಆದ್ದರಿಂದಲೇ ಇವರು ತಮ್ಮ ವಿಚಾರಧಾರೆಗಳ ಮೂಲಕ ಇಂದಿಗೂ ಜೀವಂತವಾಗಿದ್ದು ಇವರ ವ್ಯಕ್ತಿತ್ವ ಅಜರಾಮರವಾಗಿದೆ ಇವರ ವಿಚಾರಧಾರೆಗಳು ನಮ್ಮ ಜೀವನದಲ್ಲಿ ರೂಢಿಸಿಕೊಳ್ಳಬೇಕೆಂಬುದನ್ನು ನಾವೆಲ್ಲರೂ ತಿಳಿದುಕೊಳ್ಳಬೇಕು ಮನುಷ್ಯ ಬದುಕಿನಲ್ಲಿ ಯಾವ ರೀತಿ ಕನಕದಾಸರ ತತ್ವ ಸಿದ್ಧಾಂತಗಳನ್ನು ಅನುಸರಿಸಬೇಕು ಎಂಬುದನ್ನ ಈ ಹಿಂದೆಯೇ ತಿಳಿಸಿದ್ದಾರೆ ಇವುಗಳನ್ನು 20ನೇ ಶತಮಾನವಾದರೂ ನಾವು ಅನುಸರಿಸದೇ ಇರುವುದು ಬೇಸರದ ಸಂಗತಿಯಾಗಿದೆ. ಆದ್ದರಿಂದ ವರ್ಗ ರಹಿತ ಸಮಾಜದ ನಿರ್ಮಾಣಕ್ಕೆ ಕ್ರಾಂತಿಯ ಕಹಳೆಯನ್ನು ಊದಿದ್ದ ಕನಕದಾಸರ ಆದರ್ಶ ತತ್ವಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು ಇಂತಹ ಮಹನೀಯರ ಜಯಂತಿಗಳನ್ನು ಮಾಡುವುದರ ಮೂಲಕ ಜನರಿಗೆ ತಿಳುವಳಿಕೆ ಮಾಡುವ ಕೆಲಸವನ್ನು ಯುವ ಸಮುದಾಯ ಮಾಡಬೇಕಾಗಿದೆ. ಸಮುದಾಯದ ಮುಖಂಡರು ಹಲವು ಬೇಡಿಕೆಗಳನ್ನು ಸಲ್ಲಿಸಿದ್ದಾರೆ ಎಲ್ಲವನ್ನು ಸಹ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸಂಬಂಧಿಸಿದವರಿಗೆ ಸೂಚಿಸುತ್ತೇನೆ ಎಂದು ಭರವಸೆ ನೀಡಿದರು.

ಕೆ ಆರ್ ನಗರ ತಾಲೂಕು ವಿಧಾನಸಭಾ ಸದಸ್ಯ ಡಿ. ರವಿಶಂಕರ್ ಮಾತನಾಡಿ ಕನಕದಾಸರ ತತ್ವ , ಆದರ್ಶಗಳನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಮನುಷ್ಯರಾಗಿ ಹುಟ್ಟಿದ ಮೇಲೆ ಜಾತಿ ಧರ್ಮಗಳ ಆಧಾರದ ಮೇಲೆ ಹೊಡೆದಾಡಬಾರದೆಂಬ ಸಂದೇಶವನ್ನು ಕನಕದಾಸರು ನೀಡಿದ್ದಾರೆ ನಾವೆಲ್ಲರೂ ಒಂದೇ ಎಂಬ ಭಾವನೆಯಲ್ಲಿ ಜೀವನ ನಡೆಸಬೇಕೆಂಬುದು ಎಲ್ಲಾ ಮಹನೀಯರ ಸಂದೇಶವಾಗಿದೆ. ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗಬಾರದು ಇವುಗಳ ತತ್ವ ಸಿದ್ಧಾಂತಗಳ ಸಾರವನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕಬೇಕು.ಆಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಈ ತಾಲೂಕು ನನಗೆ ಅತ್ಯಂತ ಅಚ್ಚುಮೆಚ್ಚಿನ ಸ್ಥಳವಾಗಿದೆ ಸಂಕಷ್ಟ ಸಮಯದಲ್ಲಿ ನನ್ನ ಜೊತೆಗಿದ್ದು ನನಗೆ ಧೈರ್ಯ ಹೇಳುವ ಮೂಲಕ ಸದಾ ನನ್ನ ಏಳಿಗೆ ಬಯಸಿದ ನಿಮ್ಮೆಲ್ಲರ ಪ್ರೀತಿಗೆ ನಾನು ಸದಾಕಾಲ ಚಿರಋಣಿಯಾಗಿರುವೆ ಎಂದರು.

ತಾಲೂಕು ದಂಡಾಧಿಕಾರಿ ನಿಸರ್ಗ ಪ್ರಿಯ, ಕರ್ನಾಟಕ ರಾಜ್ಯ ಕುರುಬರ ಸಂಘದ ನಿಕಟಪೂರ್ವ ಅಧ್ಯಕ್ಷ ಬಿ.ಸುಬ್ರಮಣ್ಯ, ತಾಲೂಕು ಬಿಜೆಪಿ ಘಟಕದ ನಿಕಟ ಪೂರ್ವ ಅಧ್ಯಕ್ಷ ಎಂಎಂ ರಾಜೇಗೌಡ ,ತಾಲ್ಲೋಕು ಕೆಡಿಪಿ ಸದಸ್ಯ ಹಾಗೂ ಗ್ಯಾರಂಟಿ ಅನುಷ್ಠಾನ ಸಮಿತಿಯ ತಾಲೂಕು ಅಧ್ಯಕ್ಷ ನಿತಿನ್ ವೆಂಕಟೇಶ್ ಸೇರಿದಂತೆ ಇತರರು ಮಾತನಾಡಿದರು. ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು , ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಇದೇ ವೇಳೆ ಗೌರವಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕು ಕುರುಬರ ಸಂಘದ ಅಧ್ಯಕ್ಷ ಎಚ್ ಡಿ ಗಣೇಶ್, ಪ್ರಧಾನ ಕಾರ್ಯದರ್ಶಿ, ಸುನಿಲ್ ಕುಮಾರ್, ಗೌರವಾಧ್ಯಕ್ಷ ಡಿಎ ಜವರಪ್ಪ ಮೊದಲಾದವರು ಇದ್ದರು.

# ವಿಭಾಗ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಉದ್ಘಾಟನಾ ಸಮಾರಂಭ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಜೆಎಸ್ಎಸ್ ಶಿಕ್ಷಣ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 14 ರಿಂದ 17 ವರ್ಷ ವಯೋಮಿತಿಯ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಬಾಲಕ, ಬಾಲಕಿಯರ ಮೈಸೂರು ವಿಭಾಗ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಉದ್ಘಾಟನಾ ಸಮಾರಂಭವನ್ನು ಡಿಸೆಂಬರ್ 16 ರಂದು ನಗರದ ಜೆಎಸ್ಎಸ್ ಶಿಕ್ಷಣ ಸಂಸ್ಥೆಯ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಧ್ವಜಾರೋಹಣ ನೆರವೇರಿಸುವರು. ಶಾಸಕರಾದ ಎ.ಆರ್. ಕೃಷ್ಣಮೂರ್ತಿ ಅವರು ತಂಡಗಳ ಪರಿಚಯ ಮಾಡಿಕೊಡುವರು. ಶಾಸಕರಾದ ಎಚ್. ಎಂ. ಗಣೇಶ್ ಪ್ರಸಾದ್ ಅವರು ಕ್ರೀಡಾಧಿಕಾರಿಗಳ ಪರಿಚಯ ಮಾಡಿಕೊಡುವರು. ಶಾಸಕರಾದ ಎಂ.ಆರ್. ಮಂಜುನಾಥ್ ಅವರು ಕ್ರೀಡಾ ವಂದನೆ ಸ್ವೀಕರಿಸುವರು. ಶಾಸಕರಾದ ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ ಚಂದ್ರು, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಉಪಾಧ್ಯಕ್ಷರಾದ ಮಮತ, ಸದಸ್ಯರಾದ ಕುಮುದ, ಜೆಎಸ್ ಎಸ್ ಶಿಕ್ಷಣ ಸಂಸ್ಥೆಯ ಸಾರ್ವಜನಿಕ ಸಂಪರ್ಕಾಧಿಕಾರಿ ಆರ್. ಎಂ. ಸ್ವಾಮಿ, ಜೆಎಸ್ಎಸ್ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಎನ್. ಮಹದೇವಸ್ವಾಮಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಿಲ್ಲಾಧಿಕಾರಿ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ವಿಶೇಷ ಆಹ್ವಾನಿತರಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# ಸಮ್ಮೇಳನದಲ್ಲಿ ಪ್ರದರ್ಶನ ಮಳಿಗೆ ತೆರೆಯಲು ಅವಕಾಶ

**ಚಾಮರಾಜನಗರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು ಎಕ್ಸ್‌ಪ್ಲೋರಿಂಗ್ ನೇಚರ್ಸ್ ಫಾರ್ಮಸಿ: ಪೊಟೆನ್ಸಿಯಲ್ ಆಫ್ ಮೆಡಿಷನಲ್ ಆಂಡ್ ಆರೋಮೇಟಿಕ್ ಪ್ಲಾಂಟ್ಸ್ ಆಂಡ್ ದೇರ್ ಕನ್ಸರ್‌ವೇಷನ್ ವಿಷಯದ ಕುರಿತು ಜನವರಿ 7 ರಿಂದ 9 ರವರೆಗೆ ರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಿದ್ದು, ಈ ಸಮ್ಮೇಳನದಲ್ಲಿ ಪ್ರದರ್ಶನದ ಮಳಿಗೆ ತೆರೆಯಲು ಅವಕಾಶವಿದೆ. ಸಮ್ಮೇಳನದಲ್ಲಿ ಔಷಧೀಯ ಮತ್ತು ಸುಗಂಧ ಸಸ್ಯಗಳ ಕುರಿತ ಪ್ರದರ್ಶನ ಮಳಿಗೆಯನ್ನು (10ಥ10 ಅಡಿ ವಿಸ್ತೀರ್ಣ) ಹಾಕಲು ಅವಕಾಶ ಕಲ್ಪಿಸಲಾಗಿದೆ. ಸಮ್ಮೇಳನದಲ್ಲಿ ರಾಜ್ಯ ಹಾಗೂ ಹೊರ ರಾಜ್ಯದ ಪ್ರತಿನಿಧಿಗಳು ಭಾಗವಹಿಸುವುದರಿಂದ ಔಷಧೀಯ ಮತ್ತು ಸುಗಂಧ ಸಸ್ಯ ಆಧಾರಿತ ಉತ್ಪನ್ನಗಳಿಗೆ ಹೆಚ್ಚಿನ ಪ್ರಚಾರ ದೊರೆಯಲಿದೆ. ಪ್ರದರ್ಶನದ ಮಳಿಗೆಯನ್ನು ಹಾಕಲು ಇಚ್ಚಿಸುವ ಆಸಕ್ತ ಕಂಪನಿಗಳು ಮತ್ತು ಉದ್ಯಮದಾರರು ಡಿಸೆಂಬರ್ 31ರೊಳಗೆ ಅಕಾಡೆಮಿಯ ಅಧಿಕಾರಿಗಳ ಮೊ. ಸಂ 9880405181, 9743084194 ಹಾಗೂ 9845258894 ಅನ್ನು ಸಂಪರ್ಕಿಸಬಹುದು. ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎ.ಎಂ ರಮೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುವಕರ ಕಲಾಪ್ರತಿಭೆ ಹೊರತರಲು ಯುವಜನೋತ್ಸವ ಸಹಕಾರಿ

**ಚಾಮರಾಜನಗರ:** ಯುವಜನರಲ್ಲಿರುವ ಕಲಾಪ್ರತಿಭೆಯನ್ನು ಹೊರತರಲು ಯುವಜನೋತ್ಸವ ಸಹಕಾರಿಯಾಗಿದೆ ಎಂದು ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನಾ ಅವರು ತಿಳಿಸಿದರು. ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರು ಯುವ ಕೇಂದ್ರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾಮಟ್ಟದ ಯುವಜನೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯುವಕರಲ್ಲಿ ನಾನಾ ಬಗೆಯ ಕಲಾಪ್ರಕಾರಗಳಿವೆ. ಅವುಗಳನ್ನು ಹೊರಜಗತ್ತಿಗೆ ಪರಿಚಯಿಸುವ ಮೂಲಕ ಯುವಜನತೆಯನ್ನು ಪ್ರೋತ್ಸಾಹಿಸಲು ಸರ್ಕಾರವು ನಿರಂತರವಾಗಿ ಪ್ರತಿವರ್ಷ ಯುವಜನಮೇಳಗಳನ್ನು ಆಯೋಜಿಸುತ್ತಿದೆ. ಜಿಲ್ಲೆ, ರಾಜ್ಯಮಟ್ಟದಲ್ಲಿ ಗೆದ್ದು ಜಿಲ್ಲೆಗೆ ಕೀರ್ತಿ ತರಬೇಕು. ಹಾಗೆಯೇ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಪಾಲ್ಗೊಳ್ಳಲು ಸಂಕಷ್ಟದಲ್ಲಿರುವ ಯುವಜನರಿಗೆ ಸರ್ಕಾರ ಅಗತ್ಯ ನೆರವು ನೀಡಬೇಕಾಗಿದೆ ಎಂದು ಮುನ್ನಾ ಅವರು ತಿಳಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣ ಸಮಿತಿ ಸದಸ್ಯರಾದ ಶ್ರೀನಿವಾಸಪ್ರಸಾದ್ ಮಾತನಾಡಿ ವಿವಿಧ ಸ್ಪರ್ಧೆಗಳ ಮೂಲಕ ಜಿಲ್ಲೆಯ ಯುವಕ, ಯುವತಿಯರನ್ನು ಮುಖ್ಯವಾಹಿನಿಗೆ ತರಲು ಯುವಜನೋತ್ಸವ ಆಯೋಜಿಸಿ ಜಿಲ್ಲಾಡಳಿತ ಉತ್ತಮ ಪ್ರಯತ್ನ ಮಾಡುತ್ತಿದೆ. ಯುವಜನತೆ ಸತತ ಪರಿಶ್ರಮದ ಮೂಲಕ ತಮ್ಮಲ್ಲಿರುವ ಕಲಾಪ್ರತಿಭೆ ಅನಾವರಣಗೊಳಿಸಲು ಮುಂದಾಗಬೇಕು ಎಂದರು. ಕರ್ನಾಟಕ ಜಾನಪದ ಅಕಾಡಮಿ ಸದಸ್ಯರಾದ ದೇವಾನಂದ್ ವರಪ್ರಸಾದ್ ಅವರು ಆಧುನೀಕತೆ, ಜಾಗತೀಕರಣದಿಂದ ಈ ನೆಲದ ಜನಪದ ಸಂಸ್ಕೃತಿ ಮರೆಯಾಗುತ್ತಿದೆ. ಯುವಕರು ತಮ್ಮನ್ನು ತಾವು ಅರಿಯಲು ಯುವಜನೋತ್ಸವ ವೇದಿಕೆಯಾಗಲಿದೆ. ಶಿಸ್ತು, ಸಂಯಮ, ಕ್ರಿಯಾಶೀಲ ಚಿಂತನೆ, ವ್ಯಕ್ತಿತ್ವ ವಿಕಸನಕ್ಕೆ ಯುವಜನೋತ್ಸವ ನೆರವಾಗಲಿದೆ. ಯುವಕರು ಇದನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಕಿವಿಮಾತು ಹೇಳಿದರು.

ಸಾಹಿತಿ, ಚಿಂತಕರು ಹಾಗೂ ಬರಹಗಾರರಾದ ಮಹದೇವ ಶಂಕನಪುರ ಅವರು ಮಾತನಾಡಿ ಇಂದಿನ ವಿದ್ಯಾರ್ಥಿಗಳು ಬರೀ ಓದುವುದಷ್ಟೆ ಅಲ್ಲ, ಸಾಹಿತ್ಯ, ಕವಿತೆ ರಚನೆ, ಹಾಡು ಬರೆಯುವುದು, ನಾಟಕಗಳಲ್ಲಿ ಅಭಿನಯಿಸುವಂತಹ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳುವುದು ಅನಿವಾರ್ಯವಾಗಿದೆ. ಕನ್ನಡದ ವರನಟ ಡಾ. ರಾಜ್‌ಕುಮಾರ್, ಪುನೀತ್ ರಾಜ್‌ಕುಮಾರ್ ಈ ನೆಲದ ಸಾಂಸ್ಕೃತಿಕ ರಾಯಭಾರಿಯಾಗಿದ್ದರು. ಅವರ ಮಾದರಿಯಲ್ಲಿಯೇ ಇಂದಿನ ಯುವಜನತೆ ಮುನ್ನೆಡೆಯಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನೆಹರು ಯುವ ಕೇಂದ್ರದ ನಿವೃತ್ತ ಪ್ರಾದೇಶಿಕ ಜಂಟಿ ನಿರ್ದೇಶಕರಾದ ಎಂ.ಎನ್. ನಟರಾಜು ಮೊದಲಾದವರು ಇದ್ದರು.

# ಯಶಸ್ವಿ ಪ್ರಯೋಗ ಪ್ರಚಂಡ ರಾವಣ

**ಹಾಸನ:** ಜಿಲ್ಲಾ ಕನ್ನಡ ರಂಗಭೂಮಿ ಕಲಾವಿದರ ಸಂಘದ ಕಲಾವಿದರು ಗಾಡೇನಹಳ್ಳಿ ವೀರಭದ್ರಾಚಾರ್ ನಿರ್ದೇಶನದಲ್ಲಿ ದಿವಂಗತ ಕಣಗಲ್ ಪ್ರಭಾಕರ್ ವಿರಚಿತ ಪ್ರಚಂಡ ರಾವಣ ನಾಟಕ ಪ್ರದರ್ಶಿಸಿದರು. ಈ ನಾಟಕವನ್ನು ದಿವಂಗತ ರಂಗಪ್ಪದಾಸ್‌ರವರು ಈ ಹಿಂದೆ ನಿರ್ದೇಶನ ಮಾಡಿದ್ದರು. ಇವರ 2ನೇ ವರ್ಷದ ನೆನಪು ಮತ್ತು ಸಂಘದ ಉದ್ಘಟನಾ ಕಾರ್ಯಕ್ರಮದಲ್ಲಿ ಪ್ರದರ್ಶಿತವಾದ ಪ್ರಚಂಡ ರಾವಣ ನಾಟಕಕ್ಕೆ ಪ್ರೇಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರು. ಈಗೀಗ ಪೌರಾಣಿಕ ನಾಟಕ ಎಂಟು ಗಂಟೆಗೆ ಮೀರಿ ವಿಸ್ತರಿಸಿವೆ. ಇಲ್ಲಿ ರಂಗಗೀತೆ, ಹಾಡೇ ಪ್ರಧಾನ ಅಂಶವಾಗಿದೆ. ಈ ವಿಚಾರ ಪ್ರಸ್ತಾಪಿಸಿ ಮಾತನಾಡಿದ ಕರ್ನಾಟಕ ರಂಗ ಸಂಗೀತ ಪರಿಷತ್ ಗೌ.ಅಧ್ಯಕ್ಷರು ಹೆಚ್.ಎಸ್.ಗೋವಿಂದೇಗೌಡರು ಪೌರಾಣಿಕ ನಾಟಕಗಳು ಬಹಳ ಎಂದರೆ ಮೂರ್ನಾಲ್ಕು ಗಂಟೆಗಳಲ್ಲಿ ಮುಗಿದರೆ ಚೆನ್ನ ಎಂದು ಸೂಚ್ಯವಾಗಿ ಹೇಳಿದರು. ಪ್ರಚಂಡ ರಾವಣ ನಾಟಕದ ಕಾಲಾವಧಿ ಬಹಳ ಎಂದರೆ ಮೂರು ಗಂಟೆ. ನಾಟಕದಲ್ಲಿ ಹಾಡಿಗಿಂತ ಮಾತು ಸಂಭಾಷಣೆಗೆ ಹೆಚ್ಚಿನ ಒತ್ತು ನೀಡಿದೆ. ಪಂಚವಟಿ ದೃಶ್ಯವನ್ನು ಹೆಚ್ಚಾಗಿ ತರಲಾಗಿತ್ತು. ನಾಟಕದ ಮೂರು ಪ್ರಧಾನ ಪಾತ್ರಗಳು ರಾವಣ, ಕಾಲ ಭೈರವ ಮತ್ತು ಆಂಜನೇಯ. ಈ ಪಾತ್ರಗಳನ್ನು ಅನುಕ್ರಮವಾಗಿ ಜಗದೀಶ್ ರಾಮಘಟ್ಟ, ಕೆ.ಟಿ.ಈಶ್ವರಪ್ಪ ಮತ್ತು ಹಂಚೂರು ನಿರಂಜನ್ ಯಶಸ್ವಿಯಾಗಿ ನಿಭಾಯಿಸಿ ನಾಟಕದ ಯಶಸ್ವಿ ಪ್ರಯೋಗಕ್ಕೆ ಅವರದೇ ಕಾಣಿಕೆ ಹೆಚ್ಚಿನದಾಗಿತ್ತು. ರಾಮನ ಪಾತ್ರ ಹೀರೋ ನಿಜ ಆದರೂ ರಾವಣ ಆರ್ಭಟದಲ್ಲಿ ಜಿರೋ ಆಗಿಬಿಡುತ್ತದೆ. ರಾವಣನಿಗೆ ಸರಿಸಾಟಿಯಾಗಿ ರಾಮನ ಪಾತ್ರದಲ್ಲಿ ಕದಾಳು ರಾಮಲಿಂಗೇಗೌಡರು ರಂಗಗೀತೆಗಳಿಂದ ಪಾತ್ರಕ್ಕೆ ಜೀವ ತುಂಬಿದರು. ಪಂಚವಟಿ ದೃಶ್ಯ ಆಳವಡಿಸಿ ರಾಮನಿಗೆ ಭರತನಾಗಿ ಚನ್ನಂಗಿಹಳ್ಳಿ ಶಶಿಕುಮಾರ್ ಹಾಡುಗಾರಿಕೆಯಲ್ಲಿ ಸಾತ್ ನೀಡಿದರು. ಸೀತೆ ಪಾತ್ರದಲ್ಲಿ ರಾಣಿ ಚರಾಶ್ರೀಯವರ ಹಾಡುಗಾರಿಕೆ ಚೆನ್ನಾಗಿರಲಿಲ್ಲ ಎಂಬುದು ಕಲಾವಿದರ ಅಭಿಪ್ರಾಯವಾಗಿತ್ತು. ನಾಟಕದ ಮಧ್ಯೆ ಬ್ರೇಕ್ ತೆಗೆದುಕೊಂಡು ಕಾಫಿ ಕುಡಿಯಲು ಹೊರಟು ಹೀಗೆ ಚರ್ಚಿಸಿದರು. ತುಮಕೂರು ಮೈಸೂರು, ಬೆಂಗಳೂರಿನಿಂದ ಬರುವ ವೃತ್ತಿ ಕಲಾವಿದೆಯರ ಅಭಿನಯ ಹಾಡುಗಾರಿಕೆಗೆ ಹೋಲಿಸಿ ನಿರಾಶೆ ವ್ಯಕ್ತಪಡಿಸಿದರು. ಹಾಗೇ ಹೋಲಿಸಿದರೆ ಸೂತ್ರದಾರಿ ಪಾತ್ರದ ಮಂಜುಳ ರಮೇಶ್‌ರ ಎರಡು ಹಾಡು, ಮಂಡೋದರಿ ಪಾತ್ರದ ಮಮತ ಹಾಡು ಅಭಿನಯ ಒಂದು ಹಂತಕ್ಕೆ ಪರ್ವಾಗಿಲ್ಲ ಎಂಬ ಅಭಿಪ್ರಾಯ ಕಲಾವಿದರದು. ಬ್ರಹ್ಮನ ಪಾತ್ರದಲ್ಲಿ ಕಂಚಮಾರನಹಳ್ಳಿ ರಾಮಣ್ಣ ಮೀಸೆ ಬೋಳಿಸದೇ ಮೇಕಪ್ ಮಾಡಿಕೊಂಡಿದ್ದು ಸಾಣೇನಹಳ್ಳಿ ಸೋಮಣ್ಣನಿಗೆ ಸರಿ ಕಾಣಲಿಲ್ಲ. ಅಶೋಕ ವನದಲ್ಲಿರುವ ಸೀತೆ ಬೆರಳಿಗೆ ಉಂಗುರ ಧರಿಸಿದ್ದು, ಆಂಜನೇಯ ಸೈಡ್‌ವಿಂಗ್‌ನಿಂದ ಉಂಗುರು ಕ್ಯಾಚ್ ಹಿಡಿದು ಸೀತೆಗೆ ತಲುಪಿಸಿದ್ದು ವಿಭಿಷಣ ಪಾತ್ರದಾರಿ ಕಾರ್ಲೆ ಗೋವಿಂದೇಗೌಡರು ಹಾಡು ಮುಗಿಯುವ ಮೊದಲೇ ರಂಗಕ್ಕೆ ಬಂದು ಹಿಂತಿರುಗಿದ್ದು ಕಾಮೆಂಟ್ಸ್ ಮಾಡಿದ ಪ್ರೇಕ್ಷಕರು ಎಷ್ಟೊಂದು ಸೂಕ್ಷ್ಮಮತಿಗಳು ಎನಿಸಿತು. ಅಕರಾಕ್ಷ ಮತ್ತು ಮಕರಾಕ್ಷ ಪಾತ್ರಗಳು (ಬೀಕನಹಳ್ಳಿ ಚಂದ್ರೇಗೌಡ, ಸಿ.ಎಂ.ಶ್ರೀಕಂಠಪ್ಪ,) ಹಾಸ್ಯಕ್ಕೆ ಸೀಮಿತ. ಪೋಷಕ ಪಾತ್ರಗಳಲ್ಲಿ ಕುಂಭಕರ್ಣ-ಶರತ್ ಜೆ., ಇಂದ್ರಜೀತ್-ರಮೇಶ್ ರಂಗದ ಮೇಲೆ ಬರುತ್ತಾರೆ.



ಸಕಲೇಶಪುರ ಕ್ಷೇತ್ರದ ಮಾಜಿ ಶಾಸಕರು ಹೆಚ್. ಕೆ.ಕುಮಾರಸ್ವಾಮಿ ದೀಪ ಬೆಳಗಿಸಿ ಉದ್ಘಾಟಿಸಿದರು. ಹಾಸನ ತಾ. ಜೆಡಿಎಸ್ ಅಧ್ಯಕ್ಷರು ಎಸ್ .ದ್ಯಾವೇಗೌಡರು, ಪತ್ರಕರ್ತ ಸಂಘದ ಮಾಜಿ ಅಧ್ಯಕ್ಷರು ರವಿ ನಾಕಲಗೊಡು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷರು ಈ.ಕೃಷ್ಣೇಗೌಡರು, ನಿವೃತ್ತ ಪ್ರಾಂಶುಪಾಲರು ಜಿ.ಎನ್.ಅನುಸೂಯ, ಎಂ.ಆರ್. ಚಂದ್ರಶೇಖರ್, ರಂಗ ನಿರ್ದೇಶಕರು ಎ.ಸಿ.ರಾಜು, ಕಲಾವಿದರಾದ ಬಿಟ್ಟಗೋಡನಹಳ್ಳಿ ರಮೇಶ್ ಗೌಡಪ್ಪ, ಬೆಂಗಳೂರಿನ ತಿಮ್ಮರಸಪ್ಪ, ಅಪ್ಪಾಜಿಗೌಡರು. ಯರೇಹಳ್ಳಿ ಮಂಜೇಗೌಡರು, ಅನಂತಮೂರ್ತಿ ಮೊದಲಾದವರು ಇದ್ದರು. ಪೊಲೀಸ್ ನಂಜಪ್ಪ ಮತ್ತು ಜಿ.ಆರ್.ಶ್ರೀಕಾಂತ್ ಪ್ರಾರ್ಥನೆ ಗೀತೆಗಳನ್ನು ಹಾಡಿದರು. ಸಾಹಿತಿ ಗೊರೂರು ಅನಂತರಾಜು ನಿರೂಪಿಸಿದರು. ಸಂಘದ ಅಧ್ಯಕ್ಷರು ಜಗದೀಶ್ ರಾಮಘಟ್ಟ ವಂದಿಸಿದರು.

# ಹನುಮ ಜಯಂತಿ; 108 ಯೋಗ ನಮಸ್ಕಾರ

**ಚಿಕ್ಕಬಳ್ಳಾಪುರ:** ಹನುಮ ಜಯಂತಿ ಪ್ರಯುಕ್ತ ಶುಕ್ರವಾರ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದ ಒಳಾಂಗಣದಲ್ಲಿ ''ಸರ್. ಎಂ ವಿಶ್ವೇಶ್ವರಯ್ಯ ಯೋಗ ಕೇಂದ್ರ, ಪತಂಜಲಿ ಯೋಗ ಶಿಕ್ಷಣ ಸಮಿತಿ, ಚಿಕ್ಕಬಳ್ಳಾಪುರ ಶಾಖೆ ಇವರ ಸಂಯುಕ್ತ ಆಶ್ರಯದಲ್ಲಿ 108 ಹನುಮಾನ್ ಆಸನಗಳ ಯೋಗ ನಮಸ್ಕಾರ ನೂರಾರು ಜನರ ಸಮ್ಮುಖದಲ್ಲಿ ಮಾಡಲಾಯಿತು. 80 ವರ್ಷದ ವೃದ್ದರು, ಮಹಿಳೆಯರು, 108 ಯೋಗ ನಮಸ್ಕಾರಗಳನ್ನು ಮಾಡಿ ಗಮನ ಸೆಳೆದರು.

ಈ ಸಂದರ್ಭದಲ್ಲಿ ಹೆಚ್.ಎಸ್ ಗಾರ್ಡ್ ನಿವಾಸಿ ಡಾ.ರಾಮು ಅವರು ಮಾತನಾಡಿ ಕಳೆದ 54 ವರ್ಷಗಳಿಂದ ಯೋಗಾಭ್ಯಾಸ ಮತ್ತು ಪ್ರಾಣಾಯಾಮವನ್ನು ಮಾಡುತ್ತಾ ಬಂದಿದ್ದೇನೆ ಆದ್ದರಿಂದ 80ರ ಇಳಿಯವಯಸ್ಸಲ್ಲೂ ಆರೋಗ್ಯಕರ ಮನಸ್ಸು ಮತ್ತು ದೇಹವನ್ನು ಹೊಂದಲು ಸಾಧ್ಯವಾಗಿದೆ.ವೃತ್ತಿಯಲ್ಲಿ ವೈದ್ಯನಾಗಿ ನಾನು ಯಶಸ್ಸು ಕಾಣಲು ಯೋಗ ಅಭ್ಯಾಸವೇ ಕಾರಣ.ದಿನ ನಿತ್ಯ ಒಂದು ತಾಸು ಯೋಗ ಮಾಡಿದರೆ. ಮಧುಮೇಹ ಕಾಯಿಲೆಗೆ ಯಾವುದೇ ವ್ಯಕ್ತಿ ಒಳಗಾಗುವುದಿಲ್ಲ. ಮಧುಮೇಹ ಬರದಿದ್ದರೆ ಶೇ.70 ರಷ್ಟು ಇತರ ಕಾಯಿಲೆಗಳನ್ನು ತಡೆಗಟ್ಟಿದಂತೆ ಆಗುತ್ತದೆ. ಇಂದಿನ ಅತ್ಯಾಧುನಿಕ ಜೀವನ ಶೈಲಿ, ಆಹಾರ ಪದ್ದತಿಯಿಂದ ರಕ್ತದೊತ್ತಡ, ಮಧುಮೇಹ ಹಾಗೂ ಇನ್ನಿತರೇ ಕಾಯಿಲೆಗಳಿಗೆ ಜನರು ಹೆಚ್ಚಾಗಿ ತುತ್ತಾಗುತ್ತಿದ್ದಾರೆ. ಯೋಗಾಭ್ಯಾಸವನ್ನು ಪ್ರತಿಯೊಬ್ಬರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪ್ರತಿನಿತ್ಯ ಅಭ್ಯಾಸ ಮಾಡಿದರೆ ವೈದ್ಯರ ಬಳಿಗೆ ಹೋಗುವ ಪ್ರಮೇಯವೇ ಬರುವುದಿಲ್ಲ. ಆ ರೀತಿಯಲ್ಲಿ ಎಲ್ಲರು ಯೋಗ ಜೀವನಕ್ಕೆ ಬದಲಾದರೆ ಬಹುತೇಕ ವೈದ್ಯರಿಗೆ ಕೆಲಸವೇ ಇಲ್ಲದಂತಾಗುತ್ತದೆ. ಅಷ್ಟು ಪರಿಣಾಮಕಾರಿ ಪ್ರಯೋಜನಗಳನ್ನು 'ಯೋಗ' ಪದ್ದತಿ ಹೊಂದಿದೆ. ಯೋಗ ಆಸನಗಳ ಜೊತೆಗೆ ಪ್ರಾಣಾಯಾಮಗಳನ್ನು ಎಲ್ಲರು ಮಾಡುವಂತೆ ಸಲಹೆ ನೀಡಿದರು.

ಯೋಗ ಗುರುಗಳಾದ ಲೋಕನಾಥ್ ಅವರು '' ಯೋಗ ಪದ್ದತಿ ಆರೋಗ್ಯಕ್ಕೆಹಾಗೂ ಉತ್ತಮ ಜೀವನ ಕ್ರಮಕ್ಕೆ ಅತಿ ಉಪಯೋಗಕಾರಿ ಅನ್ನುವುದರಲ್ಲಿ ಸಂದೇಹವಿಲ್ಲ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಯೋಗಾಭ್ಯಾಸದ ವಾತಾವರಣವನ್ನುಇನ್ನೂ ಹೆಚ್ಚಿನ ಮಟ್ಟದಲ್ಲಿ ಮೂಡಿಸಬೇಕು ಆ ನಿಟ್ಟಿನಲ್ಲಿ ಚಿಕ್ಕಬಳ್ಳಾಪುರ ನಗರದ 5 ಕೇಂದ್ರಗಳಲ್ಲಿ ಯೋಗಾಭ್ಯಾಸ ದಿನನಿತ್ಯ ನಡೆಯುತ್ತಿದೆ. ಸರ್.ಎಂ ವಿಶ್ವೇಶ್ವರಯ್ಯ ಯೋಗ ಕೇಂದ್ರದ ತಂಡದವರು ಜಿಲ್ಲಾ ಕ್ರೀಡಾಂಗಣದ ಒಳಾಂಗಣದಲ್ಲಿ ಪ್ರತಿ ನಿತ್ಯ ಬೆಳಿಗ್ಗೆ 5. 30 ರಿಂದ 7 ಗಂಟೆ ವರೆಗೂ ಉಚಿತ ಯೋಗ ತರಬೇತಿಯನ್ನು ನೀಡುತ್ತಿದ್ದಾರೆ. ಆಸಕ್ತರು ಈ ಕೇಂದ್ರಕ್ಕೆ ಆಗಮಿಸಿ ಶುಲ್ಕ ರಹಿತವಾಗಿ ಯೋಗ ಕಲಿಯಬಹುದು.

ಇಂತಹ ಉಚಿತ ಯೋಗ ಕಲಿಕೆಗೆ ಸಹಕಾರ ನೀಡುತ್ತಿರುವ ಯುವ ಜನ ಸೇವಾ ಇಲಾಖೆಯ ಅಧಿಕಾರಿಗಳು ಸಿಬ್ಬಂದಿ ಹಾಗೂ ಜಿಲ್ಲಾಡಳಿತದ ಅಧಿಕಾರಿಗಳಿಗೆ ಧನ್ಯವಾದ ತಿಳಿಸಲು ಇಚ್ಚೆಸುತ್ತೇನೆ. ನಮ್ಮ ಆಹ್ವಾನವನ್ನು ಮನ್ನಿಸಿ ಹನುಮ ಜಯಂತಿಯಂದು ಇಲ್ಲಿಗೆ ಆಗಮಿಸಿ 108 ಯೋಗ ನಮಸ್ಕಾರಗಳನ್ನು ಮಾಡುವ ಮೂಲಕ ಯೋಗ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದ ಸರ್ವರಿಗೂ ಧನ್ಯವಾದಗಳನ್ನು ತಿಳಿಸಿದರು

108 ನಮಸ್ಕಾರಗಳ ಯೋಗಾಭ್ಯಾಸದಲ್ಲಿ ನೂರಾರು ಜನರು ತೊಡಗಿ ಭಕ್ತಿ ಪೂರ್ವಕ ನಮನಗಳನ್ನು ಹನುಮನಿಗೆ ಸಲ್ಲಿಸಿದರು. ಈ ವೇಳೆ ಉಪನ್ಯಾಸಕರು ಹಾಗೂ ಬೋಧಕರಾದ ಲೋಕನಾಥ, ಯೋಗ ಗುರುಗಳಾದ ರಾಮಚಂದ್ರ ರೆಡ್ಡಿ,ಮಂಚನಬಲೆ ರವಿ, ವೀಣಾ ಲೋಕನಾಥ್, ಡಾ. ಮಹೇಶ್, ಡ್ಯಾನ್ಸ್ ಶ್ರೀನಿವಾಸ್, ಮೂರ್ತಿ, ಪ್ರಭಾಕರ್, ಸೀನಪ್ಪ, ಹನುಮಂತಪ್ಪ, ನಗರ ಸಭೆ ಸದಸ್ಯ ವೆಂಕಟೇಶ್, ಯೋಗಾಸಕ್ತರಾದ ಮಂಜುನಾಥ್, ರಮೇಶ್, ಗೀತಾ ಇನ್ನು ಮುಂತಾದವರು ಇದ್ದರು. ಯೋಗಾಸನಕ್ಕೂ ಮುನ್ನ ಹನುಮಾನ್ ಚಾಲಿಸವನ್ನು ಪಠಿಸಲಾಯಿತು.

# ಮೌಲ್ಯಗಳ ಪರಿಪಾಲನೆಯಿಂದ ಬದುಕು ಉಜ್ವಲ

**ಶ್ರೀರಂಭಾಪುರಿ ಪೀಠ(ಬಾಳೆಹೊನ್ನೂರು):** ಮನುಷ್ಯನಿಗೆ ಬದುಕಿನಲ್ಲಿ ಭರವಸೆ ಮತ್ತು ಕನಸುಗಳು ಇರಬೇಕು. ಧರ್ಮ ಮತ್ತು ಸಂಸ್ಕೃತಿಯ ಆದರ್ಶಗಳನ್ನು ಅನುಸರಿಸಿ ಬಾಳಿದರೆ ಜೀವನದಲ್ಲಿ ಶ್ರೇಯಸ್ಸು ನಿಶ್ಚಿತ. ಜೀವನ ಮೌಲ್ಯಗಳ ಪರಿಪಾಲನೆಯಿಂದ ಬದುಕು ಉಜ್ವಲಗೊಳ್ಳುತ್ತದೆ

ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ಶ್ರೀ ರಂಭಾಪುರಿ ಪೀಠದಲ್ಲಿ ಜರುಗಿದ ಲಿಂ.ಶ್ರೀ ರಂಭಾಪುರಿ ವೀರರುದ್ರಮುನಿ ಜಗದ್ಗುರುಗಳವರ ಜನ್ಮ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜೀವನದಲ್ಲಿ ಉನ್ನತಿ ಸಾಧಿಸಬೇಕಾದರೆ ಜನಬಲ ಹಣಬಲ ತೋಳ್ಬಲ ಇದ್ದರೆ ಸಾಲದು. ಅದರೊಂದಿಗೆ ದೈವ ಬಲವೂ ಮುಖ್ಯ. ಆಶಾವಾದಿ ಕಷ್ಟ ಕಾಲದಲ್ಲೂ ಅವಕಾಶವನ್ನು ಹುಡುಕುತ್ತಾನೆ. ಕಲಿತ ಮನುಷ್ಯ ಮರೆಯಲು ಸಾಧ್ಯವಾಗುವುದಿಲ್ಲ. ವೀರಶೈವ ಧರ್ಮ ಸಂಸ್ಕೃತಿಯನ್ನು ಬೆಳೆಸುವ ನಿಟ್ಟಿನಲ್ಲಿ ಲಿಂ.ಶ್ರೀ ಜಗದ್ಗುರು ವೀರರುದ್ರಮುನಿ ಶಿವಾಚಾರ್ಯ ಭಗವತ್ಪಾದರು ಶ್ರಮಿಸಿದ್ದನ್ನು ಎಂದಿಗೂ ಮರೆಯಲಾಗದು. ರಚನಾತ್ಮಕ ಗುಣಾತ್ಮಕ ಸತ್ಕಾರ್ಯಗಳಿಂದ ಎಲ್ಲರ ಮನ ಮಂದಿರಗಳಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ. ವ್ಯಕ್ತಿಯನ್ನು ನೋಡಿ ಮಾಡುವ ಸ್ನೇಹಕ್ಕಿಂತ ವ್ಯಕ್ತಿತ್ವವನ್ನು ನೋಡಿ ಮಾಡುವ ಸ್ನೇಹ ದೊಡ್ಡದೆಂದು ಭಕ್ತ ಸಮುದಾಯಕ್ಕೆ ಬೋಧಿಸುತ್ತಿದ್ದರು. ಶ್ರೀ ಜಗದ್ಗುರು ರೇಣುಕಾಚಾರ್ಯರಿಂದ ಬೋಧಿಸಲ್ಪಟ್ಟ ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದ ಸಾರವನ್ನು ಭಕ್ತ ಸಂಕುಲಕ್ಕೆ ಮನವರಿಕೆ ಮಾಡಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ. ಅವರು ಬದುಕಿ ಬಾಳಿದ್ದರೆ ಇಂದಿಗೆ ನೂರು ವರುಷ ಪರಿಪೂರ್ಣವಾಗುತ್ತಿತ್ತು. ಆದರೆ ಭಗವಂತ ತನಗೆ ಬೇಕೆಂದು ಎತ್ತಿಕೊಂಡ. ಅವರ ಜನ್ಮ ಶತಮಾನೋತ್ಸವ ಶ್ರೀ ರಂಭಾಪುರಿ ಪೀಠದಲ್ಲಿ ವಿದ್ಯುಕ್ತವಾಗಿ ಆಚರಿಸುತ್ತಿರುವುದು ತಮಗೆ ಸಂತೋಷ ತಂದಿದೆ. ಅವರ ಜೀವನಾದರ್ಶಗಳನೊಳಗೊಂಡ ಜೀವನ ಚರಿತ್ರೆ ''ಧರ್ಮ ಚೇತನ'' ನಾಮಾಂಕಿತದಲ್ಲಿ ಕೃತಿಯೊಂದು ಬಿಡುಗಡೆಗೊಳ್ಳುತ್ತಿರುವುದು ತಮಗೆ ತೃಪ್ತಿಯನ್ನು ತಂದಿದೆ. ಮುಂದಿನ ಆರು ತಿಂಗಳು ವಿವಿಧ ಸಮಾರಂಭಗಳಲ್ಲಿ ಶ್ರೀ ರುದ್ರಮುನಿ ಜಗದ್ಗುರುಗಳ ಜನ್ಮ ಶತಮಾನೋತ್ಸವ ಆಚರಿಸಲಾಗುವುದು. ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿಗಳಾದ ಸಿ.ಎಚ್.ಬಾಳನಗೌಡರು ಮೂರು ದಶಕಕಕ್ಕೂ ಮಿಕ್ಕಿ ಶ್ರೀ ಪೀಠದ ಆದರ್ಶ ಚಿಂತನಗಳನ್ನು ಮಾಧ್ಯಮದವರಿಗೆ ಕಳಿಸುವ ಬಹು ದೊಡ್ಡ ಕಾರ್ಯ ಮಾಡುತ್ತಿದ್ದಾರೆ. ಇದೇ ಅಪೂರ್ವ ಸಂದರ್ಭದಲ್ಲಿ ಅವರ ಜನ್ಮ ಅಮೃತ ಮಹೋತ್ಸವ ಆಚರಿಸುತ್ತಿರುವುದು ಹಾಗೂ ಅವರ ಜೀವನ ಯಶೋಗಾಥೆ ಸಾರುವ ''ಬಾಳ ಹೊಂಗಿರಣ'' ಕೃತಿ ಪ್ರಕಟಗೊಳ್ಳುತ್ತಿರುವುದು ತಮಗೆ ಅತ್ಯಂತ ಸಂತೋಷವನ್ನು ಉಂಟು ಮಾಡಿದೆ. ಇದೇ ಸಂದರ್ಭದಲ್ಲಿ ಅವರಿಗೆ ''ವಾರ್ತಾ ಸೇವಾ ಸಂಜೀವಿನಿ'' ಪ್ರಶಸ್ತಿ ಕೊಟ್ಟು ಆಶೀರ್ವದಿಸಿರುವುದು ತಮಗೆ ಸಂತೋಷ ತಂದಿದೆ ಎಂದರು. ಸಾನ್ನಿಧ್ಯ ವಹಿಸಿದ ಶ್ರೀ ಹಿಮವತ್ಕೇದಾರ ಜಗದ್ಗುರು ರಾವಲ್ ಪದವಿ ಭೂಷಿತ ಭೀಮಾಶಂಕರ ಶಿವಾಚಾರ್ಯ ಭಗವತ್ಪಾದರು ತಮ್ಮ ಆಶೀರ್ವಚನದಲ್ಲಿ ಮಾನವ ಧರ್ಮದ ಹಿರಿಮೆ ಮತ್ತು ಗುರುಸ್ಥಲದ ಉತ್ಕೃಷ್ಠ ವಿಚಾರ ಧಾರೆಗಳನ್ನು ನಿರಂತರ ಬೋಧಿಸಿ ಸಮಾಜಕ್ಕೆ ದಿಕ್ಸೂಚಿಯಾದ ಲಿಂ. ಶ್ರೀ ಜಗದ್ಗುರು ರುದ್ರಮುನಿ ಶಿವಾಚಾರ್ಯ ಭಗವತ್ಪಾದರ ಬಾಳ ಬದುಕು ಶ್ರೇಯಸ್ಸು ಬಯಸುವ ಮನುಷ್ಯನಿಗೆ ದಾರಿ ದೀಪವಾಗಿದೆ. ಶ್ರೀ ಪೀಠದಲ್ಲಿ ಅವರ ಜನ್ಮ ಶತಮಾನೋತ್ಸವ ಆಚರಿಸುತ್ತಿರುವುದು ಧರ್ಮಾಭಿಮಾನಿಗಳಿಗೆ ಹೆಮ್ಮೆಯನ್ನು ಉಂಟು ಮಾಡಿದೆ. ಲಿಂಗೈಕ್ಯ ಜಗದ್ಗುರುಗಳ ದೂರದೃಷ್ಟಿ ಮತ್ತು ಮಾಡಿದ ಸತ್ಕಾರ್ಯಗಳು ಸಕಲರ ಬಾಳಿನಲ್ಲಿ ಬೆಳಕು ಮೂಡಿಸಿವೆ ಎಂದರು.



# ಹಿರಿಯೂರಲ್ಲೂ ಸಹ ರಾತ್ರಿ ಹೊತ್ತು ಬಸ್ಸಿನ ಸಮಸ್ಯೆ: ಅಧಿಕಾರಿಗಳು ಗಮನ ಹರಿಸಬೇಕು

**ಚಿತ್ರದುರ್ಗ:** ರಾತ್ರಿ ಹೊತ್ತು ಪ್ರತಿ ಊರಿನಲ್ಲೂ ಸಹ ಬಸ್ಸಿನ ಕಾಟ ಶುರುವಾಗಿದೆ, ಪ್ರತಿಯೊಬ್ಬರೂ ಸಹ ರಾತ್ರಿ ಹೊತ್ತು ಬಸ್ಸು ನಿಲ್ಲಿಸದೆ, ಜನರನ್ನ ಗಮನಿಸದೇ, ಬಸ್ಸು ಚಲಾಯಿಸುತ್ತಿರುವ ಸರ್ಕಾರಿ ಬಸ್ಸಿನ ಚಾಲಕರಿಗೆ ಮತ್ತು ನಿರ್ವಾಹಕರಿಗೆ ಸಾರಿಗೆ ಇಲಾಖೆ ಅಧಿಕಾರಿಗಳು ಸರಿಯಾದ ಕ್ರಮ ಜರುಗಿಸಿ, ರಾತ್ರಿ ಹೊತ್ತು ಸಹ ಪ್ರಯಾಣಿಕರಿಗೆ ಬಸ್ಸುಗಳನ್ನು ನಿಲ್ಲಿಸಿ, ಪ್ರಯಾಣಿಕರ ಸೇವೆ ಮಾಡುವುದನ್ನು ಅರಿವು ಉಂಟು ಮಾಡಿಕೊಡಬೇಕಾಗಿದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.



ಹಿರಿಯೂರಿನಲ್ಲಿ ರಾತ್ರಿ ಸಮಯದಲ್ಲಿ ಬರುವ ಬಸ್ಸುಗಳು ಜನರಿಗೆ ಬೇಕಾ ಬಿಟ್ಟಿಯಾಗಿ ಉತ್ತರ ನೀಡಿ, ಬಸ್ಸುಗಳು ಚಿತ್ರದುರ್ಗಕ್ಕೆ ಹೋಗುವುದಿಲ್ಲ, ಹೈವೇ ಮೇಲೆ ದಾವಣಗೆರೆಗೆ ಹೋಗುತ್ತದೆ ಎಂದು ಸುಳ್ಳು ಹೇಳಿ, ಜನರನ್ನ ಹತ್ತಿಸಿಕೊಳ್ಳದೆ ಹಾಗೆ ಮುಂದೆ ಸಾಗುತ್ತಿರುವುದು ನಿಜಕ್ಕೂ ನಮ್ಮ ವ್ಯವಸ್ಥೆಯ ಮೇಲೆ ಹಿಡಿದ ಕನ್ನಡಿಯಾಗಿದೆ. ಸಾರ್ವಜನಿಕರ ಸೇವೆಗೆ ಮೀಸಲಾಗಿ ಇಟ್ಟಿರುವ ಕರ್ನಾಟಕ ರಾಜ್ಯ ಸಾರಿಗೆ ನಿಗಮದ ಬಸ್ಸುಗಳು, ಜನರನ್ನ ಹತ್ತಿಸಿಕೊಳ್ಳದೆ ಹಾಗೆ ಸಂಚರಿಸುತ್ತಿರುವುದನ್ನು ನೋಡಿದರೆ, ಸಾರಿಗೆ ಅಧಿಕಾರಿಗಳಿಗೆ ತಮ್ಮ ಸಿಬ್ಬಂದಿಗೆ ಸರಿಯಾದ ಮಾರ್ಗದರ್ಶನ ನೀಡುತ್ತಿದ್ದಾರೋ ಇಲ್ಲವೋ ಎಂಬ ಅನುಮಾನ ಉಂಟಾಗುತ್ತದೆ ಎಂದರು.

ಹಿರಿಯೂರಿಂದ ಚಳ್ಳಕೆರೆಗೆ ಹೋಗುವ ಬಸ್ಸುಗಳನ್ನು ಸಹ ಜನರನ್ನ ಹತ್ತಿಸಿಕೊಳ್ಳದೆ, ಕೆಲವೊಂದಿಷ್ಟು ಪ್ರಯಾಣಿಕರು 10 ಸಾರಿ ಬಸ್ಸುಗಳನ್ನು ಹತ್ತಿ ಇಳಿದು, ಹತ್ತಿ ಇಳಿದು ಬೇಜಾರಾಗಿ, ಬಸ್ ಸ್ಟ್ಯಾಂಡ್ ಗಳಲ್ಲಿ ಸಾರಿಗೆ ಇಲಾಖೆ ಅಧಿಕಾರಿಗಳಿಗೆ, ನಿರ್ವಾಹಕರಿಗೆ ಚಾಲಕರಿಗೆ ಶಾಪ ಹಾಕುತ್ತಾ ನಿಂತಿರುತ್ತಾರೆ. ಜನರ ಸೇವೆ ಮಾಡಬೇಕು ಎಂಬ ಭಾವನೆ ಇಲ್ಲದೆ ಸಾರಿಗೆ ಸಿಬ್ಬಂದಿಗಳು, ಮನಸ್ಸಾ ಇಚ್ಛೆ, ತಮಗೆ ಇಷ್ಟ ಬಂದ ಕಡೆ ಬಸ್ಸನ್ನ ನಿಲ್ಲಿಸುವುದು, ಜನರನ್ನ ಹತ್ತಿಸಿಕೊಳ್ಳದೆ ಹೋಗುವುದು, ಜನರ ಮುಂದೆ ಬೇಕೆಂದೇ ವೇಗವಾಗಿ ಬಸ್ಸು ಚಲಾಯಿಸುವುದು, ತಮ್ಮ ದುರ್ನಡತೆಯನ್ನ ತೋರಿಸುತ್ತಿದ್ದಾರೆ. ಹಾಗಾಗಿ ಸಾರಿಗೆ ಅಧಿಕಾರಿಗಳು ಬಸ್ಸುಗಳು ಯಾವ ರೀತಿ ವರ್ತಿಸುತ್ತವೆ, ರಾತ್ರಿ ಹೊತ್ತು ಬಸ್ಟ್ಯಾಂಡಲ್ಲಿ ನಿಂತು ಪರಿಶೀಲನೆ ಮಾಡಿ, ಕೆಟ್ಟದಾಗಿ ನಡೆದುಕೊಳ್ಳುವಂತಹ ಸಿಬ್ಬಂದಿಗಳ ಮೇಲೆ ಕ್ರಮ ಜರುಗಿಸಿ, ಜನರ ಸೇವೆ ಮಾಡಬೇಕೆಂದು ವಿನಂತಿಸಿಕೊಂಡಿದ್ದಾರೆ.

ಅಧಿಕಾರಿಗಳು ರಾತ್ರಿ ಹೊತ್ತು ಬಸ್ ಸ್ಟ್ಯಾಂಡ್ ಗಳಲ್ಲಿ ನಿಂತು, ಪ್ರತಿ ಬಸ್ಸುಗಳು ಒಳಗೆ ಬರುತ್ತವೋ ಇಲ್ಲವೋ ಎಂಬುದನ್ನು ಪರಿಶೀಲನೆ ಮಾಡಿ, ಯಾವ ನಿರ್ವಾಹಕ, ಚಾಲಕ ಬಸ್ಸಿನ ನಿಲ್ದಾಣಕ್ಕೆ ಬಸ್ಸು ತರದಲ್ಲೇ ಹಾಗೆ ಹೈವೇನಲ್ಲಿ ಹೊರಹೋಗುವವರನ್ನು ಹಿಡಿದು, ಕ್ರಮ ಜರುಗಿಸಬೇಕು. ಇಲ್ಲದಿದ್ದರೆ ಸಿಬ್ಬಂದಿಗಳು ಸಾರಿಗೆ ಅಧಿಕಾರಿಗಳ ಮಾತನ್ನೇ ಕೇಳದೆ ದುರ್ನಡತೆಯಿಂದ ನಡೆದುಕೊಳ್ಳುತ್ತಿದ್ದಾರೆ ಎಂದರು.

ವಯಸ್ಸಾದ ವೃದ್ಧರೂ, ಮಕ್ಕಳು, ಮಹಿಳೆಯರು, ಬಸ್ ಸ್ಟ್ಯಾಂಡ್ ಗಳಲ್ಲಿ ಕಾದುಕಾದು ಸುಸ್ತಾಗಿ, ರಾತ್ರಿ ಯಾಕಾದರೂ ನಾವು ಹಿರಿಯೂರಿಗೆ ಬಂದೆವೋ, ತುಮಕೂರಿಗೆ ಬಂದೆವೋ ಎಂಬಂತೆ ಮಾಡುತ್ತಿರುವುದನ್ನು ನೋಡಿದರೆ, ನಮ್ಮ ಸಾರಿಗೆ ಇಲಾಖೆಯ ವ್ಯವಸ್ಥೆ ಎಷ್ಟು ಹಾಳಾಗಿದೆ ಎಂಬುದು ಅರಿವಿಗೆ ಬರುತ್ತದೆ. ಜನರ ದುಡ್ಡಿಂದ ಸಂಬಳ ಪಡೆಯುವಂತಹ ಈ ಸಿಬ್ಬಂದಿ ವರ್ಗದವರು, ಜನರನ್ನೇ ತಿರಸ್ಕರಿಸಿ ವಾಹನ ಚಲಾಯಿಸುವುದನ್ನು ನೋಡಿದರೆ, ಇವರಿಗೆ ತಾವು ಪಡೆಯುತ್ತಿರುವ ಸಂಬಳ ಎಲ್ಲಿಂದ ಬರುತ್ತಿದೆ, ಎಂಬುದನ್ನು ಮನವರಿಕೆ ಮಾಡಿಕೊಡಿ ಎಂದು ವಿನಂತಿಸಿಕೊಂಡಿದ್ದಾರೆ.

ಜನರನ್ನ ಬಸ್ಸಿನಿಂದ ಕೆಳಗಿಳಿಸುವುದು, ಸುಳ್ಳು ಹೇಳುವುದು ಮಾಡುವ, ಜನರಿಗೆ ಒಂದು ರೂಪಾಯಿ ಎರಡು ರೂಪಾಯಿ ಚಿಲ್ಲರೆ ಕೊಡದಲೇ ಹಾಗೆ ಇಳಿಸುವುದು ಮಾಡುತ್ತಿದ್ದಾರೆ. ಅವರಿಗೆ ಸ್ವಲ್ಪ ನ್ಯಾಯ, ವಿನಯವನ್ನು ಕಲಿಸಿ ಕೊಡಬೇಕಾದ್ದು ಅಧಿಕಾರಿಗಳ ಕರ್ತವ್ಯ. ಅಧಿಕಾರಿಗಳು ಕಣ್ಮುಚ್ಚಿ ಕುಳಿತುಕೊಂಡು, ಬೆಕ್ಕು ಯಾವಾಗ ಬೇಕಾದರೂ ಹಾಲು ಕುಡಿಯ ಬಹುದು ಎಂಬಂತೆ, ತಮ್ಮ ವಾಹನ ಚಾಲಕರು ಯಾವ ರೀತಿ ಬೇಕಾದರೂ ಬಸ್ಸುಗಳನ್ನು, ಎಲ್ಲೆಂದರಲ್ಲಿ ಓಡಾಡಿಸಿಕೊಂಡು, ಜನರಿಗೆ ತೊಂದರೆ ನೀಡುತ್ತಿರುವುದನ್ನು ಕಣ್ಮುಚ್ಚಿ ಕುಳಿತಂತೆ ಕಾಣುತ್ತಿದೆ ಎಂದರು.

ರಾತ್ರಿ ಹೊತ್ತು ಬಹಳಷ್ಟು ಬಸ್ಸುಗಳು ಊರಿನ ಒಳಗೆ ಬರದಲೇ, ಹಾಗೆ ಹೆದ್ದಾರಿಯಲ್ಲಿ ಸಂಚರಿಸುತ್ತಿರುವುದರಿಂದ ಅಧಿಕಾರಿಗಳು ಏನು ಕ್ರಮ ಜರುಗಿಸುತ್ತಾರೆ ಎಂಬ ಅನುಮಾನ ಮೂಡುತ್ತಿದೆ. ಹೆದ್ದಾರಿಯಲ್ಲೇ ಬಸ್ಸುಗಳೆಲ್ಲ ಸಂಚರಿಸುವುದಾದರೆ ಊರೊಳಗಿರುವ ಬಸ್ ಸ್ಟ್ಯಾಂಡ್ ಗಳನ್ನ ಮುಚ್ಚಿಸಿ, ಹೆದ್ದಾರಿಗಳಲ್ಲಿ ಹೊಸದಾಗಿ ಬಸ್ ನಿಲ್ದಾಣ ನಿರ್ಮಾಣ ಮಾಡಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಾತ್ರಿ ಪ್ರಯಾಣಿಸುವ ಪ್ರಯಾಣಿಕರಿಗೆ ಸರಿಯಾದ ಉತ್ತರ ನೀಡದೆ, ಬಸ್ಸುಗಳ ನಿರ್ವಾಹಕರು ಸುಳ್ಳು ಹೇಳುವುದನ್ನು ತಡೆಯಬೇಕು. ಚಿತ್ರದುರ್ಗದ ಬೋರ್ಡ್ ಇದ್ದರೂ ಸಹ ಚಿತ್ರದುರ್ಗಕ್ಕೆ ಹೋಗುವುದಿಲ್ಲ, ಹಾಗೆ ಜನರನ್ನ ಬಸ್ ಸ್ಟ್ಯಾಂಡ್ನಲ್ಲಿ ಬಿಟ್ಟು ಹೈವೇ ಮೇಲೆ ದಾವಣಗೆರೆಗೆ ಹೋಗುತ್ತೇವೆ ಎಂದು ಒರಟಾಗಿ ಉತ್ತರಿಸಿ. ಎಲ್ಲಾ ಬಸ್ಸುಗಳನ್ನು ಹೈವೆ ಮೇಲೆ ದಾವಣಗೆರೆ ಕಳಿಸುವುದಾದರೆ, ಚಿತ್ರದುರ್ಗ ಜಿಲ್ಲೆ ಇದ್ದು ಏನು ಉಪಯೋಗ ಎಂದು ಪ್ರಶ್ನೆಸಿದ್ದಾರೆ.

ಕೆಲವು ಬಸ್ಸಿನ ಚಾಲಕರು ಬೇಕಂತಲೇ ಬಸ್ಸುಗಳನ್ನ ದೂರ ನಿಲ್ಲಿಸಿ, ಜನರನ್ನ ಇಳಿಸಿ, ಬಸ್ ಸ್ಟ್ಯಾಂಡ್ ಅಲ್ಲಿ ನಿಂತ ಜನರನ್ನ ಹಾಗೆ ಬಿಟ್ಟು ಚಲಾಸುವುದನ್ನು ನಾವು ವಿಡಿಯೋ ಚಿತ್ರೀಕರಣ ಮಾಡಿ, ಅಧಿಕಾರಿಗಳಿಗೆ ಗಮನಕ್ಕೆ ತರಬೇಕಾಗಿದೆ. ಹಾಗೆ ರಾತ್ರಿ ಹೊತ್ತು ಸಂಚರಿಸುವ ಪೊಲೀಸರ ಸಹಾಯ ಪಡೆದು, ಬಸ್ಸುಗಳನ್ನು ನಿಲ್ಲಿಸುವ ಮಟ್ಟಕ್ಕೆ ದುರ್ನಡತೆ ಜಾಸ್ತಿ ಆಗುತ್ತಿದೆ, ರಾತ್ರಿ ದಸ್ತು ತಿರುಗುವ ಪೊಲೀಸನವರು ಜನರನ್ನ ಪೊಲೀಸ್ ಸ್ಟೇಷನ್ ಹತ್ತಿರ ಬನ್ನಿರಿ, ಅಲ್ಲಿ ಬಸ್ ನಿಲ್ಲಿಸಿ ನಿಮಗೆ ಕಳಿಸುತ್ತೇವೆ ಎಂಬ ಮಾತನಾಡುತ್ತಿದ್ದಾರೆ. ಪೊಲೀಸರಿಗಿರುವಷ್ಟು ಸೌಜನ್ಯವೂ ಸಹ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಇಲ್ಲದಾಗಿರುವುದು ದುರಂತಮಯ. ಇನ್ನು ಮುಂದಾದರು ಸಾರಿಗೆ ಇಲಾಖೆ ಅಧಿಕಾರಿಗಳು ಹಾಗೂ ಮಂತ್ರಿಗಳು ಸಚಿವರುಗಳು,ಇಲಾಖೆ ಸಿಬ್ಬಂದಿಗೆ ಎಚ್ಚರಿಕೆಯನ್ನು ನೀಡಿ, ರಾತ್ರಿ ಹೊತ್ತು ಸರಿಯಾಗಿ ಜನರನ್ನು ಹತ್ತಿಸಿಕೊಂಡು ಹೋಗುವಂತೆ ಆದೇಶ ನೀಡಬೇಕೆಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಸಂಜೆ ಟಿಪ್ಸ್

## ಹೊಸ ಹೋಮ್ ಥಿಯೇಟರ್ ಟಿವಿಗಳನ್ನು ಬಿಡುಗಡೆ ಮಾಡಿದ ರಿಲಯನ್ಸ್ ರಿಟೇಲ್

ರಿಲಯನ್ಸ್ ರಿಟೇಲ್ ಲಿಮಿಟೆಡ್, ದೇಶೀಯವಾಗಿ ಅಭಿವೃದ್ಧಿ ಪಡಿಸಿರುವ ಹೋಮ್ ಥಿಯೇಟರ್ ಎಲ್ಇಡಿ ಟಿವಿಗಳನ್ನು ಆಡಿಯೋ ಪಾರ್ಟ್ನರ್ ಹರ್ಮಾನ್ ಜೊತೆಗೂಡಿ ಬಿಡುಗಡೆ ಮಾಡಿದೆ. ಬಿಪಿಎಲ್ ಬ್ರ್ಯಾಂಡ್ ಅಡಿಯಲ್ಲಿ ಈ ಟಿವಿಗಳನ್ನು ಬಿಡುಗಡೆ ಮಾಡಲಾಗಿದೆ. ಸ್ಪಷ್ಟ ಧ್ವನಿ, ಅತ್ಯುತ್ತಮ ಚಿತ್ರದ ಗುಣಮಟ್ಟದ ಮೂಲಕ ಥಿಯೇಟರ್ನಲ್ಲಿ ಸಿನಿಮಾ ನೋಡುವ ರೀತಿಯ ಅನುಭವವನ್ನು ಈ ಟಿವಿಗಳು ಕಟ್ಟಿಕೊಡಲಿವೆ.ಮಾರುಕಟ್ಟೆಯಲ್ಲಿ ಉತ್ತಮ-ಗುಣಮಟ್ಟದ, ಹೈ-ಡೆಫಿನಿಷನ್ ಡಿಜಿಟಲ್ ವಿಷಯದ ತ್ವರಿತ ಪ್ರಸರಣದೊಂದಿಗೆ, ಗ್ರಾಹಕರು ದೋಷರಹಿತ ಆಡಿಯೊ ಔಟ್ಪುಟ್ ಮತ್ತು ಇಮ್ಮರ್ಸಿವ್ ಪಿಕ್ಚರ್ ಗುಣಮಟ್ಟದ ಮೂಲಕ ಸಮಗ್ರ ಮನರಂಜನಾ ಅನುಭವವನ್ನು ಒದಗಿಸುವ ಟಿವಿಗಳನ್ನು ಹುಡುಕುತ್ತಿದ್ದಾರೆ. ಇದನ್ನು ಗಮನದಲ್ಲಿಟ್ಟುಕೊಂಡು, ರಿಲಯನ್ಸ್ ರಿಟೇಲ್ ತನ್ನ ಮಾಲೀಕತ್ವದ ಆಡಿಯೊ ಇಎಫ್ಎಕ್ಸ್ ಟ್ಯೂನಿಂಗ್ ಸಾಫ್ಟ್ವೇರ್ ಮೂಲಕ ಹೊಸ ಬಿಪಿಎಲ್ ಹೋಮ್ ಥಿಯೇಟರ್ ಟಿವಿ ಶ್ರೇಣಿಯನ್ನು ಪ್ರಾರಂಭಿಸಿದೆ.

ರಿಲಯನ್ಸ್ ರಿಟೇಲ್ ವಿಶ್ವಾಸಾರ್ಹ, ಪರಿಣಾಮಕಾರಿ ಮತ್ತು ಕೈಗೆಟುಕುವ ವ್ಯಾಪಕ ಶ್ರೇಣಿಯ ಉತ್ಪನ್ನಗಳೊಂದಿಗೆ ಎಲ್ಇಡಿ ಟಿವಿ ವಿಭಾಗದಲ್ಲಿ ತನ್ನ ಅಸ್ತಿತ್ವವನ್ನು ವಿಸ್ತರಿಸಲು ಸಜ್ಜಾಗಿದೆ. ಸ್ವಾವಲಂಬನೆ ಮತ್ತು ನಾವೀನ್ಯತೆಯತ್ತ ಭಾರತದ ಪ್ರಯಾಣವನ್ನು ಬೆಂಬಲಿಸುವ ಬದ್ಧತೆಗೆ ಅನುಗುಣವಾಗಿ, ಈ ಹೋಮ್ ಥಿಯೇಟರ್ ಟಿವಿಗಳು ಹೆಮ್ಮೆಯಿಂದ 'ಮೇಡ್ ಇನ್ ಇಂಡಿಯಾ' ಆಗಿವೆ. ಈ ಉಪಕ್ರಮದ ಮೂಲಕ, ರಿಲಯನ್ಸ್ ರೀಟೇಲ್ ಸ್ಥಳೀಯ ಉತ್ಪಾದನಾ ಪರಿಸರ ವ್ಯವಸ್ಥೆಯಲ್ಲಿ ಬೆಳವಣಿಗೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸುತ್ತದೆ ಮತ್ತು ಜಾಗತಿಕ ಉತ್ಪಾದನಾ ಶಕ್ತಿಕೇಂದ್ರವಾಗಿ ಭಾರತದ ಹೊರಹೊಮ್ಮುವಿಕೆಗೆ ಕೊಡುಗೆ ನೀಡುತ್ತದೆ. ಬಿಪಿಎಲ್ ಹೋಮ್ ಥಿಯೇಟರ್, ಎಲ್ಇಡಿ ಟಿವಿಗಳು ಈಗ ದೇಶಾದ್ಯಂತ ಎಲ್ಲಾ ಎಲೆಕ್ಟ್ರಾನಿಕ್ ಅಂಗಡಿಗಳು, ದೊಡ್ಡ ಸ್ವರೂಪದ ಅಂಗಡಿಗಳು, ಆಧುನಿಕ ಚಿಲ್ಲರೆ ಮಳಿಗೆಗಳು jiomart.com ಮತ್ತು reliancedigital.in ನಂತಹ ಇ-ಕಾಮರ್ಸ್ ಮಾರುಕಟ್ಟೆಗಳಲ್ಲಿ ಲಭ್ಯವಿದೆ. ತನ್ನ ವ್ಯಾಪಕ ಸೇವಾ ಟಚ್ ಪಾಯಿಂಟ್ ಗಳ ಜಾಲದೊಂದಿಗೆ, ರಿಲಯನ್ಸ್ ರಿಟೇಲ್ ತನ್ನ ಗ್ರಾಹಕರಿಗೆ ದಿನದ 24 ಗಂಟೆಯೂ ಲಭ್ಯವಿರುವ ಉತ್ಪನ್ನ ಬೆಂಬಲ ಮತ್ತು ಸೇವೆಯ ನಿರಂತರ ಭರವಸೆಯನ್ನು ನೀಡುತ್ತದೆ.

## ಕ್ಯಾರೆಟ್ ಹಲ್ವಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕ್ಯಾರೆಟ್ – 1/2 ಕೆಜಿ, ಹಾಲು – 1/2 ಲೀಟರ್, ಸಕ್ಕರೆ – 1 ಕಪ್, ತುಪ್ಪ – 4 ಟೇಬಲ್ ಸ್ಪೂನ್, ಏಲಕ್ಕಿ ಪುಡಿ – 1/4 ಟೀ ಚಮಚ, ಪಿಸ್ತಾ ಚೂರುಗಳು – 3 ಟೇಬಲ್ ಸ್ಪೂನ್

### ಮಾಡುವ ವಿಧಾನ

ಕ್ಯಾರೆಟ್ ಸಿಪ್ಪೆ ತೆಗೆದು 4–5 ತುಂಡುಗಳನ್ನಾಗಿ ಕತ್ತರಿಸಿಕೊಳ್ಳಿ. ಒಂದು ಕುಕ್ಕರ್ನಲ್ಲಿ ಕ್ಯಾರೆಟ್, ಸ್ವಲ್ಪ ಹಾಲು ಹಾಗೂ ಸ್ವಲ್ಪ ತುಪ್ಪ ಸೇರಿಸಿ ಮಿಕ್ಸ್ ಮಾಡಿ ಮುಚ್ಚಳ ಮುಚ್ಚಿ 1 ಸೀಟಿ ಕೂಗಿಸಿಕೊಳ್ಳಿ. ಕುಕ್ಕರ್ ತಣ್ಣಗಾದಾಗ ಮುಚ್ಚಳ ತೆಗೆದು ಬೇಯಿಸಿಕೊಂಡ ಕ್ಯಾರೆಟ್ಗೆ ಉಳಿದ ಹಾಲು ಸೇರಿಸಿ ಜೊತೆಗೆ ಪಿಸ್ತಾ ಚೂರುಗಳನ್ನು ಸೇರಿಸಿ ಹೆಚ್ಚಿನ ಉರಿಯಲ್ಲಿ 20 ನಿಮಿಷ ಕುದಿಸಿ, ಆಗ್ಗಾಗ್ಗೆ ಸ್ಪಾಚುಲಾದಿಂದ ಮಿಶ್ರಣವನ್ನು ತಿರುವುತ್ತಾ ಮ್ಯಾಷ್ ಮಾಡಿಕೊಳ್ಳಿ (ಅಥವಾ ಕುಕ್ಕರ್ ಮುಚ್ಚಳ ತೆಗೆದಾಗ ಹಾಲು ಸೇರಿಸುವ ಮುನ್ನವೇ ಮ್ಯಾಷರ್ನಿಂದ ಮ್ಯಾಷ್ ಮಾಡಿಕೊಳ್ಳಬಹುದು) ಮಿಶ್ರಣ ಗಟ್ಟಿಯಾಗುತ್ತಾ ಬಂದಾಗ ಸಕ್ಕರೆ ಹಾಗೂ ಉಳಿದಿರುವ ತುಪ್ಪ ಸೇರಿಸಿ ತಿರುವಿ ಸಕ್ಕರೆ ಸೇರಿಸಿದಾಗ ಹಲ್ವಾ ನೀರು ಬಿಡುತ್ತದೆ. ಆದ್ದರಿಂದ ಮತ್ತೆ 5–10 ನಿಮಿಷ ಕುಕ್ ಮಾಡಿ ನಂತರ ಸ್ಟೋವ್ ಆಫ್ ಮಾಡಿ ಏಲಕ್ಕಿ ಪುಡಿ ಹಾಗೂ ಮತ್ತಷ್ಟು ತುಪ್ಪ ಸೇರಿಸಿ ಮಿಕ್ಸ್ ಮಾಡಿ ಸರ್ವಿಂಗ್ ಪ್ಲೇಟ್ಗೆ ವರ್ಗಾಯಿಸಿ ಮತ್ತಷ್ಟು ಪಿಸ್ತಾ ಚೂರುಗಳಿಂದ ಅಲಂಕರಿಸಿ

## ನಟಿ ತಮನ್ನಾ ಭಾಟಿಯಾ ನ್ಯೂ ಲುಕ್

ನಟಿ ತಮನ್ನಾ ಹೊಸ ಅವತಾರದ ಫೋಟೋಸ್ ವೈರಲ್ ಆಗುತ್ತಿವೆ.. ಚಿತಾ ಸ್ಕಿನ್ ಶೈಲಿಯ ಪ್ರಿಂಟೆಡ್ ಸ್ಲೀವ್ಲೆಸ್, ಟಾಪ್ಲೆಸ್ ಶಾರ್ಟ್ ಡ್ರೆಸ್ನಲ್ಲಿ ಮಿಲ್ಕಿ ಬ್ಯೂಟಿ ಸ್ಲೇಸ್ ಮಿಂಚಿದ್ದಾಳೆ..

ಇತ್ತೀಚೆಗಷ್ಟೇ ತಮನ್ನಾ ಶೇರ್ ಮಾಡಿರುವ ಈ ಫೋಟೋಗಳು 10 ಲಕ್ಷ ಲೈಕ್ಗಳನ್ನು ಪಡೆದಿವೆ. ಇದನ್ನ ನೋಡಿದ್ರೆ, ಸಾಮಾಜಿಕ ಜಾಲತಾಣಗಳಲ್ಲಿ ತಮನ್ನಾ ಅವರಿಗಿರುವ ಕ್ರೇಜ್ ಎಷ್ಟು ಅಂತ ಅರ್ಥವಾಗುತ್ತದೆ.

ಸ್ಲೀವ್ ಲೆಸ್ ಟಾಪ್ ಲೆಸ್ ಶಾರ್ಟ್ ಡ್ರೆಸ್ ನಲ್ಲಿ ತಮನ್ನಾ ಸೌಂದರ್ಯ ಎದ್ದು ಕಾಣುತ್ತಿದೆ.

ಫೋಟೋಗಳನ್ನು ನೋಡಿದ ನಂತರ, ಹುಡುಗರು ಮಿಲ್ಕಿ ಚೀತಾ ಅಂತ ಕಾಮೆಂಟ್ ಮಾಡುತ್ತಿದ್ದಾರೆ..

ಜೈಲರ್ ನಂತರ ಸೌತ್ ಚಿತ್ರಗಳಲ್ಲಿ ಹೆಚ್ಚು ಕಾಣಿಸಿಕೊಳ್ಳದ ತಮನ್ನಾ ಭಾಟಿಯಾ ಸೋಷಿಯಲ್ ಮೀಡಿಯಾದ ಮೂಲಕ ಪ್ರೇಕ್ಷಕರಿಗೆ ಹತ್ತಿರವಾಗುತ್ತಿದ್ದಾರೆ..

ಜೈಲರ್ ಚಿತ್ರದ ಐಟಂ ಸಾಂಗ್ ನಂತರ ಸಿಂಕದರ್ ಕಾ ಮುಕದ್ದಾರ್ ಚಿತ್ರದಲ್ಲಿ ನಟಿಸಿದ್ದಾರೆ.

ಪ್ರಸ್ತುತ ಈ ಸರಣಿಯು ಒಟಿಟಿಯಲ್ಲಿ ಉತ್ತಮವಾಗಿ ಓಡುತ್ತಿದೆ.

ಚಲನಚಿತ್ರಗಳು ಮತ್ತು ಐಟಂ ಹಾಡುಗಳ ಹೊರತಾಗಿ, ತಮನ್ನಾ ವೆಬ್ ಸರಣಿಗಳಲ್ಲಿ ಅತ್ಯಂತ ಬ್ಯುಸಿಯಾಗಿರುವ ನಟಿಯರಲ್ಲಿ ಒಬ್ಬರಾಗಿದ್ದಾರೆ.

ತಮನ್ನಾ ಶೀಘ್ರದಲ್ಲೇ ತಮ್ಮ ಬಾಯ್ಫ್ರೆಂಡ್ ವಿಜಯ್ ವರ್ಮಾ ಜೊತೆ ಸಪ್ತಪದಿ ತುಳಿಯಲಿದ್ದಾರೆ ಎಂಬ ಸುದ್ದಿಯೂ ಕೇಳಿ ಬಂದಿದೆ.





## ಕೊತ್ತಂಬರಿ ಸೊಪ್ಪಿನಲ್ಲಿದೆ ಪೌಷ್ಠಿಕಾಂಶಗಳು

### ಹೆಲ್ತ್ ಟಿಪ್ಸ್



ಕೊತ್ತಂಬರಿ ಎಲೆಗಳು ಅತ್ಯಲ್ಪ ಕೊಲೆಸ್ಟ್ರಾಲ್ ಮತ್ತು ಸ್ಯಾಚುರೇಟೆಡ್ ಕೊಬ್ಬಿನೊಂದಿಗೆ ಹೆಚ್ಚಿನ ಪ್ರೋಟೀನ್ಗಳು ಮತ್ತು ಆಹಾರದ ಫೈಬರ್ಗಳನ್ನು ಹೊಂದಿದೆ. ಅವು ವಿಟಮಿನ್ ಎ, ವಿಟಮಿನ್ ಸಿ, ವಿಟಮಿನ್ ಇ, ಸತು, ಕ್ಯಾಲ್ಸಿಯಂ, ಮೆಗ್ನೀಸಿಯಮ್, ಕಬ್ಬಿಣ ಮತ್ತು ರಂಜಕದಂತಹ ಪ್ರಮುಖ ಜೀವಸತ್ವಗಳು ಮತ್ತು ಖನಿಜಗಳಲ್ಲಿ ಸಮೃದ್ಧವಾಗಿವೆ.

ಇದಲ್ಲದೆ, ಅವು ಕ್ಯಾರೊಟಿನಾಯ್ಡ್ಗಳು, ಫ್ಲೇವನಾಯ್ಡ್ಗಳು ಮತ್ತು ಆಂಥೋಸಯಾನಿನ್ಗಳಂತಹ ಶಕ್ತಿಶಾಲಿ ಉತ್ಕರ್ಷಣ ನಿರೋಧಕಗಳನ್ನು ಹೊಂದಿವೆ. ಇದು ಉರಿಯೂತದ ಮತ್ತು ಆಂಟಿಮೈಕ್ರೊಬಿಯಲ್ ಕಾರ್ಯಗಳನ್ನು ಉತ್ತೇಜಿಸುತ್ತದೆ.

ಕೊತ್ತಂಬರಿ ಸೊಪ್ಪು ಸಂಯೋಜಕ ಅಂಗಾಂಶವನ್ನು ಸಮೃದ್ಧಗೊಳಿಸುವ ಖನಿಜಗಳನ್ನು ಹೊಂದಿದೆ. ಅವುಗಳೆಂದರೆ ಕ್ಯಾಲ್ಸಿಯಂ, ಮೆಗ್ನೀಸಿಯಮ್ ಮತ್ತು ರಂಜಕ. ಈ ಸೊಪ್ಪನ್ನು ದಾಲ್ ಮತ್ತು ಸಲಾಡ್ಗಳಲ್ಲಿ ಸೇರಿಸಿ ತಿನ್ನುವುದು ಮೂಳೆ ಸಾಂದ್ರತೆಯನ್ನು ಹೆಚ್ಚಿಸುತ್ತದೆ. ಸಂಧಿವಾತ ಮತ್ತು ಆಸ್ಟಿಯೊಪೊರೋಸಿಸ್ನಲ್ಲಿ ಕೀಲು ನೋವುಗಳನ್ನು ಶಮನಗೊಳಿಸುತ್ತದೆ.

ಕೊತ್ತಂಬರಿ ಸೊಪ್ಪಿನಲ್ಲಿರುವ ಆಹಾರದ ಫೈಬರ್ಗಳು ಮತ್ತು ಪ್ರೋಟೀನ್ಗಳ ಗಮನಾರ್ಹ ಮಟ್ಟಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಒಂದು ಲೋಟ ಕೊತ್ತಂಬರಿ ಸೊಪ್ಪಿನ ರಸವನ್ನು ಸ್ವಲ್ಪ ನಿಂಬೆ ಮತ್ತು ಜೇನುತುಪ್ಪದೊಂದಿಗೆ ಕುಡಿಯುವುದು ಹಸಿವನ್ನು ನಿಯಂತ್ರಿಸುತ್ತದೆ. ತೂಕ ನಷ್ಟವನ್ನು ಉತ್ತೇಜಿಸುತ್ತದೆ ಮತ್ತು ಮಧುಮೇಹದ ಲಕ್ಷಣಗಳನ್ನು ನಿವಾರಿಸುತ್ತದೆ.ಕೊತ್ತಂಬರಿ ಸೊಪ್ಪನ್ನು ತಿನ್ನುವುದರಿಂದ ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಸಹಾಯ ಮಾಡುತ್ತದೆ.

ಇದರಲ್ಲಿರುವ ವಿಟಮಿನ್ ಸಿ ರಕ್ತದೊತ್ತಡವನ್ನು ಕಡಿಮೆ ಮಾಡಲು ಮತ್ತು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದು ರಕ್ತದಲ್ಲಿ ಕಬ್ಬಿಣದ ಕೊರತೆಯನ್ನು ತಡೆಯಲು ಸಹ ಸಹಾಯ ಮಾಡುತ್ತದೆ.ನಿಮ್ಮ ದೇಹದ ಜೀರ್ಣಕಾರಿ ಸಾಮರ್ಥ್ಯವನ್ನು ಸುಧಾರಿಸುವಲ್ಲಿ ಕೊತ್ತಂಬರಿಸೊಪ್ಪು ಪ್ರಮುಖ ಪಾತ್ರವನ್ನು ವಹಿಸುತ್ತದೆ. ದಿನನಿತ್ಯದ ಆಹಾರದಲ್ಲಿ ಇದನ್ನು ಸೇರಿಸುವುದರಿಂದ ಜೀರ್ಣಾಂಗ ವ್ಯವಸ್ಥೆಯು ಸರಿಯಾಗಿ ಕಾರ್ಯನಿರ್ವಹಿಸಲು ಸಹಾಯ ಮಾಡುತ್ತದೆ ಮತ್ತು ಗ್ಯಾಸ್, ಮಲಬದ್ಧತೆ ಮತ್ತು ಅಜೀರ್ಣದಂತಹ ಸಮಸ್ಯೆಗಳನ್ನು ದೂರ ಮಾಡುತ್ತದೆ. ಕೊತ್ತಂಬರಿ ಸೊಪ್ಪು ಆಹಾರದ ಫೈಬರ್ನಿಂದ ಕೂಡಿದ್ದು,ಇದು ಮಲ ರಚನೆ ಮತ್ತು ಕರುಳಿನ ಚಲನೆಗೆ ಸಹಾಯ ಮಾಡುತ್ತದೆ.

## ಇಂದು ಜೈಲಿನಿಂದ ಪವಿತ್ರಗೌಡ ರಿಲೀಸ್



**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿದ್ದ ಪವಿತ್ರಾ ಗೌಡ ಇಂದು ಪರಪ್ಪನ ಅಗ್ರಹಾರದಿಂದ ಬಿಡುಗಡೆಯಾಗಲಿದ್ದಾರೆ. 6 ತಿಂಗಳ ಹಿಂದೆ ಜೈಲು ಸೇರಿದ್ದ ದರ್ಶನ್ ಗೆಳತಿ ಪವಿತ್ರಾ ಗೌಡ ಮತ್ತು ಇತರರಿಗೆ ಶುಕ್ರವಾರ ಹೈಕೋರ್ಟ್ನ ನ್ಯಾ. ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಏಕಸದಸ್ಯ ಪೀಠ ಜಾಮೀನು ಮಂಜೂರು ಮಾಡಿತ್ತು.

ಇಂದು ಬೆಳಗ್ಗೆ ಬಿಡುಗಡೆಯ ಎಲ್ಲಾ ಪ್ರಕ್ರಿಯೆಗಳು ಮುಗಿಯಲಿದೆ. ಪರಪ್ಪನ ಅಗ್ರಹಾರದಿಂದ ಪವಿತ್ರಾ, ಅನುಕುಮಾರ್, ಪ್ರದೂಶ್ ಬಿಡುಗಡೆಯಾದರೆ ಶಿವಮೊಗ್ಗ ಜೈಲಿನಿಂದ ಜಗದೀಶ್, ಲಕ್ಷಣ್, ಕಲಬುರಗಿಯಿಂದ ನಾಗರಾಜ್ ರಿಲೀಸ್ ಆಗಲಿದ್ದಾರೆ. ಇಂದು ಮಧ್ಯಾಹ್ನ ಹೊತ್ತಿಗೆ ಎಲ್ಲಾ ಆರೋಪಿಗಳು ಜೈಲಿನಿಂದ ಹೊರಬರಲಿದ್ದಾರೆ. ಎಲ್ಲಾ ಆರೋಪಿಗಳು ತಲಾ 1 ಲಕ್ಷ ರೂ. ಮೊತ್ತದ ವೈಯಕ್ತಿಕ ಬಾಂಡ್ ಹಾಗೂ ಇಷ್ಟೇ ಮೊತ್ತಕ್ಕೆ ಇಬ್ಬರ ಭದ್ರತೆ ನೀಡಬೇಕು ಸೇರಿದಂತೆ ಹಲವು ಷರತ್ತುಗಳನ್ನು ವಿಧಿಸಿದೆ. ಆರೋಪಿಗಳನ್ನು ಬಂಧಿಸಿದ ನಂತರ ಪ್ರಾಸಿಕ್ಯೂಷನ್ ತಕ್ಷಣವೇ ಇವರನ್ನು ಯಾಕೆ ಬಂದಿಸಿದ್ದೇವೆ ಎನ್ನುವುದಕ್ಕೆ ಸರಿಯಾದ ಕಾರಣ ನೀಡಿಲ್ಲ. ಹೀಗಾಗಿ ಕಾನೂನಿನ ಈ ಲೋಪದ ಆಧಾರದಡಿ ಎಲ್ಲರ ಜಾಮೀನು ಅರ್ಜಿಗಳನ್ನು ಪುರಸ್ಕರಿಸಲಾಗುತ್ತಿದೆ ಎಂದು ನ್ಯಾಯಪೀಠ ತನ್ನ 68 ಪುಟಗಳ ತೀರ್ಪಿನಲ್ಲಿ ಹೇಳಿತ್ತು.

## ಐಬ್ರೋಸ್ ಎಂಬ್ರಾಯಿಡರಿ

### ಬ್ಯೂಟಿ ಟಿಪ್ಸ್



ಒಂದು ಕಾಲದಲ್ಲಿ ತೆಳುವಾದ ಹುಬ್ಬು ಹೆಂಗಳೆಯರ ಸ್ಟೈಲಿಷ್ ಲುಕ್ನ ಪ್ರತೀಕವಾಗಿತ್ತು. ಆದರೆ, ಇಂದು ಗಾಢವಾದ ದಪ್ಪ ಐ ಬ್ರೋಸ್ ಫ್ಯಾಷನ್ ಲೋಕವನ್ನು ಆಳುತ್ತಿದೆ. ಇದರಿಂದ ತಿಂಗಳಿಗೊಮ್ಮೆ ಪಾರ್ಲರ್ಗೆ ಹೋಗಿ ದಪ್ಪವಾಗಿ ಬೆಳೆದ ಹುಬ್ಬನ್ನು ತೆಳ್ಳಗೆ ಮಾಡಿಸಿಕೊಂಡು ಬರುವ ನೋವಿನ ಕೆಲಸ ತಪ್ಪಿದೆ. ಆದರೆ, ಕೆಲವರ ಐ ಬ್ರೋಗೆ ನೈಸರ್ಗಿಕವಾದ ಶೇಪ್ ಇರುವುದಿಲ್ಲ. ಅಲ್ಲದೆ, ಕೆಲವರ ಐ ಬ್ರೋ ತೆಳ್ಳಗಿದ್ದು ಅದಕ್ಕೆ ಗಾಢವಾದ ಲುಕ್ ನೀಡಲು ಪೆನ್ಸಿಲ್ ಹಿಡಿದು ಕನ್ನಡಿ ಮುಂದೆ ಗಂಟೆಗಟ್ಟಲೆ ಸಮಯ ವ್ಯಯಿಸಬೇಕಾದ ಅನಿವಾರ್ಯತೆ ಇರುತ್ತದೆ. ಪ್ರತಿದಿನ ಈ ರೀತಿ ಟೈಮ್ ವೇಸ್ಟ್ ಮಾಡುವ ಬದಲು ವರ್ಷಕ್ಕೊಮ್ಮೆ ಹುಬ್ಬಿಗೆ ಶೇಪ್ ನೀಡುವ ಟೆಕ್ನಾಲಜಿಯೊಂದು ಇದ್ದಿದ್ದರೆ, ಎಷ್ಟು ಚೆನ್ನಾಗಿತ್ತಲ್ವ? ಯೋಚಿಸಬೇಡಿ, ಅಂಥದೊಂದು ವಿಧಾನ ಈಗ ಫ್ಯಾಷನ್ ಲೋಕದಲ್ಲಿ ಸದ್ದು ಮಾಡುತ್ತಿದೆ. ಅದೇ ಮೈಕ್ರೋಬ್ಲೇಡಿಂಗ್ ಅಥವಾ 3ಡಿ ಐಬ್ರೋ ಎಂಬ್ರಾಯಿಡರಿ.

ಇದು ಐ ಬ್ರೋ ಆರ್ಕಿಟೆಕ್ಚರ್ನ ಒಂದು ವಿಧಾನ. ಈ ಪ್ರಕ್ರಿಯೆಯಲ್ಲಿ ನಿಮ್ಮ ಹುಬ್ಬುಗಳಿಗೆ ಸೆಮಿ ಪರ್ಮನೆಂಟ್ ಟ್ಯಾಟೂ ಇಂಕ್ ತುಂಬಿಸಲಾಗುತ್ತದೆ. ಇದು ನಿಮ್ಮ ಹುಬ್ಬು ನೈಸರ್ಗಿಕವಾಗಿ ಗಾಢವಾಗಿ ಕಾಣಿಸುವಂತೆ ಮಾಡುತ್ತದೆ. ಇದು ಟ್ಯಾಟೂ ಹಾಕುವಾಗ ಅನುಸರಿಸುವ ಪ್ರಕ್ರಿಯೆಯನ್ನೇ ಹೋಲುತ್ತದೆ. ಮೈಕ್ರೋಬ್ಲೇಡಿಂಗ್ನಲ್ಲಿ ಪೆನ್ ಮಾದರಿಯ ಒಂದು ಟೂಲ್ ಇರುತ್ತೆ. ಈ ಟೂಲ್ನ ಕೆಳ ತುದಿಯಲ್ಲಿ 10–12 ಸೂಜಿಗಳಿರುವ ಪುಟ್ಟ ಬ್ಲೇಡ್ವೊಂದಿದ್ದು, ಚರ್ಮದ ಅಡಿಯಲ್ಲಿ ಪಿಗ್ಮೆಂಟ್ ಸೇರಿಸಲು ನೆರವು ನೀಡುತ್ತದೆ. ಈ ಪಿಗ್ಮೆಂಟ್ ನಿಮ್ಮ ಹುಬ್ಬುಗಳಿಗೆ ನೈಸರ್ಗಿಕವಾದ ಗಾಢ ಲುಕ್ ನೀಡುತ್ತದೆ. ಹಾಗಂತ ಈ ಸೂಜಿಗಳು ನೋವುಂಟು ಮಾಡುವುದಿಲ್ಲ. ಬದಲಿಗೆ ಚರ್ಮದ ಮೇಲೆ ಮೃದುವಾಗಿ ಕೆರೆದ ಅನುಭವ ನೀಡಬಲ್ಲವು ಅಷ್ಟೆ. ನೀವು ಯಾವ ವಿಧದ ಚರ್ಮ ಹೊಂದಿದ್ದೀರಿ ಹಾಗೂ ಜೀವನಶೈಲಿ ಅನುಸರಿಸುತ್ತೀರಿ ಎಂಬ ಆಧಾರದಲ್ಲಿ ಮೈಕ್ರೋಬ್ಲೇಡಿಂಗ್ ವ್ಯಾಲಿಡಿಟಿ ಒಂದರಿಂದ ಮೂರು ವರ್ಷಗಳ ತನಕವಿರುತ್ತದೆ. ಎಣ್ಣೆಯುಕ್ತ ಚರ್ಮ ಹೊಂದಿರುವವರಿಗೆ 12 ತಿಂಗಳು ಮಾತ್ರ ಇರುತ್ತದೆ. ಸಾಮಾನ್ಯ ತ್ವಚೆ ಹೊಂದಿರುವವರಿಗೆ 18 ತಿಂಗಳು ಬರಬಹುದು. ಇದರ ಲೈಫ್ಟೈಮ್ ಇನ್ನೂ ಹೆಚ್ಚಬೇಕೆಂದರೆ ಸೂರ್ಯನ ಕಿರಣಗಳಿಗೆ ನೇರವಾಗಿ ಮುಖವೊಡ್ಡಬಾರದು. ಏಕೆಂದರೆ ಇದರಿಂದ ಪಿಗ್ಮೆಂಟ್ ಬಣ್ಣ ಕಳೆದುಕೊಳ್ಳುವ ಸಾಧ್ಯತೆಯಿದೆ. ಇನ್ನೊಂದು ಗಮನಾರ್ಹ ಸಂಗತಿಯೆಂದರೆ ಪ್ರತಿ 18 ತಿಂಗಳಿಗೊಮ್ಮೆ ಟಾಪ್–ಅಪ್ಸ್ ಮಾಡಿಲ್ಲವೆಂದರೆ ಐ ಬ್ರೋ ನಿಧಾನವಾಗಿ ಬಣ್ಣ ಕಳೆದುಕೊಳ್ಳಲಾರಂಭಿಸುತ್ತದೆ.

## ಎಐ ಮೂಲಕ ಆರೋಗ್ಯ ಕ್ಷೇತ್ರವನ್ನು ಬದಲಿಸುವ ಉದ್ದೇಶದಿಂದ ದೀಪಕ್ಚೋಪ್ರಾ, ಎಐ ಬಿಡುಗಡೆ ಮಾಡಿದ ಪೂಣಚ್ಚ ಮಾಚಯ್ಯ



ಬೆಂಗಳೂರಿನಲ್ಲಿ ನಡೆದ ಟಿಐಇ ಜಾಗತಿಕ ಸಮಾವೇಶ 2024 ಕಾರ್ಯಕ್ರಮದಲ್ಲಿ ಸೈಬಹ್ಯೂಮನ್.ಎಐ ಸಂಸ್ಥೆಯ ಸಿಇಓ ಮತ್ತು ಸಹ-ಸಂಸ್ಥಾಪಕರಾದ ಪೂಣಚ್ಚ ಮಾಚಯ್ಯ ಅವರು ಮಾನಸಿಕ ಸ್ವಾಸ್ಥ್ಯ, ಒತ್ತಡ ನಿರ್ವಹಣೆ ಮತ್ತು ಸಮಗ್ರ ಆರೋಗ್ಯ ಸೇವೆ ಕುರಿತ ಸಾಂಪ್ರದಾಯಿಕ ಜ್ಞಾನ ಮತ್ತು ಅತ್ಯಾಧುನಿಕ ಎಐ ತಂತ್ರಜ್ಞಾನವನ್ನು ಜೊತೆಗೂಡಿಸಿ ರಚಿಸಿರುವ ವಿಶಿಷ್ಟವಾದ ದೀಪಕ್ಚೋಪ್ರಾ.ಎಐ ಎಂಬ ಅದ್ಭುತ ವೇದಿಕೆಯನ್ನು ಬಿಡುಗಡೆ ಮಾಡಿದರು. ಡಾ. ದೀಪಕ್ ಚೋಪ್ರಾ ಅವರ ನೆರವಿನಿಂದ ಸಿದ್ಧಗೊಳಿಸಲಾಗಿರುವ ಈ ವೇದಿಕೆಯ ಮೂಲಕ ಉತ್ತಮ ಆರೋಗ್ಯ ಸೇವೆ ಒದಗಿಸುವ ಉದ್ದೇಶ ಹೊಂದಲಾಗಿದೆ.

ಸೈಬಹ್ಯೂಮನ್.ಎಐ ಅನ್ನುವುದು ಪೂಣಚ್ಚ ಅವರ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು, ಸಾಂಪ್ರದಾಯಿಕ ಜ್ಞಾನ ಮತ್ತು ಆಧುನಿಕ ತಂತ್ರಜ್ಞಾನವನ್ನು ಜೊತೆಗೂಡಿಸಿ ಎಲ್ಲರಿಗೂ ಉತ್ತಮವಾದ ಸಮಗ್ರ ಆರೋಗ್ಯ ಸೇವೆ ಒದಗಿಸಬೇಕು ಎಂಬುದು ಅವರ ಗುರಿಯಾಗಿದೆ. ಈ ಉದ್ದೇಶಕ್ಕ ಪೂರಕವಾಗಿ ದೀಪಕ್ಚೋಪ್ರಾ.ಎಐ ಅನ್ನು ಅನಾವರಣಗೊಳಿಸಲಾಗಿದೆ. ಪೂಣಚ್ಚ ಅವರು ಮೂಲತಃ ಕೊಡಗಿನವರಾಗಿದ್ದು, ಪ್ರಸ್ತುತ ಬೆಂಗಳೂರಿನಲ್ಲಿ ಕಾರ್ಯಪ್ರವೃತ್ತರಾಗಿದ್ದಾರೆ.

ದೀಪಕ್ಚೋಪ್ರಾ.ಎಐ ಎನ್ನುವುದು ಡಾ.ಚೋಪ್ರಾ ಅವರ ಡಿಜಿಟಲ್ ರೂಪವಾಗಿದ್ದು, ಈ ವೇದಿಕೆ ಮುಖಾಂತರ ವೈಯಕ್ತಿಕ ಸಲಹೆ ಸೂಚನೆ, ಧ್ಯಾನ ಮಾರ್ಗದರ್ಶನ ಮತ್ತು ಇನ್ನಿತರ ಆರೋಗ್ಯ ಸಲಹೆಗಳನ್ನು ನೀಡಲಾಗುತ್ತದೆ. ಡಾ. ಚೋಪ್ರಾ ಅವರ ಪರಿಣತಿಯನ್ನು ಬಳಸಿಕೊಂಡು ಇಂದಿನ ಒತ್ತಡದ ಜಗತ್ತಿನಲ್ಲಿ ಮನುಷ್ಯರಿಗೆ ತೀರಾ ಅವಶ್ಯವಿರುವ ಆರೋಗ್ಯ ಸೇವೆಗಳನ್ನು ಈ ವೇದಿಕೆ ಮೂಲಕ ನೀಡಲಾಗುತ್ತದೆ.

ಈ ಕುರಿತು ಮಾತನಾಡಿರುವ ಪೂಣಚ್ಚ ಮಾಚಯ್ಯ ಅವರು, ''ದೀಪಕ್ಚೋಪ್ರಾ.ಎಐ ನನ್ನ ಕನಸಿನ ಯೋಜನೆ ಮತ್ತು ಶ್ರಮಕ್ಕೆ ಸಿಕ್ಕ ಫಲ. ಜನರು ಸಮತೋಲಿತವಾದ, ದೃಢವಾದ, ಅರಿವಿನ ಜೀವನವನ್ನು ನಡೆಸಲು ಅನುವು ಮಾಡಿಕೊಡುವ ವೇದಿಕೆಯನ್ನು ರಚಿಸುವ ನನ್ನ ಕನಸು ಈ ಮೂಲಕ ಈಡೇರಿದೆ. ಯಶಸ್ಸು ಸಾಧಿಸುವುದಕ್ಕೆ ಮಾನಸಿಕ ಯೋಗಕ್ಷೇಮ ಬಹಳ ಮುಖ್ಯ. ದೀಪಕ್ಚೋಪ್ರಾ.ಎಐ ಎಲ್ಲರಿಗೂ ಮಾನಸಿಕ ಯೋಗಕ್ಷೇಮ ಹೊಂದಲು ನೆರವಾಗುತ್ತದೆ'' ಎಂದು ಹೇಳಿದರು.

ಡಾ. ದೀಪಕ್ ಚೋಪ್ರಾ ಅವರು, ಮಾನವ ಬುದ್ಧಿವಂತಿಕೆ ಜೊತೆಗೆ ಎಐ ಅನ್ನು ಸೇರಿಸುವ ಮೂಲಕ ವ್ಯಕ್ತಿಗಳು ಸಮತೋಲಿತ ಜೀವನ ಮತ್ತು ಆಧ್ಯಾತ್ಮಿಕ ಬುದ್ಧಿವಂತಿಕೆ ಸಾಧಿಸುವ ಮಾರ್ಗವನ್ನು ಹಾಕಿಕೊಡುತ್ತಿದ್ದೇವೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಡಿಸೆಂಬರ್ 10ರಿಂದ12ರವರೆಗೆ ನಡೆದ ಟಿಐಇ ಗ್ಲೋಬಲ್ ಸಮಾವೇಶದಲ್ಲಿ ದೀಪಕ್ಚೋಪ್ರಾ.ಎಐ ವೇದಿಕೆಯ ಅಗಾಧ ಸಾಮರ್ಥ್ಯವನ್ನು ಪ್ರದರ್ಶಿಸಲಾಯಿತು. ಈ ಸಂದರ್ಭದಲ್ಲಿ ಪೂಣಚ್ಚ ಮಾಚಯ್ಯ ಎಐ ಕುರಿತು ಮಾತನಾಡಿದರೆ ಡಾ. ಚೋಪ್ರಾ ಪ್ರಧಾನ ಭಾಷಣ ಮಾಡಿದರು. ಈ ಸಮಾವೇಶದಲ್ಲಿ ಅವರು ಎಐ ಆಧರಿತ ಯೋಗಕ್ಷೇಮ ಸೇವೆಗಳನ್ನು ಒದಗಿಸುವ ಕುರಿತು ಆಲೋಚಿಸಲು ಸ್ಟಾರ್ಟಪ್ ಮತ್ತು ನವೋದ್ಯಮಿಗಳಿಗೆ ಕರೆ ನೀಡಿದರು. ಸೂಪರ್ಟ್ಯಾಬ್.ಕೋ ಸಹಯೋಗದಲ್ಲಿ ಕಾರ್ಯ ನಿರ್ವಹಿಸುವ ದೀಪಕ್ಚೋಪ್ರಾ.ಎಐ ಬಳಸಿದಷ್ಟು ಪಾವತಿಸಿ ಮಾದರಿಯಲ್ಲಿ ಕೆಲಸ ಮಾಡುತ್ತಿದ್ದು, ಬಳಕೆದಾರರಿಗೆ ಕೈಗೆಟುಕುವ ದರದಲ್ಲಿ ಸುಲಭವಾಗಿ ದೊರಕಲಿದೆ. www.deepakchopra.ai ಗೆ ಭೇಟಿ ನೀಡುವ ಮೂಲಕ ಈ ಕುರಿತು ಹೆಚ್ಚಿ ಮಾಹಿತಿ ತಿಳಿಯಬಹುದು ಮತ್ತು ಸೇವೆಯನ್ನು ಹೊಂದಬಹುದು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಉದ್ಯೋಗದಲ್ಲಿ ಬಡ್ತಿ, ಆರೋಗ್ಯದಲ್ಲಿ ಚೇತರಿಕೆ, ಅನ್ಯರಿಗೆ ಉಪಕಾರ ಮಾಡುವಿರಿ, ಋಣ ವಿಮೋಚನೆ, ದ್ರವ್ಯ ಲಾಭ.

**ವೃಷಭ:** ಮಾತಾಪಿತರಲ್ಲಿ ಪ್ರೀತಿ, ಪತಿ ಪತ್ನಿಯರಲ್ಲಿ ಪ್ರೀತಿ, ಶೀತ ಸಂಬಂಧ ರೋಗಗಳು, ಶತ್ರು ನಾಶ.

**ಮಿಥುನ:** ಸ್ನೇಹಿತರಿಂದ ಸಹಾಯ, ಅನೇಕ ಜನರಿಗೆ ವಿವಾಹ ಯೋಗ, ಮನಸ್ಸಿನಲ್ಲಿ ಭಯ ಭೀತಿ.

**ಕಟಕ:** ದೃಷ್ಟಿ ದೋಷದಿಂದ ತೊಂದರೆ, ದೂರ ಪ್ರಯಾಣ, ಇಷ್ಟ ವಸ್ತುಗಳ ಖರೀದಿ, ಸಲ್ಲದ ಅಪವಾದ.

**ಸಿಂಹ:** ಅಧಿಕ ತಿರುಗಾಟ, ವಿನಾಕಾರಣ ಯೋಚನೆ ಮಾಡುವಿರಿ, ಸರ್ಕಾರಿ ಕೆಲಸಗಳಲ್ಲಿ ಜಯ, ಉದ್ಯಮಿಗಳಿಗೆ ಸುದಿನ.

**ಕನ್ಯಾ:** ವ್ಯಾಪಾರದಲ್ಲಿ ಲಾಭ, ಸಹೋದರರಿಂದ ಸಹಾಯ, ನೆಮ್ಮದಿ ಇಲ್ಲದ ಜೀವನ, ಮನಸ್ಸಿನಲ್ಲಿ ಗೊಂದಲ.

**ತುಲಾ:** ಯಾರನ್ನು ಹೆಚ್ಚಾಗಿ ನಂಬಬೇಡಿ, ಅನಿರೀಕ್ಷಿತ ದ್ರವ್ಯ ಲಾಭ, ಅಮೂಲ್ಯ ವಸ್ತುಗಳನ್ನು ಕಳೆದುಕೊಳ್ಳುವಿರಿ.

**ವೃಶ್ಚಿಕ:** ಅಪರಿಚಿತರಿಂದ ಕಲಹ, ಅನಾರೋಗ್ಯ, ಮಾತಿನಲ್ಲಿ ಹಿಡಿತವಿರಲಿ, ಮಹಿಳೆಯರಿಗೆ ವಿಶೇಷ ಲಾಭ.

**ಧನಸ್ಸು:** ಕುಟುಂಬದ ಹೊರೆ ಹೆಚ್ಚಾಗುವುದು, ಅನ್ಯರಲ್ಲಿ ವೈಮನಸ್ಯ, ಶತ್ರು ಭಾದೆ, ಎಷ್ಟೇ ಹಣ ಬಂದರೂ ಸಾಕಾಗುವುದಿಲ್ಲ.

**ಮಕರ:** ಸ್ವಯಂಕೃತ ಅಪರಾಧ, ವಿಪರೀತ ಹಣವ್ಯಯ, ಅನಾರೋಗ್ಯ, ಅತಿಯಾದ ನಿದ್ರೆ, ಅಪರಿಚಿತರಿಂದ ಕಲಹ ಎಚ್ಚರ.

**ಕುಂಭ:** ಪ್ರಿಯ ಜನರ ಭೇಟಿ, ಸ್ತ್ರೀ ಸೌಖ್ಯ, ಆಂತರಿಕ ಕಲಹ, ಮನೋವ್ಯಥೆ, ಆಪ್ತರೊಂದಿಗೆ ಸಂಕಷ್ಟಗಳನ್ನ ಹೇಳಿಕೊಳ್ಳುವಿರಿ.

**ಮೀನ:** ಸ್ವಂತ ಪರಿಶ್ರಮದಿಂದ ಅಭಿವೃದ್ಧಿ, ತೀರ್ಥ ಯಾತ್ರೆ, ದೂರಪ್ರಯಾಣ, ವಾಸಗೃಹದಲ್ಲಿ ತೊಂದರೆ, ಮನಸ್ತಾಪ.

## 'ವಿಜಯ ದಿವಸ್'




1971 ರ ಯುದ್ಧದಲ್ಲಿ ಭಾರತ ಪಾಕಿಸ್ತಾನದ ಎದುರು ಗೆಲುವು ಸಾಧಿಸಿ, 50 ವರ್ಷಗಳು ಪೂರ್ಣಗೊಂಡವು. ಆ ಯುದ್ಧದ ಪರಿಣಾಮವಾಗಿ ನೂತನ ದೇಶವಾಗಿ ಬಾಂಗ್ಲಾದೇಶ ಉದಯವಾಯಿತು. ಅಂದಿನಿಂದ ಈ ದಿನವನ್ನು 'ವಿಜಯ ದಿವಸ್' ಎಂದು ದೇಶಾದ್ಯಂತ ಆಚರಿಸಲಾಗುತ್ತದೆ. ವಿಜಯ ದಿವಸದಂದು ರಕ್ಷಣಾ ಪಡೆಗಳ ತ್ಯಾಗವನ್ನು ನೆನೆಯಲಾಗುತ್ತದೆ.

1971ರ ಯುದ್ಧ ಕೇವಲ ಬಾಂಗ್ಲಾದೇಶದ ಉದಯಕ್ಕೆ ಮಾತ್ರ ಕಾರಣವಾಗಿದ್ದಲ್ಲ. ಅದರೊಡನೆ ಪಾಕಿಸ್ತಾನಕ್ಕೆ ಸಹಿಸಲಾರದ ಹೊಡೆತವನ್ನೂ ನೀಡಿತ್ತು. ಪಾಕಿಸ್ತಾನಿ ಸೇನೆಯ ಮಹಾ ದಂಡನಾಯಕ ಅಬ್ದುಲ್ಲಾ ಖಾನ್ ನಿಯಾಜಿ ಭಾರತೀಯ ಸೇನೆ ಹಾಗೂ ಬಾಂಗ್ಲಾದೇಶದ ಮುಕ್ತಿ ಬಾಹಿನಿಯ ಬಳಿ ಶರಣಾಗತಿಗೆ ಸಹಿ ಹಾಕಿದ್ದು ಏಷ್ಯಾ ಉಪಖಂಡದಲ್ಲಿ ಭಾರತದ ನಾಯಕತ್ವಕ್ಕೆ ಭದ್ರ ಬುನಾದಿ ಹಾಕಿತ್ತು. ಮೇಜರ್ ಜನರಲ್ ನಿಯಾಜಿ ತನ್ನ 93,000 ಸೈನಿಕರ ಪಡೆಯೊಂದಿಗೆ ಭಾರತೀಯ ಸೇನಾ ಲೆಫ್ಟಿನೆಂಟ್ ಜನರಲ್ ಜಗಜಿತ್ ಸಿಂಗ್ ಅರೋರಾ ಅವರ ಮುಂದೆ ಶರಣಾದರು. ಆಗ ಜಗಜಿತ್ ಸಿಂಗ್ ಅವರು ಭಾರತೀಯ ಸೇನೆಯ ಪೂರ್ವ ಕಮಾಂಡಿನ ಜನರಲ್ ಆಫೀಸರ್ ಕಮಾಂಡಿಂಗ್ ಇನ್ ಚೀಫ್ ಆಗಿದ್ದರು. ಪಾಕಿಸ್ತಾನದ ಶರಣಾಗತಿ ಎರಡನೇ ಮಹಾಯುದ್ಧದ ಬಳಿಕದ ಅತಿದೊಡ್ಡ ಸಂಖ್ಯೆಯ ಸೇನಾ ಶರಣಾಗತಿ ಎನಿಸಿಕೊಂಡಿತು.

1971ರ ಯುದ್ಧ ಪೂರ್ವ ಪಾಕಿಸ್ತಾನದ ಬಂಗಾಳಿ ಭಾಷಿಕ ಬಹುಸಂಖ್ಯಾತರ ಮೇಲೆ ಪಾಕಿಸ್ತಾನ ಸೇನೆಯ ದುರ್ನಡತೆಯ ಕಾರಣದಿಂದ ಉಂಟಾಗಿತ್ತು. 1970ರಲ್ಲಿ ನಡೆದ ಪಾಕಿಸ್ತಾನದ ಚುನಾವಣೆಯಲ್ಲಿ ಪೂರ್ವ ಪಾಕಿಸ್ತಾನ ಮೂಲದ, ಶೇಖ್ ಮುಜಿಬುರ್ ರೆಹಮಾನ್ ನೇತೃತ್ವದ ಆವಾಮಿ ಲೀಗ್ ಜಯಶಾಲಿಯಾಗಿತ್ತು. ಆದರೆ ಪಾಕಿಸ್ತಾನಿ ಸೇನೆ ಬಲಪ್ರಯೋಗ ನಡೆಸಿ, ಆವಾಮಿ ಲೀಗ್ ಅಧಿಕಾರಕ್ಕೆ ಬರದಂತೆ ಮಾಡಲು ಪ್ರಯತ್ನಿಸಿತು. ಈ ದಾಳಿಗಳ ಪರಿಣಾಮವಾಗಿ ಅಸಂಖ್ಯಾತ ಬಾಂಗ್ಲಾದೇಶೀಯರು ಗಡಿ ದಾಟಿ ಭಾರತಕ್ಕೆ ಪಲಾಯನ ಮಾಡತೊಡಗಿದರು. ಇದು ಭಾರತ ಮಧ್ಯ ಪ್ರವೇಶಿಸುವುದು ಅನಿವಾರ್ಯವಾಗುವಂತೆ ಮಾಡಿತು.

ಪಾಕಿಸ್ತಾನ ಅನಿರೀಕ್ಷಿತವಾಗಿ ಭಾರತದ ವಾಯುನೆಲೆಗಳ ಡಿಸೆಂಬರ್ 3, 1971ರಂದು ದಾಳಿ ನಡೆಸಿತು. ಅದಾದ ಒಂದು ದಿನದ ಬಳಿಕ ಭಾರತ ಬಾಂಗ್ಲಾದೇಶೀ ರಾಷ್ಟ್ರೀಯವಾದಿಗಳಿಗೆ ಬೆಂಬಲ ನೀಡಲು ನಿರ್ಧರಿಸಿತು. ಅದರಂತೆ ಆಪರೇಶನ್ ಟ್ರೈಡೆಂಟ್ಗೆ ಚಾಲನೆ ನೀಡಿ, ಆಗಿನ ಪಶ್ಚಿಮ ಪಾಕಿಸ್ತಾನದಲ್ಲಿದ್ದ ಕರಾಚಿ ಬಂದರಿನ ಮೇಲೆ ಯಶಸ್ವಿಯಾಗಿ ದಾಳಿ ನಡೆಸಿತು. ಪೂರ್ವ ಪಾಕಿಸ್ತಾನದಲ್ಲಿ ಮುಕ್ತಿ ಬಾಹಿನಿಯ ಗೆರಿಲ್ಲಾ ಯೋಧರು ಭಾರತೀಯ ಸೇನೆಯೊಡನೆ ಕೈ ಜೋಡಿಸಿ, ಪಾಕಿಸ್ತಾನಿ ಸೇನೆಯನ್ನು ಸೋಲಿಸಿದರು.

ಸಂಜೆ ಮುಗಿಲು
ಸೋಮವಾರ
16.12.2024



# ಭದ್ರತಾ ಸಿಬ್ಬಂದಿಯ ಕಠಿಣ ಕ್ರಮ ಎದುರಿಸಿ: ಅಮಿತ್ ಶಾ



**ಜಗದಲ್ಪುರ (ಛತ್ತೀಸ್ಗಢ):** ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಮುಖ್ಯವಾಹಿನಿಗೆ ಸೇರುವಂತೆ ನಕ್ಸಲರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮತ್ತೊಮ್ಮೆ ಮನವಿ ಮಾಡಿದರು. ಇಲ್ಲವಾದಲ್ಲಿ ಭದ್ರತಾ ಪಡೆಗಳ ಕ್ರಮಗಳಿಗೆ ಬಲಿಯಾಗಬೇಕಾಗುತ್ತದೆ. ಶರಣಾದ ನಕ್ಸಲರ ಪುನರ್ವಸತಿ ಸರ್ಕಾರದ ಜವಾಬ್ದಾರಿ ಎಂದು ಇದೇ ವೇಳೆ ಭರವಸೆ ನೀಡಿದರು.

ಛತ್ತೀಸ್ಗಢದ ಜಗದಲ್ಪುರದಲ್ಲಿ ಭಾನುವಾರ ನಡೆದ ಬಸ್ತರ್ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ಮಾತನಾಡಿದ ಅವರು, ಮಾರ್ಚ್ 31, 2026 ರ ವೇಳೆಗೆ ದೇಶದಲ್ಲಿ ನಕ್ಸಲ್ವಾದ ಸಂಪೂರ್ಣವಾಗಿ ನಿರ್ನಾಮ ಮಾಡಲಿದ್ದೇವೆ. ಶಸ್ತ್ರಾಸ್ತ್ರ ತ್ಯಜಿಸಿ ಬಂದು, ಶರಣಾದವರಿಗೆ ಸರ್ಕಾರವೇ ಪುನರ್ವಸತಿ ಕಲ್ಪಿಸಿಕೊಡಲಿದೆ ಎಂದು ಹೇಳಿದರು.

2026 ರೊಳಗೆ ದೇಶವನ್ನು ನಕ್ಸಲ್ ಮುಕ್ತಗೊಳಿಸುವ ಪ್ರಧಾನಿ ನರೇಂದ್ರ ಮೋದಿ ಅವರ ಸಂಕಲ್ಪವನ್ನು ಈಡೇರಿಸಲು ಛತ್ತೀಸ್ಗಢ ಪೊಲೀಸರು ಬದ್ಧರಾಗಿದ್ದಾರೆ. ಇಲ್ಲಿನ ಪುನರ್ವಸತಿ ನೀತಿ ದೇಶದಲ್ಲೇ ಅತ್ಯುತ್ತಮವಾಗಿದೆ. ನೀವು ಶರಣಾಗಿ ಮುಖ್ಯವಾಹಿನಿಗೆ ಸೇರಿದಲ್ಲಿ, ಛತ್ತೀಸ್ಗಢ ಮತ್ತು ದೇಶದ ಅಭಿವೃದ್ಧಿಗೆ ಕೊಡುಗೆ ನೀಡಿದಂತಾಗುತ್ತದೆ ಎಂದು ಅವರು ಹೇಳಿದರು.

ಛತ್ತೀಸ್ಗಢದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವ ಮೊದಲು ಕಾಂಗ್ರೆಸ್ ಆಡಳಿತದಲ್ಲಿ ಮಾವೋವಾದಿಗಳ ವಿರುದ್ಧದ ಕ್ರಮ ಆಮೆಗತಿಯಲ್ಲಿ ಸಾಗುತ್ತಿತ್ತು. ನಮ್ಮ ಪಕ್ಷದ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಕಳೆದ ಒಂದು ವರ್ಷದಲ್ಲಿ 287 ನಕ್ಸಲರ ಬೇಟೆ, 992 ನಕ್ಸಲರ ಬಂಧನ ಮತ್ತು 836 ಜನರ ಶರಣಾಗತಿ ಮಾಡಿಸಲಾಗಿದೆ ಎಂದು ಅಂಕಿಅಂಶವನ್ನು ಅಮಿತ್ ಶಾ ಹಂಚಿಕೊಂಡರು.

# ಆಪ್ನ ಅಂತಿಮ ಪಟ್ಟಿ ರಿಲೀಸ್- 20 ಹಾಲಿ ಶಾಸಕರಿಗೆ ಕೋಕ್



**ನವದೆಹಲಿ:** ಮುಂಬರಲಿರುವ ದೆಹಲಿ ವಿಧಾನಸಭಾ ಚುನಾವಣೆಗಾಗಿ ಎಲ್ಲ ಪಕ್ಷಗಳೂ ಸಿದ್ಧತೆಯನ್ನು ನಡೆಸುತ್ತಿವೆ. ಇದೀಗ ಆಮ್ ಆದ್ಮಿ ಪಕ್ಷ ಅಭ್ಯರ್ಥಿಗಳ ನಾಲ್ಕನೇ ಹಾಗೂ ಅಂತಿಮ ಪಟ್ಟಿಯನ್ನು ಭಾನುವಾರ ಬಿಡುಗಡೆ ಮಾಡಿದೆ. ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ನವದೆಹಲಿ ಕ್ಷೇತ್ರದಿಂದ ಸ್ಪರ್ಧಿಸಲಿದ್ದು, ಮುಖ್ಯಮಂತ್ರಿ ಅತಿಶಿ ಮತ್ತೊಮ್ಮೆ ಕಲ್ಕಾಜಿಯಿಂದ ಸ್ಪರ್ಧಿಸಲಿದ್ದಾರೆ. ಸೌರಭ್ ಭಾರದ್ವಾಜ್ ಗ್ರೇಟರ್ ಕೈಲಾಶ್ ಸ್ಪರ್ಧೆ ಮಾಡಲಿದ್ದಾರೆ.

ಎಎಪಿ ತನ್ನ ಪ್ರಸ್ತುತ ಕಸ್ತೂರ್ಬಾ ನಗರದ ಶಾಸಕ ಮದನ್ ಲಾಲ್ ಬದಲಿಗೆ ರಮೇಶ್ ಪೆಹಲ್ವಾನ್ ಅವರನ್ನು ತನ್ನ ಅಭ್ಯರ್ಥಿಯಾಗಿ ಕಣಕ್ಕಿಳಿಸಿದೆ. ರಮೇಶ್ ಪೆಹಲ್ವಾನ್ ಮತ್ತು ಅವರ ಪತ್ನಿ, ಕೌನ್ಸಿಲರ್ ಕುಸುಮ್ ಲತಾ ಅವರು ಬಿಜೆಪಿ ತೊರೆದು ಇಂದು ಮುಂಜಾನೆ ಎಎಪಿ ಸೇರಿದ್ದಾರೆ.

ಬಾಬರ್ಪುರದಿಂದ ನಾಮನಿರ್ದೇಶನಗೊಂಡಿರುವ ಗೋಪಾಲ್ ರೈ, ಓಖ್ಲಾದಿಂದ ಅಮಾನತುಲ್ಲಾ ಖಾನ್ ಮತ್ತು ಶಕುರ್ ಬಸ್ತಿಯಿಂದ ಸತ್ಯೇಂದ್ರ, ಕುಮಾರ್ ಜೈನ್ ಈ ಬಾರಿಯೂ ಕೂಡ ಸ್ಪರ್ಧೆ ಮಾಡಲಿದ್ದಾರೆ. ನವದೆಹಲಿ ಕ್ಷೇತ್ರದಿಂದ ಮಾಜಿ ಮುಖ್ಯಮಂತ್ರಿ ಶೀಲಾ ದೀಕ್ಷಿತ್ ಅವರ ಪುತ್ರ ಸಂದೀಪ್ ದೀಕ್ಷಿತ್ ಅವರು ಕಾಂಗ್ರೆಸ್ನಿಂದ ಕಣಕ್ಕಿಳಿಯಲಿದ್ದಾರೆ. ಅವರು ಅರವಿಂದ್ ಕೇಜ್ರಿವಾಲ್ ಅವರಿಗೆ ತೀವ್ರ ಪೈಪೋಟಿ ನೀಡಬಹುದು ಎಂದು ಹೇಳಲಾಗುತ್ತಿದೆ. ಮೂರು ಬಾರಿ ದೆಹಲಿ ಮುಖ್ಯಮಂತ್ರಿಯಾಗಿದ್ದ ಶೀಲಾ ದೀಕ್ಷಿತ್ ಅವರು ಈ ಹಿಂದೆ ಅರವಿಂದ್ ಕೇಜ್ರಿವಾಲ್ ವಿರುದ್ಧ ಸ್ಪರ್ಧೆ ಮಾಡಿ ಸೋತಿದ್ದರು. ಈ ಬಾರಿ ಅವರ ಪುತ್ರನನ್ನು ಕಣದಲ್ಲಿದ್ದಾರೆ.

## ಟ್ರಂಪ್ ರೆಸಾರ್ಟ್‌ನಲ್ಲಿ ಆಪಲ್ ಸಿಇಒ ಟಿಮ್ ಕುಕ್, ಡಿನ್ನರ್‌ನಲ್ಲಿ ಭಾಗಿ

**ವಾಷಿಂಗ್ಟನ್:** ಅಧಿಕೃತವಾಗಿ ಅಮೆರಿಕದ ಅಧ್ಯಕ್ಷ ಪಟ್ಟವನ್ನು ಅಲಂಕರಿಸುವ ಮೊದಲೇ ಡೊನಾಲ್ಡ್ ಟ್ರಂಪ್ ಉದ್ಯಮಿಗಳು, ಕಂಪನಿಗಳ ಮುಖ್ಯಸ್ಥರ ಜೊತೆ ಸಭೆ ನಡೆಸಲು ಆರಂಭಿಸಿದ್ದಾರೆ. ಆಪಲ್ ಸಿಇಒ ಟಿಮ್ ಕುಕ್ ಫ್ಲೋರಿಡಾದ ಮಾರ್ -ಎ-ಲಾಗೊ ರೆಸಾರ್ಟ್‌ನಲ್ಲಿ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಜೊತೆ ಭೋಜನ ಕೂಟದಲ್ಲಿ ಭಾಗಿಯಾಗಿದ್ದಾರೆ. ಚುನಾವಣೆಯಲ್ಲಿ ಜಯಗಳಿಸಿದ ನಂತರ ಟ್ರಂಪ್ ಅವರ ಜೊತೆಗಿನ ಮೊದಲ ಭೇಟಿ ಇದಾಗಿದೆ. ಮೊದಲ ಅವಧಿಯಲ್ಲಿ ಟ್ರಂಪ್ ಉದ್ಯಮಿಗಳ ಜೊತೆ ನೇರ ಸಂಬಂಧ ಹೊಂದಿದ್ದರು. ತನ್ನ ಎರಡನೇ ಅವಧಿಯಲ್ಲೂ ಟ್ರಂಪ್ ಉದ್ಯಮಿಗಳ ಜೊತೆ ಉತ್ತಮ ಸಂಬಂಧ ಹೊಂದುವ ಭಾಗವಾಗಿ ಈ ಭೇಟಿ ನಡೆದಿದೆ ಎಂದು ವರದಿಯಾಗಿದೆ.ನವೆಂಬರ್‌ನಲ್ಲಿ ಟ್ರಂಪ್ ಮೆಟಾ ಸಿಇಒ ಮಾರ್ಕ್ ಜುಕರ್‌ಬರ್ಗ್ ಅವರನ್ನು ಭೇಟಿಯಾಗಿದ್ದರೆ ಮುಂದಿನ ವಾರ ಅಮೆಜಾನ್ ಸಂಸ್ಥಾಪಕ ಜೆಫ್ ಬೆಜೋಸ್ ಟ್ರಂಪ್ ಅವರನ್ನು ಭೇಟಿಯಾಗಲಿದ್ದಾರೆ. ಮೆಟಾ, ಅಮೆಜಾನ್, OpenAI ಸೇರಿದಂತೆ ಹಲವು ಟೆಕ್ ಕಂಪನಿಗಳು ಮತ್ತು ನಾಯಕರು ಟ್ರಂಪ್ ಅವರ ಪ್ರಮಾಣವಚನ ಕಾರ್ಯಕ್ರಮಕ್ಕೆ 1 ಮಿಲಿಯನ್ ಡಾಲರ್ ನೀಡುವುದಾಗಿ ಘೋಷಿಸಿವೆ.





## ವ್ಯಾಟಿಕನ್‌ನಲ್ಲಿ ಪೋಪ್ ಫ್ರಾನ್ಸಿಸ್‌ಗೆ ಋಗ್ವೇದದ ಪ್ರತಿ ಉಡುಗೊರೆ

**ತಿರುವನಂತಪುರಂ:** ಕೇರಳದ ಹಿಂದೂ ಅಮೆರಿಕನ್ನರ ರಾಜ್ಯ ಸಂಯೋಜಕ ಹಾಗೂ ಆರೆಸ್ಸೆಸ್ ಸಂಯೋಜಿತ ಹಿಂದೂ ಚಳವಳಿಯ ಹಿರಿಯ ನಾಯಕ ಪಿ.ಶ್ರೀಕುಮಾರ್ ಅವರು ರೋಮ್ನ ವ್ಯಾಟಿಕನ್ನಲ್ಲಿ ಪೋಪ್ ಫ್ರಾನ್ಸಿಸ್ ಅವರಿಗೆ ಋಗ್ವೇದದ ಪ್ರತಿಯನ್ನು ಉಡುಗೊರೆಯಾಗಿ ನೀಡಿದ್ದಾರೆ. ವಿಶ್ವ ಧಾರ್ಮಿಕ ಸಮಾವೇಶದಲ್ಲಿ ಪಾಲ್ಗೊಂಡಿದ್ದ ಶ್ರೀಕುಮಾರ್ ಅವರು ವ್ಯಾಟಿಕನ್ ಗೆ ಭೇಟಿ ನೀಡಿದ ಸಂದರ್ಭದಲ್ಲಿ ಪವಿತ್ರ ಗ್ರಂಥವನ್ನು ಹಸ್ತಾಂತರಿಸಿದರು. ಕಾರ್ಯಕ್ರಮದಲ್ಲಿ ಪೋಪ್ ಫ್ರಾನ್ಸಿಸ್ ಮುಖ್ಯ ಭಾಷಣಕಾರರಾಗಿ ಭಾಗವಹಿಸಿದ್ದರು.

ಕೇರಳದ ಮಾಜಿ ಮುಖ್ಯಮಂತ್ರಿ ಮತ್ತು ದಿವಂಗತ ಸಿಪಿಐ-ಎಂ ನಾಯಕ ಇ.ಕೆ.ನಾಯನಾರ್ ಅವರು 1997 ರಲ್ಲಿ ಪೋಪ್ ಜಾನ್ ಪಾಲ್ ೨ ಅವರಿಗೆ ವ್ಯಾಟಿಕನ್ ಭೇಟಿಯ ಸಮಯದಲ್ಲಿ ಭಗವದ್ಗೀತೆಯ ಪ್ರತಿಯನ್ನು ಉಡುಗೊರೆಯಾಗಿ ನೀಡಿದ್ದರು. ಈ ಬಾರಿ ಋಗ್ವೇದವನ್ನು ಉಡುಗೊರೆಯಾಗಿ ನೀಡುವುದು ಅತ್ಯಂತ ಸೂಕ್ತವಾಗಿ ಕಾಣಿಸಿತು. ಎಂದು ಶ್ರೀಕುಮಾರ್ ಐಎಎನ್ಎಸ್‌ಗೆ ತಿಳಿಸಿದರು. ಕೇರಳದ ಪ್ರಸಿದ್ಧ ಹಿಂದೂ ನಾಯಕ ಮತ್ತು ಸಂತ ದಿವಂಗತ ಸ್ವಾಮಿ ಸತ್ಯಾನಂದ ಸರಸ್ವತಿ ಅವರು ಹಿಂದೂ ಧರ್ಮದ ಅಡಿಪಾಯ ಗ್ರಂಥವಾಗಿ ವೇದಗಳ ಮಹತ್ವವನ್ನು ಆಗಾಗ್ಗೆ ಎತ್ತಿ ತೋರಿಸಿದ್ದಾರೆ ಮತ್ತು ಪ್ರತಿಯೊಂದು ಮನೆಯಲ್ಲಿಯೂ ಒಂದಾದರೂ ವೇದ ಗ್ರಂಥವಿರಬೇಕೆಂದು ಪ್ರತಿಪಾದಿಸಿದ್ದರು ಎಂದು ಅವರು ಹೇಳಿದರು. ಈ ದೃಷ್ಟಿಕೋನವನ್ನು ಆಧರಿಸಿ ಉತ್ತರ ಅಮೆರಿಕದಲ್ಲಿ ವಾಸಿಸುವ ಕೇರಳ ಹಿಂದೂಗಳು ಋಗ್ವೇದದ ಪ್ರತಿಗಳ ವಿತರಣೆಯನ್ನು ಪ್ರಾರಂಭಿಸಿದ್ದಾರೆ.

ವ್ಯಾಟಿಕನ್ನಲ್ಲಿ ಎಲ್ಲಾ ಭದ್ರತಾ ಕ್ರಮಗಳನ್ನು ಪೂರೈಸಿದ ನಂತರವೇ ಉಡುಗೊರೆಯನ್ನು ಅನುಮೋದಿಸಲಾಗಿದೆ ಎಂದು ಶ್ರೀಕುಮಾರ್ ವಿವರಿಸಿದರು. ಗ್ರಂಥವನ್ನು ವೈಯಕ್ತಿಕವಾಗಿ ಪೋಪ್ ಅವರಿಗೆ ಹಸ್ತಾಂತರಿಸಿದ ಅವರು, ಋಗ್ವೇದವು ಹಿಂದೂ ತತ್ವಶಾಸ್ತ್ರದ ಸಾರವನ್ನು ಸಂಕೇತಿಸುತ್ತದೆ ಎಂದು ಹೇಳಿದರು. ಪೋಪ್ ಫ್ರಾನ್ಸಿಸ್ ಚಿಂತನಶೀಲ ನಗುವಿನೊಂದಿಗೆ ಉಡುಗೊರೆಯನ್ನು ಸ್ವೀಕರಿಸಿ, ಇದು ನನಗಾಗಿಯೇ ಎಂದು ಕೇಳಿದರು.

# ತಬಲಾ ಮಾಂತ್ರಿಕ ಜಾಕಿರ್ ಹುಸೇನ್ ಇನ್ನಿಲ್ಲ



**ವಾಷಿಂಗ್ಟನ್:** ತಬಲಾ ಮಾಂತ್ರಿಕ ಜಾಕಿರ್ ಹುಸೇನ್ ಅವರು ಹೃದಯ ಸಂಬಂಧಿ ಕಾಯಿಲೆಯಿಂದ ಭಾನುವಾರ (ಡಿ. 15) ಅಮೆರಿಕದಲ್ಲಿ ನಿಧನ ಹೊಂದಿದರು. ಅವರಿಗೆ 73 ವರ್ಷ ವಯಸ್ಸಾಗಿತ್ತು. ಜಾಕಿರ್ ಹುಸೇನ್ ಅವರ ಆರೋಗ್ಯ ಸ್ಥಿತಿ ತೀರಾ ಗಂಭೀರವಾಗಿದ್ದರಿಂದ ಅವರನ್ನು ಸ್ಯಾನ್ ಫ್ರಾನ್ಸಿಸ್ಕೋ ಆಸ್ಪತ್ರೆಯ ಐಸಿಯುಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ನಿಧನ ಹೊಂದಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇದಕ್ಕೂ ಮೊದಲು ಈ ಬಗ್ಗೆ ಮಾಹಿತಿ ನೀಡಿದ್ದ ಕೊಳಲು ವಾದಕ ರಾಕೇಶ್ ಚೌರಾಸಿಯಾ ಅವರುಜಾಕಿರ್ ಹುಸೇನ್ ಅವರನ್ನು ಆಸ್ಪತ್ರೆಗೆ ದಾಖಲಿಸಿದ ವಿಚಾರವನ್ನು ಸುದ್ದಿಗಾರರಿಗೆ ತಿಳಿಸಿದ್ದರು.

7 3 ವರ್ಷದ ಜಾಕಿರ್ ಹುಸೇನ್ ಅವರಿಗೆ ರಕ್ತದೊತ್ತಡ ಸಮಸ್ಯೆ ಇತ್ತು ಎಂದು ಅವರ ಹತ್ತಿರದ ಸಂಬಂಧಿಕರು ಮಾಹಿತಿ ನೀಡಿದ್ದಾರೆ. ಕಳೆದ ವಾರ ಅವರ ಆರೋಗ್ಯದಲ್ಲಿ ಏರುಪೇರಾಗಿದ್ದು, ಹೃದಯ ಸಂಬಂಧಿ ಕಾಯಿಲೆಯಿಂದ ಪರಿಸ್ಥಿತಿಯು ಗಂಭೀರವಾದ್ದರಿಂದ ಸ್ಯಾನ್ ಫ್ರಾನ್ಸಿಸ್ಕೋದ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಉಸ್ತಾದ್ ಜಾಕಿರ್ ಹುಸೇನ್ ಅಂತಾರಾಷ್ಟ್ರೀಯ ಖ್ಯಾತಿಯ ತಬಲಾ ವಾದಕ. ಶ್ರೇಷ್ಠ ತಬಲಾ ವಾದಕರಲ್ಲಿ ಒಬ್ಬರಾಗಿ ಗುರುತಿಸಿಕೊಂಡಿದ್ದಾರೆ. 1951ರ ಮಾರ್ಚ್ 9ರಂದು ಇವರು ಮುಂಬೈ ಜನಿಸಿದರು. ಖ್ಯಾತ ತಬಲಾ ವಾದಕ ಅಲ್ಲಾ ರಾಖಾ ಅವರ ಹಿರಿಯ ಪುತ್ರ ಜಾಕೀರ್ ಹುಸೇನ್ ತಮ್ಮ ತಂದೆಯ ಹೆಜ್ಜೆಗಳನ್ನು ಅನುಸರಿಸಿ ಜಾಗತಿಕ ಐಕಾನ್ ಆಗಿ ಬದಲಾಗಿದ್ದಾರೆ. ತಮ್ಮ ವೃತ್ತಿ ಜೀವನದುದ್ದಕ್ಕೂ ಜಾಕಿರ್ ಹುಸೇನ್ 5 ಗ್ರ್ಯಾಮಿ ಪ್ರಶಸ್ತಿಗಳನ್ನು ಗೆದ್ದಿದ್ದಾರೆ.

## ದಾವೂದ್ ಇಬ್ರಾಹಿಂನ ಮಾದಕ ವಸ್ತು ಫ್ಯಾಕ್ಟರಿ ಮ್ಯಾನೇಜರ್ ದಾನಿಶ್ ಚಿಕ್ನಾ ಅರೆಸ್ಟ್

**ಮುಂಬೈ:** ದರೋಡೆಕೋರ ದಾವೂದ್ ಇಬ್ರಾಹಿಂನ ಪ್ರಮುಖ ಸಹಚರ ದಾನಿಶ್ ಚಿಕ್ನಾ ಅಲಿಯಾಸ್ ಡ್ಯಾನಿಶ್ ಮರ್ಚೆಂಟ್‌ನನ್ನು ಮಾದಕ ವಸ್ತು ಮಾರಾಟ ಜಾಲ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಂಬೈನಲ್ಲಿ ಬಂಧಿಸಲಾಗಿದೆ. ಬಂಧಿತ ಆರೋಪಿ ಡೋಂಗ್ರಿ ಪ್ರದೇಶದಲ್ಲಿ ದಾವೂದ್‌ನ ಮಾದಕ ವಸ್ತು ಕಾರ್ಯಾಚರಣೆಯನ್ನು ನಿರ್ವಹಿಸುತ್ತಿದ್ದ. ಡ್ಯಾನಿಶ್ ಜೊತೆ ಆತನ ಸಹಚರ ಕಾದರ್ ಗುಲಾಮ್ ಶೇಖ್‌ನನ್ನು ಸಹ ಬಂಧಿಸಲಾಗಿದೆ. ಮರ್ಚೆಂಟ್ ಈ ಪ್ರಕರಣದಲ್ಲಿ ಬೇಕಾಗಿರುವ ಪ್ರಮುಖ ಆರೋಪಿ ಆಗಿದ್ದ. ಕಳೆದ ತಿಂಗಳು ಪ್ರಕರಣಕ್ಕೆ ಸಂಬಂಧಿಸಿದಂತೆ ಮೊಹಮ್ಮದ್ ಆಶಿಕುರ್ ಸಾಹಿದುರ್ ರೆಹಮಾನ್ ಮತ್ತು ರೆಹಾನ್ ಶಕೀಲ್ ಅನ್ಸಾರಿ ಎಂಬ ಇಬ್ಬರು ವ್ಯಕ್ತಿಗಳನ್ನು ಬಂಧಿಸಲಾಗಿತ್ತು. ನವೆಂಬರ್ 8 ರಂದು 144 ಗ್ರಾಂ ಡ್ರಗ್ಸ್‌ನೊಂದಿಗೆ ಮೆರೈನ್ ಲೈನ್ಸ್ ಸ್ಟೇಷನ್ ಬಳಿ ರೆಹಮಾನ್ ಸಿಕ್ಕಿಬಿದ್ದಿದ್ದ. ವಿಚಾರಣೆ ವೇಳೆ, ಡೋಂಗ್ರಿಯಲ್ಲಿ ಅನ್ಸಾರಿಯಿಂದ ಡ್ರಗ್ಸ್ ಖರೀದಿಸಲಾಗಿದೆ ಎಂದು ಆತ ಬಾಯಿಬಿಟ್ಟಿದ್ದ. ಈ ಮಾಹಿತಿ ಮೇರೆಗೆ ಕಾರ್ಯಾಚರಣೆ ನಡೆಸಿದ ಪೊಲೀಸರು ಅನ್ಸಾರಿಯನ್ನು ಬಂಧಿಸಿ ಹೆಚ್ಚುವರಿ 55 ಗ್ರಾಂ ಮಾದಕ ದ್ರವ್ಯ ವಶಪಡಿಸಿಕೊಂಡಿದ್ದರು. ವಿಚಾರಣೆ ವೇಳೆ ಡ್ಯಾನಿಶ್ ಮರ್ಚೆಂಟ್ ಮತ್ತು ಇನ್ನೊಬ್ಬ ಸಹವರ್ತಿ ಖಾದಿರ್ ಫಾಂಟಾ ಎಂಬವರಿಂದ ಡ್ರಗ್ಸ್ ಸರಬರಾಜು ಮಾಡಲಾಗಿತ್ತು ಎಂದು ಅನ್ಸಾರಿ ಒಪ್ಪಿಕೊಂಡಿದ್ದ. ಪೊಲೀಸರು ಹಲವು ವಾರಗಳಿಂದ ಮರ್ಚೆಂಟ್ ಮತ್ತು ಫಾಂಟಾಗಾಗಿ ಹುಡುಕಾಟ ನಡೆಸಿದ್ದರು. ಸುಳಿವಿನ ಮೇರೆಗೆ ಪೊಲೀಸರು ಡಿಸೆಂಬರ್ 13 ರಂದು ಡೋಂಗ್ರಿ ಪ್ರದೇಶದಲ್ಲಿ ಇಬ್ಬರೂ ಶಂಕಿತರನ್ನು ಪತ್ತೆ ಮಾಡಿದ್ದರು. ವಿಚಾರಣೆ ವೇಳೆ ಇಬ್ಬರೂ ಡ್ರಗ್ಸ್ ದಂಧೆಯಲ್ಲಿ ಭಾಗಿಯಾಗಿರುವುದನ್ನು ಒಪ್ಪಿಕೊಂಡಿದ್ದಾರೆ. 2019 ರಲ್ಲಿ, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ (ಎನ್‌ಸಿಬಿ) ಡೋಂಗ್ರಿಯಲ್ಲಿರುವ ದಾವೂದ್‌ನ ಡ್ರಗ್ ಫ್ಯಾಕ್ಟರಿಯನ್ನು ಕೆಡವಿತ್ತು. ಈ ವೇಳೆ ಕೋಟ್ಯಂತರ ರೂಪಾಯಿ ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿತ್ತು. ಆ ಸಮಯದಲ್ಲಿ, ದಾನಿಶ್‌ನನ್ನು ರಾಜಸ್ಥಾನದಲ್ಲಿ ಬಂಧಿಸಲಾಗಿತ್ತು. ಇತ್ತೀಚೆಗೆ ಆತನನ್ನು ಬಿಡುಗಡೆ ಮಾಡಲಾಗಿತ್ತು.

## ಪ್ರತಿಭಟನಾನಿರತ ರೈತರನ್ನು ಭೇಟಿಯಾದ ವಿನೇಶ್ ಫೋಗಟ್ ವಾಗ್ದಾಳಿ



**ನವದೆಹಲಿ:** ದೇಶವು ತುರ್ತು ಪರಿಸ್ಥಿತಿಯನ್ನುಎದುರಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿಅವರು ಭಾಷಣ ಮಾಡುವುದನ್ನು ಬಿಟ್ಟು ಸಮಸ್ಯೆಗಳಿಗೆ ಪರಿಹಾರ ನೀಡಬೇಕು ಎಂದು ಮಾಜಿ ಕುಸ್ತಿಪಟು ಮತ್ತು ಕಾಂಗ್ರೆಸ್ ಶಾಸಕಿ ವಿನೇಶ್ ಫೋಗಟ್ ಹೇಳಿದ್ದಾರೆ. ಪಂಜಾಬ್ ರೈತರ ಪ್ರತಿಭಟನೆ ಮುಂದುವರಿದಿದ್ದು, ಖಾನೌರಿ ಗಡಿಯಲ್ಲಿಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ರೈತ ಮುಖಂಡ ಜಗಜಿತ್ ಸಿಂಗ್ ದಲ್ಲೆವಾಲ್ ಅವರನ್ನು ವಿನೇಶ್ ಫೋಗಟ್ ಭಾನುವಾರ (ಡಿ. 15) ಭೇಟಿಯಾಗಿದ್ದಾರೆ. ರೈತರ ಪ್ರತಿಭಟನೆಗೆ ಬೆಂಬಲ ನೀಡಿದ್ದಾರೆ ಎಂದು ತಿಳಿದು ಬಂದಿದೆ. ಸುದ್ದಿಗಾರರೊಂದಿಗೆ ಮಾತನಾಡಿರುವ ಫೋಗಟ್ ''ದಲ್ಲೆವಾಲ್ ಇತರರಿಗಾಗಿ ತನ್ನ ಪ್ರಾಣವನ್ನು ಪಣಕ್ಕಿಡಲು ಸಿದ್ಧರಿದ್ದಾರೆ. ಪಂಜಾಬ್, ಹರಿಯಾಣ ಮತ್ತು ಇಡೀ ದೇಶದ ಜನತೆ ಈ ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ನಾನು ಕೋರುತ್ತೇನೆ. ದೇಶದಲ್ಲಿ ತುರ್ತು ಪರಿಸ್ಥಿತಿಯಂತಹ ಪರಿಸ್ಥಿತಿ ಇದೆ. ಸರ್ಕಾರವು ಇದಕ್ಕೆ ಪರಿಹಾರವನ್ನು ಕಂಡುಕೊಳ್ಳಬೇಕು. ನಮ್ಮ ಪ್ರಧಾನಿ ದೊಡ್ಡ ಭಾಷಣಗಳನ್ನು ಮಾಡುತ್ತಾರೆ. ನಿನ್ನೆ ಸಂಸತ್ತಿನಲ್ಲೂ ಉದ್ದುದ್ದ ಭಾಷಣ ಮಾಡಿದರು. ಭಾಷಣವನ್ನು ಹೊರತುಪಡಿಸಿ ಏನಾದರೂ ಮಾಡಬೇಕಾಗಿದೆ. ಅವರು ಸಮಸ್ಯೆಗಳಿಗೆ ಪರಿಹಾರ ನೀಡಬೇಕು '' ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರದ ವಿರುದ್ಧ ಪಂಜಾಬ್ ರೈತರ ಪ್ರತಿಭಟನೆ ಮುಂದುವರಿದಿದ್ದು, ಶಂಭು ಗಡಿಯಿಂದ ದೆಹಲಿಗೆ ಮೂರು ಬಾರಿ ಪಾದಯಾತ್ರೆ ವಿಫಲವಾದ ನಂತರ ಇದೀಗ ರೈತ ಮುಖಂಡರು ಹೊಸ ತಂತ್ರ ರೂಪಿಸಿದ್ದಾರೆ ಎಂಬ ಮಾಹಿತಿಯಿದೆ. ಡಿಸೆಂಬರ್ 16ರಂದು ಅಂದರೆ ನಾಳೆ ಟ್ರ್ಯಾಕ್ಟರ್ ಜಾಥಾ ನಡೆಯಲಿದೆ ಎಂದು ರೈತ ಮುಖಂಡರೊಬ್ಬರು ತಿಳಿಸಿದ್ದಾರೆ. ಈ ಅವಧಿಯಲ್ಲಿ, ಪಂಜಾಬ್ ಹೊರತುಪಡಿಸಿ ಇಡೀ ದೇಶದಲ್ಲಿ ಟ್ರ್ಯಾಕ್ಟರ್ ಜಾಥಾ ನಡೆಸುವಂತೆ ಕರೆ ನೀಡಲಾಗಿದೆ. ಇನ್ನು ಡಿಸೆಂಬರ್ 18ರಂದು ಮಧ್ಯಾಹ್ನ 12ರಿಂದ 3 ಗಂಟೆ ತನಕ ರೈಲುಗಳನ್ನು ತಡೆದು ರೈಲು ರೋಕೋ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ. ದೆಹಲಿಗೆ ಪಾದಯಾತ್ರೆ ನಡೆಸುವ ಮುಂದಿನ ತಂಡದಲ್ಲಿ ಹರಿಯಾಣದ ರೈತರು ಮತ್ತು ಮಹಿಳೆಯರೂ ಇರುತ್ತಾರೆ ಎನ್ನಲಾಗಿದೆ.

## ಸಿಂಗ್ ಬದಲು ಪ್ರಣಬ್ ರನ್ನು ಪ್ರಧಾನಿ ಮಾಡುತ್ತಿದರೆ ಯುಪಿಎ-3 ಅಧಿಕಾರಕ್ಕೆ ಬರುತ್ತಿತ್ತು

**ನವದೆಹಲಿ:** 2012 ರಲ್ಲಿ ಪ್ರಣಬ್ ಮುಖರ್ಜಿ ಅವರನ್ನು ಪ್ರಧಾನಿಯಾಗಿ ನೇಮಿಸಿದ್ದರೆ 2014 ರಲ್ಲಿ ಯುಪಿಎ-3 ಅಧಿಕಾರಕ್ಕೆ ಖಂಡಿತ ಬರುತ್ತಿತ್ತು ಎಂದು ಹಿರಿಯ ಕಾಂಗ್ರೆಸ್ ನಾಯಕ ಮಣಿಶಂಕರ್ ಅಯ್ಯರ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ 2012ರಲ್ಲಿ ರಾಷ್ಟ್ರಪತಿ ಆಯ್ಕೆ ನಡೆದಾಗ ಅಂದಿನ ಪ್ರಧಾನಿಯಾಗಿದ್ದ ಡಾ. ಮನಮೋಹನ್ ಸಿಂಗ್ ಅವರನ್ನು ರಾಷ್ಟ್ರಪತಿಯನ್ನಾಗಿ ಮಾಡಬೇಕಿತ್ತು ಹಾಗೂ ಸಚಿವರಾಗಿದ್ದ ಪ್ರಣಬ್ ಮುಖರ್ಜಿ ಅವರಿಗೆ ಪ್ರಧಾನಿ ಹುದ್ದೆ ನೀಡಬೇಕಿತ್ತು ಎಂದು ಹೇಳಿದರು.2012ರಲ್ಲಿ ಸೋನಿಯಾ ಗಾಂಧಿ ಅವರು ಪ್ರಣಬ್‌ರನ್ನು ಕರೆದು ನೀವು ಪ್ರಧಾನಿಯಾಗಬಹುದು ಎಂದು ಆಫರ್ ನೀಡಿದ್ದರು. ಸೋನಿಯಾ ನೀಡಿದ್ದ ಆಫರ್ ನೋಡಿ ನನಗೆ ಅಚ್ಚರಿಯಾಗಿದೆ ಎಂದು ಪ್ರಣಬ್ ಅವರು ನನ್ನ ಬಳಿ ಹೇಳಿದ್ದರು ಎಂದು ತಿಳಿಸಿದರು. ನಾನು ಪ್ರಣಬ್ ಪ್ರಧಾನಿಯಾಗುತ್ತಾರೆ ಎಂದುಕೊಂಡಿದ್ದೆ. ಆದರೆ ನನ್ನ ನಿರೀಕ್ಷೆ ಉಲ್ಟಾ ಆಯ್ತು. ಪ್ರಣಬ್ ರಾಷ್ಟ್ರಪತಿಯಾಗಿ ಆಯ್ಕೆಯಾದರೆ ಮನಮೋಹನ್ ಸಿಂಗ್ ಪ್ರಧಾನಿಯಾಗಿ ಮುಂದುವರಿದರು. ಪ್ರಣಬ್ ಅತ್ಯುತ್ತಮ ಕೆಲಸಗಾರರಾಗಿದ್ದರಿಂದ ಪ್ರಧಾನಿ ಹುದ್ದೆ ನೀಡಬೇಕಿತ್ತು.ಆಡಳಿತದಲ್ಲಿ ಅನುಭವಿ ಆಗಿದ್ದ ಡಾ.ಸಿಂಗ್ ಅವರಿಗೆ ರಾಷ್ಟ್ರಪತಿ ಹುದ್ದೆ ನೀಡಬೇಕಿತ್ತು ಎಂದು ಅಯ್ಯರ್ ಹೇಳಿದರು.

## ಗಾಝಾದಲ್ಲಿ ಇಸ್ರೇಲ್ ದಾಳಿ: 22 ಮಂದಿ ಸಾವು



**ಕೈರೋ:** ಗಾಝಾದಲ್ಲಿ ಶನಿವಾರ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಕನಿಷ್ಠ 22 ಫೆಲೆಸ್ತೀನೀಯರು ಸಾವನ್ನಪ್ಪಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಕೇಂದ್ರ ಗಾಝಾ ಪಟ್ಟಿಯ ದೇರ್ ಅಲ್ -ಬಾಲಾಹ್ ಪುರಸಭೆಯ ಕಟ್ಟಡದ ಬಳಿ ನಡೆದ ವೈಮಾನಿಕ ದಾಳಿಯಲ್ಲಿ ಕನಿಷ್ಠ 10 ಜನರು ಸಾವನ್ನಪ್ಪಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

ಗಾಯಾಳುಗಳನ್ನು ಕಾಲ್ನಡಿಗೆಯಲ್ಲಿ, ರಿಕ್ಷಾಗಳು ಮತ್ತು ಖಾಸಗಿ ಕಾರುಗಳಲ್ಲಿ ದಾಳಿ ನಡೆದ ಸ್ಥಳದಿಂದ ಆಸ್ಪತ್ರೆಗೆ ಸಾಗಿಸಲಾಗುತ್ತಿತ್ತು ಎಂದು ವೈದ್ಯರು ತಿಳಿಸಿದ್ದಾರೆ. ಈ ದಾಳಿಯಲ್ಲಿ ಕೇಂದ್ರ ಗಾಝಾದಲ್ಲಿ ಹಮಾಸ್ ನಡೆಸುತ್ತಿರುವ ಆಡಳಿತ ಸಮಿತಿಯ ಮುಖ್ಯಸ್ಥ ದಿಯಾಬ್ ಅಲಿ ಅಲ್-ಜಾರು ಮೃತಪಟ್ಟಿದ್ದಾರೆ ಎಂದು ಹಮಾಸ್ ಮೂಲಗಳು ತಿಳಿಸಿವೆ.

ದೇರ್ ಅಲ್-ಬಾಲಾಹ್ ಮೇಯರ್ ಆಗಿದ್ದ ಅಲ್-ಜಾರು ಈ ದಾಳಿಯ ಗುರಿಯಾಗಿದ್ದರು ಮತ್ತು ಅವರು ಹಮಾಸ್ ಉಗ್ರರಿಗೆ ಸಹಾಯ ಮಾಡಿದ್ದರು ಎಂದು ಇಸ್ರೇಲ್ ಮಿಲಿಟರಿ ಹೇಳಿದೆ. ಈ ಪ್ರದೇಶದಲ್ಲಿ ನಡೆದ ಪ್ರತ್ಯೇಕ ದಾಳಿಯಲ್ಲಿ ಇನ್ನೂ ನಾಲ್ಕು ಜನರು ಸಾವನ್ನಪ್ಪಿದ್ದಾರೆ. ಇದಕ್ಕೂ ಮೊದಲು, ಇಸ್ರೇಲಿ ವಿಮಾನಗಳು ಸಹಾಯ ಗೋದಾಮಿನ ಬಳಿ ಭಯೋತ್ಪಾದಕರು ಮತ್ತು ಶಸ್ತ್ರಾಸ್ತ್ರ ಸಂಗ್ರಹಗಳ ಮೇಲೆ ದಾಳಿ ನಡೆಸಿದವು ಎಂದು ಮಿಲಿಟರಿ ತಿಳಿಸಿದೆ, ಬಂದೂಕುಧಾರಿಗಳು ಶುಕ್ರವಾರ ಇಸ್ರೇಲ್ನಿಂದ ಇಸ್ರೇಲ್ಗೆ ರಾಕೆಟ್ಗಳನ್ನು ಹಾರಿಸಿದ ನಂತರ. ಗಾಝಾದಿಂದ ಇಸ್ರೇಲ್ ಮೇಲೆ ಶನಿವಾರ ಮತ್ತೊಂದು ರಾಕೆಟ್ ಹಾರಿಸಲಾಗಿದೆ ಎಂದು ಸೇನೆ ತಿಳಿಸಿದೆ. ಸ್ಥಳಾಂತರಗೊಂಡ ಜನರ ಹಿಂದಿನ ಆಶ್ರಯ ತಾಣದ ಮೇಲೆ ಗಾಝಾ ನಗರದಲ್ಲಿ ನಡೆದ ಪ್ರತ್ಯೇಕ ದಾಳಿಯು ಹಮಾಸ್ ಹೋರಾಟಗಾರರನ್ನು ಗುರಿಯಾಗಿಸಿಕೊಂಡಿದೆ.

## ಇಂಡಿಯಾ ಮೈತ್ರಿಕೂಟ ವಿರುದ್ಧ ವಾಗ್ದಾಳಿ



**ಲಕ್ನೋ:** ಭಾರತದಲ್ಲಿ ''ಯಾರೇ ಸತ್ಯ ಹೇಳಿದರೂ ಅವರಿಗೆ ವಾಗ್ದಂಡನೆಯ ಬೆದರಿಕೆ ಒಡ್ಡಲಾಗುತ್ತದೆ'' ಎಂದು ಉತ್ತರಪ್ರದೇಶ ಮುಖ್ಯಮಂತ್ರಿ ಆದಿತ್ಯನಾಥ್ ಶನಿವಾರ ಹೇಳಿದ್ದಾರೆ.

ರಾಜ್ಯಸಭೆಯ ಸಭಾಪತಿ ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್ಕರ್ ವಿರುದ್ಧ ಇಂಡಿಯಾ ಮೈತ್ರಿಕೂಟ ತಂದಿರುವ ವಾಗ್ದಂಡನೆ ನಿರ್ಣಯ ಮತ್ತು ಅಲಹಾಬಾದ್ ಹೈಕೋರ್ಟ್ನ ನ್ಯಾಯಾಧೀಶ ಶೇಖರ್ ಯಾದವ್ ವಿರುದ್ಧ ರಾಜ್ಯಸಭಾ ಸದಸ್ಯರ ಗುಂಪೊಂದು ತಂದಿರುವ ವಾಗ್ದಂಡನೆಗೆ ಉತ್ತರಪ್ರದೇಶ ಮುಖ್ಯಮಂತ್ರಿ ಈ ರೀತಿಯಾಗಿ ಪ್ರತಿಕ್ರಿಯಿಸಿದ್ದಾರೆ.

''ಯಾರೇ ಸತ್ಯ ಹೇಳಿದರೂ, ಈ ಜನರು ವಾಗ್ದಂಡನೆ ಮೂಲಕ ಅವರ ಮೇಲೆ ಒತ್ತಡ ಹೇರುತ್ತಾರೆ. ಮತ್ತೆ ಅವರು ಸಂವಿಧಾನದ ಬಗ್ಗೆ ಮಾತನಾಡುತ್ತಾರೆ. ಅವರ ದ್ವಂದ್ವ ನೀತಿಯನ್ನು ನೋಡಿ. ಸಮಾನ ನಾಗರಿಕ ಸಂಹಿತೆ ಜಾರಿಗೆ ಬರಬೇಕು ಮತ್ತು ಜಗತ್ತಿನಾದ್ಯಂತ ಬಹುಸಂಖ್ಯಾತ ಸಮುದಾಯದ ಭಾವನೆಗಳನ್ನು ಗೌರವಿಸಲಾಗುತ್ತದೆ ಎಂದು ಅಲಹಾಬಾದ್ ಹೈಕೋರ್ಟ್ನ ನ್ಯಾಯಾಧೀಶರೊಬ್ಬರು ಹೇಳಿದರು. ಯಾರಾದರೂ ಈ ಮಾತುಗಳನ್ನು ಹೇಳಿದರೆ ಅದರಲ್ಲಿ ತಪ್ಪೇನಿದೆ? ದೇಶದಲ್ಲಿ ಸಮಾನ ನಾಗರಿಕ ಸಂಹಿತೆ ಬೇಡವೇ?'' ಎಂದು ಆದಿತ್ಯನಾಥ್ ಪ್ರಶ್ನಿಸಿದರು.

ರಾಜ್ಯಸಭೆಯಲ್ಲಿ ಬಿಜೆಪಿ ನೇತೃತ್ವದ ಆಡಳಿತಾರೂಢ ನ್ಯಾಶನಲ್ ಡೆಮಾಕ್ರಟಿಕ್ ಅಲಯನ್ಸ್ (ಎನ್ಡಿಎ)ಗೆ ಪರವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಆರೋಪಿಸಿ ಸಭಾಪತಿ ಜಗದೀಪ್ ಧನ್ಕರ್ ವಿರುದ್ಧ ಪ್ರತಿಪಕ್ಷಗಳು ತಂದಿರುವ ವಾಗ್ದಂಡನೆ ನಿರ್ಣಯದ ಬಗ್ಗೆ ಮಾತನಾಡಿದ ಬಿಜೆಪಿ ನಾಯಕ ಆದಿತ್ಯನಾಥ್, ಧನ್ಕರ್ ರೈತನ ಮಗ ಎಂದು ಹೇಳಿದರು.

# ಹಲ್ಲೆ ಪ್ರಕರಣ: ಪತ್ರಕರ್ತನ ಕ್ಷಮೆಯಾಚಿಸಿದ ನಟ ಮೋಹನ್ ಬಾಬು

**ಚೆನ್ನೈ:** ಪತ್ರಕರ್ತರೊಬ್ಬರ ಮೇಲೆ ಹಲ್ಲೆ ನಡೆಸಿದ ಆರೋಪದಲ್ಲಿ ಹತ್ಯೆ ಯತ್ನದ ಪ್ರಕರಣವನ್ನು ಎದುರಿಸುತ್ತಿರುವ ಹಿರಿಯ ತೆಲುಗು ನಟ ಮೋಹನ್ ಬಾಬು, ಹಲ್ಲೆಗೊಳಗಾಗಿದ್ದ ವಿಡಿಯೊ ಪತ್ರಕರ್ತರನ್ನು ಇಂದು ಆಸ್ಪತ್ರೆಯಲ್ಲಿ ಭೇಟಿ ಮಾಡಿ, ಅವರು ಹಾಗೂ ಅವರ ಕುಟುಂಬದ ಸದಸ್ಯರಲ್ಲಿ ವೈಯಕ್ತಿಕವಾಗಿ ಕ್ಷಮೆಯಾಚಿಸಿದರು ಎಂದು ವರದಿಯಾಗಿದೆ.

ಡಿಸೆಂಬರ್ 10ರಂದು ನಟ ಮೋಹನ್ ಬಾಬು ಅವರ ಜಾಲಪಲ್ಲಿ ನಿವಾಸದಲ್ಲಿ ತಮ್ಮ ಮೇಲೆ ನಡೆದಿದ್ದ ಹಲ್ಲೆಯಿಂದ ವಿಡಿಯೊ ವರದಿಗಾರ ಮುಪ್ಪಡಿ ರಂಜಿತ್ ಕುಮಾರ್ ಅವರ ಕೆನ್ನೆಯ ಮೂಳೆ ಮುರಿದಿದ್ದು, ಅದಕ್ಕಾಗಿ ಅವರು ಯಶೋಧಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಈ ಕುರಿತು ಕಚಿಖ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಕುಮಾರ್, ಮೋಹನ್ ಬಾಬು ನನಗೆ, ನನ್ನ ಕುಟುಂಬಕ್ಕೆ ಹಾಗೂ ಇಡೀ ಪತ್ರಕರ್ತರ ಬಳಗಕ್ಕೆ ಕ್ಷಮೆ ಯಾಚಿಸಿದರು ಎಂದು ಹೇಳಿದ್ದಾರೆ. ನಾನು ಒಮ್ಮೆ ಚೇತರಿಸಿಕೊಂಡು, ಆಸ್ಪತ್ರೆಯಿಂದ ಬಿಡುಗಡೆಗೊಂಡ ನಂತರ, ನನ್ನ ಮನೆಗೆ ಭೇಟಿ ನೀಡುವುದಾಗಿಯೂ ಮೋಹನ್ ಬಾಬು ಹೇಳಿದ್ದಾರೆ ಎಂದೂ ಅವರು ತಿಳಿಸಿದ್ದಾರೆ. ಇದಕ್ಕೂ ಮುನ್ನ, ಹಿರಿಯ ತೆಲುಗು ನಟ ಮೋಹನ್ ಬಾಬು ಹಾಗೂ ಅವರ ಕಿರಿಯ ಪುತ್ರ ಮನೋಜ್ ನಡುವೆ ನಡೆಯುತ್ತಿರುವ ಜಗಳವನ್ನು ಚಿತ್ರೀಕರಿಸಲು ಮೋಹನ್ ಬಾಬು ಅವರ ನಿವಾಸಕ್ಕೆ ನಾನು ತೆರಳಿದ್ದೆನು. ಆಗ, ನನ್ನನ್ನು ಹಾಗೂ ಇನ್ನಿತರ ಪತ್ರಕರ್ತರನ್ನು ಅವಾಚ್ಯವಾಗಿ ನಿಂದಿಸಿದ್ದ ಮೋಹನ್ ಬಾಬು, ನನ್ನ ಮೈಕ್ರೋಫೋನ್ ಕಿತ್ತುಕೊಂಡು, ನನ್ನ ಮೇಲೆ ಹಲ್ಲೆ ನಡೆಸಿದ್ದರಿಂದ, ನನ್ನ ತಲೆಗೆ ಪೆಟ್ಟಾಗಿದೆ ಎಂದು ವಿಡಿಯೊ ಪತ್ರಕರ್ತ ಮುಪ್ಪಡಿ ರಂಜಿತ್ ಕುಮಾರ್ ಪೊಲೀಸರಿಗೆ ದೂರು ನೀಡಿದ್ದರು.



## ಬೆಂಗಳೂರಿನಲ್ಲಿ ಪ್ರಯಾಗರಾಜ್ ಮಹಾಕುಂಭ- ರೋಡ್ ಶೋ

**ಬೆಂಗಳೂರು:** ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ನೇತೃತ್ವದ ಉತ್ತರ ಪ್ರದೇಶ ಸರ್ಕಾರವು ಭಾರತದ ಸಾಂಸ್ಕೃತಿಕ ಒಗ್ಗಟ್ಟಿನ ಜಾಗತಿಕ ಸಂಕೇತವಾದ ಮಹಾಕುಂಭ 2025 ಯಶಸ್ವಿಯಾಗಿಸಲು ಬದ್ಧವಾಗಿದೆ. ಈ ನಿಟ್ಟಿನಲ್ಲಿ ಹಣಕಾಸು ಮತ್ತು ಸಂಸದೀಯ ವ್ಯವಹಾರಗಳ ಕ್ಯಾಬಿನೆಟ್ ಸಚಿವರಾದ ಸುರೇಶ್ ಕುಮಾರ್ ಖನ್ನಾ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ, ದಿವ್ಯಾಂಗನ ಸಬಲೀಕರಣದ ರಾಜ್ಯ ಸಚಿವರಾದ (ಸ್ವತಂತ್ರ ಜವಾಬ್ದಾರಿ) ನರೇಂದ್ರ ಕುಮಾರ್ ಕಶ್ಯಪ್ ಬೆಂಗಳೂರಿನಲ್ಲಿ ಬೃಹತ್ ರೋಡ್ ಶೋ ನಡೆಸಿದರು. ಮಹಾಕುಂಭವು ಭಾರತದ ವೈವಿಧ್ಯತೆಯ ವಿಶಿಷ್ಟ ಸಂಭ್ರಮಾಚರಣೆಯಾಗಿದೆ ಎಂದು ಹೇಳಿದರು ಮತ್ತು ಕರ್ನಾಟಕದ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಹಾಗೂ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯ ಅವರಿಗೆ ಹಾಗೂ ಕರ್ನಾಟಕದ ಜನರಿಗೆ ಪ್ರಯಾಗರಾಜ್ ಮಹಾಕುಂಭ 2025ರಲ್ಲಿ ಭಾಗವಹಿಸಲು ಆಹ್ವಾನ ನೀಡಿದರು. ಈ ಕಾರ್ಯಕ್ರಮವು ಐತಿಹಾಸಿಕ, ಅಂತಾರಾಷ್ಟ್ರೀಯ ಮಟ್ಟದ ಭಾಗವಹಿಸುವಿಕೆ ಹೊಂದಿದೆ ಮತ್ತು ಅತ್ಯಾಧುನಿಕ ಸೌಲಭ್ಯಗಳನ್ನು ಹೊಂದಿರುತ್ತದೆ ಎಂದು ಹೇಳಿದರು. ರೋಡ್ ಶೋ ನಂತರ ಮಾಧ್ಯಮದೊಂದಿಗೆ ಮಾತನಾಡಿದ ಅವರು ಮಹಾಕುಂಭವು ಭಾರತದ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಅರಿವಿನ ಸ್ಫೂರ್ತಿ ಹೊಂದಿದೆ ಮತ್ತು ಭಕ್ತಿಪೂರ್ವಕವಾಗಿದೆ ಹಾಗೂ 'ಏಕ್ ಭಾರತ್- ಶ್ರೇಷ್ಠ ಭಾರತ್- ಸಮಾವೇಶಿ ಭಾರತ್' ಎನ್ನುವುದನ್ನು ಬಿಂಬಿಸುತ್ತದೆ ಎಂದರು.



ಪತ್ರಿಕಾಗೋಷ್ಠಿಯಲ್ಲಿ ಹಣಕಾಸು ಮತ್ತು ಸಂಸದೀಯ ವ್ಯವಹಾರಗಳ ಸಚಿವರು, ''ನಿಮ್ಮಲ್ಲಿನ ಬಹಳಷ್ಟು ಮಂದಿ 2019ರ ಪ್ರಯಾಗರಾಜ್ ನಲ್ಲಿ ನಡೆದ ಅದ್ದೂರಿ ಕುಂಭಮೇಳದ 'ದೈವಿಕ ಮತ್ತು ಅದ್ದೂರಿತನ'ವನ್ನು ಕಂಡಿದ್ದೀರಿ. ಈ ವರ್ಷದ ಮಹಾಕುಂಭವು ಅದ್ದೂರಿತನ ಮತ್ತು ದೈವಿಕ ಅಂತಃಸ್ಸತ್ವದಲ್ಲಿ ಹಿಂದಿನದನ್ನು ಮೀರಿಸಲಿದೆ. ಪ್ರಯಾಗರಾಜ್ ಮಹಾಕುಂಭ-2025ರಲ್ಲಿ 450 ಮಿಲಿಯನ್ ಯಾತ್ರಿಕರು, ಸಂತರು, ಭಕ್ತರು ಮತ್ತು ಪ್ರವಾಸಿಗರನ್ನು ಸ್ವಾಗತಿಸಲಿದೆ.

ಮಾನ್ಯ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ಸ್ಫೂರ್ತಿ ಮತ್ತು ಮಾರ್ಗದರ್ಶನ ಹಾಗೂ ಮುಖ್ಯಮಂತ್ರಿ ಶ್ರೀ ಯೋಗಿ ಆದಿತ್ಯನಾಥ್ ಅವರ ನಾಯಕತ್ವದಲ್ಲಿ ಈ ಮಹಾಕುಂಭವು ಜನವರಿ 13ರಿಂದ ಫೆಬ್ರವರಿ 26, 2025ರವರೆಗೆ ಗಂಗಾ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮದಲ್ಲಿ ನಡೆಯಲಿದೆ. ಯುನೆಸ್ಕೋದಿಂದ ಅಪೂರ್ವ ಮಾನವಕುಲದ ಸಾಂಸ್ಕೃತಿಕ ಪರಂಪರೆ ಎಂದು ಗುರುತಿಸಲ್ಪಟ್ಟಿರುವ ಮಹಾಕುಂಭವು 12 ವರ್ಷಗಳ ಅಂತರದಲ್ಲಿ ಪ್ರಯಾಗದ ಪವಿತ್ರ ಭೂಮಿಯಲ್ಲಿ ನಡೆಯಲಿದೆ'' ಎಂದರು. ಮಹಾಕುಂಭದ ಸಿದ್ಧತೆಗಳ ಕುರಿತು ಅವರು, ''ಅದು ಸ್ವಚ್ಛ, ಆರೋಗ್ಯಕರ, ಸುರಕ್ಷಿತ ಮತ್ತು ಡಿಜಿಟಲ್ ಮಹಾಕುಂಭವಾಗಿರುತ್ತದೆ. ಒಂದು ಸಲ ಬಳಸುವ ಪ್ಲಾಸ್ಟಿಕ್ ಗಳಿಂದ ಮುಕ್ತವಾದ ಪರಿಸರ ಸ್ನೇಹಿಯಾಗಿಸಲು ಪ್ರತಿಜ್ಞೆ ಕೈಗೊಳ್ಳಲಾಗಿದೆ. ಈ ಉಪಕ್ರಮದ ಭಾಗವಾಗಿ ಎಲೆಯ ತಟ್ಟೆ, ಬಟ್ಟಲುಗಳ ವ್ಯಾಪಾರಿಗಳ ಹಲವು ಅಂಗಡಿಗಳಿಗೆ ಮೇಳದ ಪ್ರದೇಶದಲ್ಲಿ ಅವಕಾಶ ನೀಡಲಾಗಿದೆ ಮತ್ತು 400 ಶಾಲೆಗಳ ಪ್ರಾಂಶುಪಾಲರೊಂದಿಗೆ ಸಭೆಗಳನ್ನು ನಡೆಸಿ 4 ಲಕ್ಷ ಮಕ್ಕಳಿಗೆ ಸ್ವಚ್ಛತೆಯ ಅರಿವನ್ನು ನೀಡಲಾಗಿದೆ. ಇದಲ್ಲದೆ 'ಹರ್ ಘರ್ ದಸ್ತಕ್' ಅಭಿಯಾನದ ಅಡಿಯಲ್ಲಿ ಒಮ್ಮೆ ಬಳಕೆಯ ಪ್ಲಾಸ್ಟಿಕ್ ಮುಕ್ತ ಪರಿಸರವನ್ನು ಕಾಪಾಡುವ ಸಂದೇಶವನ್ನು ಪ್ರತಿ ಮನೆಗೂ ನೀಡಲಾಗಿದೆ'' ಎಂದರು.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## 'ಚಂದನವನದ ಚಿಲುಮೆಗಳು' ಪುಸ್ತಕ ಬಿಡುಗಡೆ



ಕನ್ನಡ ಚಿತ್ರರಂಗಕ್ಕೆ 90 ವರ್ಷಗಳ ಸಂಭ್ರಮ. ಈ ಸಂಭ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವುದಕ್ಕಾಗಿ ಚಂದನವನ ಫಿಲ್ಮ್ ಕ್ರಿಟಿಕ್ಸ್ ಅಕಾಡೆಮಿಯು ಅಪರೂಪದ ಕಾಫಿ ಟೇಬಲ್ ಪುಸ್ತಕವನ್ನು ಬಿಡುಗಡೆ ಮಾಡಿದೆ.

ಭಾನುವಾರ ಬೆಂಗಳೂರಿನ ರಾಜಾಜಿನಗದರದಲ್ಲಿ ನಡೆದ `Landmarks of Sandalwood- ಚಂದನವನದ ಚಿಲುಮೆಗಳು' ಎಂಬ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಹಿರಿಯ ಸಂಗೀತ ನಿರ್ದೇಶಕ ಹಂಸಲೇಖ, ನಿರ್ದೇಶಕ ಟಿ.ಎಸ್ .ನಾಗಭರಣ, ನಾಗತಿಹಳ್ಳಿ ಚಂದ್ರಶೇಖರ್, ನಟ ಶ್ರೀಮುರುಳಿ ಸೇರಿದಂತೆ ಕನ್ನಡ ಸಿನಿರಂಗದ ಅನೇಕ ಗಣ್ಯರು ಭಾಗಿಯಾಗಿದ್ದರು. ಪತ್ರಕರ್ತ ಎಸ್. ಶ್ಯಾಮ್ ಪ್ರಸಾದ್ ಹಾಗೂ ಡಾ. ಶರಣು ಹುಲ್ಲೂರು ಅವರು ಈ ಚಂದನವನದ ಚಿಲುಮೆಗಳು ಪುಸ್ತಕವನ್ನ ಬರೆದಿದ್ದಾರೆ. 90 ವರ್ಷದ ಇತಿಹಾಸದಲ್ಲಿ ಮೈಲಿಗಲ್ಲು ಸಾಧಿಸಿರೋ 90 ಚಿತ್ರಗಳ ಬಗ್ಗೆ ಈ ಪುಸ್ತಕದಲ್ಲಿ ವಿಸ್ತೃತವಾದ ವಿವರಣೆಗಳನ್ನ ದಾಖಲಿಸಿದ್ದಾರೆ.

## ರಂಭಾಪುರಿ ಮಠಕ್ಕೆ ರೋಬೋಟಿಕ್ ಆನೆ ಕೊಟ್ಟ ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ



ಬಾಲಿವುಡ್ ನಟಿ ಶಿಲ್ಪಾ ಶೆಟ್ಟಿ ಕುಂದ್ರಾ, ಅವರು ಎನ್.ಆರ್.ಪುರ ತಾಲೂಕಿನ ರಂಭಾಪುರಿ ಮಠಕ್ಕೆ ರೋಬೋಟಿಕ್ ಆನೆಯನ್ನ ಕೊಡುಗೆಯಾಗಿ ನೀಡಿದ್ದಾರೆ.

ಜೀವಂತ ಆನೆಯನ್ನೂ ನಾಚಿಸುವಂತೆ ರೋಬೋಟಿಕ್ ಆನೆ ಇದೆ. ಈ ರೋಬೋಟಿಕ್ ಆನೆಯನ್ನು ರಂಭಾಪುರಿ ಶ್ರೀಗಳಾದ ವೀರ ಸೋಮೇಶ್ವರ ಜಗದ್ಗುರುಗಳು ಉದ್ಘಾಟಿಸಿ ಮಠಕ್ಕೆ ಸ್ವಾಗತಿಸಿಕೊಂಡಿದ್ದಾರೆ. ಈ ರೋಬೋಟಿಕ್ ಆನೆ ಸದಾ ಮಠದ ಆವರಣದಲ್ಲೇ ಇದ್ದು, ಭಕ್ತರನ್ನ ಆಶೀರ್ವದಿಸಲಿದೆ. ಮಠದ ಆವರಣದಲ್ಲಿ ಇದಕ್ಕಾಗಿ ಕಟ್ಟಡ ನಿರ್ಮಿಸಲಾಗಿದೆ.



ಸದಾ ಕಣ್ಣು ಬಿಟ್ಟು, ಕಿವಿ, ತಲೆ, ಸೊಂಡಿಲು ಹಾಗೂ ಬಾಲವನ್ನು ಅಲುಗಾಡಿಸುತ್ತಿರುತ್ತದೆ. ಇದರಿಂದಾಗಿ ಆನೆಯನ್ನು ನೋಡಿದರೆ ನಿಜವಾದ ಆನೆ ಕೂಡ ಒಂದು ಕ್ಷಣ ವಿಚಲಿತಗೊಳ್ಳವಂತೆ ಇದೆ.

ರೋಬೋಟಿಕ್ ಆನೆಯನ್ನು ತಂದಿದ್ದ ಸಿಬ್ಬಂದಿ, ಶಿಲ್ಪಾ ಶೆಟ್ಟಿಯವರು ಮಠಕ್ಕೆ ನಿಜವಾದ ಆನೆಯನ್ನೇ ಕೊಡುಗೆಯಾಗಿ ಕೊಡುವವರಿದ್ದರು. ಆದರೆ, ಕಾನೂನಿನ ತೊಡಕಾಗಬಹುದು ಎಂದು ಕಾಡಿನ ಆನೆಯನ್ನು ಹೋಲುವ ರೋಬೋಟಿಕ್ ಆನೆಯನ್ನು ಕೊಡುಗೆಯಾಗಿ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ರಂಭಾಪುರಿ ಶ್ರೀಗಳು ಈ ರೋಬೋಟಿಕ್ ಆನೆಯನ್ನ ಉದ್ಘಾಟಿಸಿದ ಕೂಡಲೇ ಮಠಕ್ಕೆ ಬಂದಿದ್ದ ನೂರಾರು ಭಕ್ತರು ಆನೆಯ ಆಶೀರ್ವಾದ ಪಡೆದು, ಫೋಟೊ ಕ್ಲಿಕ್ಕಿಸಿಕೊಂಡು ಖುಷಿಪಟ್ಟಿದ್ದಾರೆ. ರಂಭಾಪುರಿ, ಉಜ್ಜಯಿನಿ, ಕೇದಾರ, ಶ್ರೀಶೈಲ ಹಾಗೂ ಕಾಶಿ ಪಂಚಪೀಠಗಳಲ್ಲಿ ಬಾಳೆಹೊನ್ನೂರಿನ ಭದ್ರಾ ನದಿ ತಟದಲ್ಲಿರುವ ರಂಭಾಪುರಿ ಮಠ ಮೊದಲನೇಯದ್ದಾಗಿದೆ.

## ಭಾವಿ ಪತ್ನಿ ಜೊತೆ ಆಗಮಿಸಿ ಸಿಎಂಗೆ ಮೊದಲ ಮದುವೆ ಆಮಂತ್ರಣ ನೀಡಿದ ಡಾಲಿ

ಫೆ.15ರಂದು ಮೈಸೂರಿನಲ್ಲಿ ನಡೆಯುವ ತಮ್ಮ ವಿವಾಹಕ್ಕೆ ಚಿತ್ರನಟ ಡಾಲಿ ಧನಂಜಯ ಭಾವಿ ಪತ್ನಿ ಧನ್ಯತಾ ಜೊತೆ ಆಗಮಿಸಿ ಸಿಎಂ ಸಿದ್ದರಾಮಯ್ಯನವರಿಗೆ ಮೊದಲ ಆಮಂತ್ರಣ ನೀಡಿದ್ದಾರೆ.

ಭಾವಿ ಪತ್ನಿ ಜೊತೆ ಕಾವೇರಿ ನಿವಾಸಕ್ಕೆ ಆಗಮಿಸಿದ ಡಾಲಿ ಸಿಎಂ ಸಿದ್ದರಾಮಯ್ಯನವರನ್ನು ಮದುವೆಗೆ ಆಹ್ವಾನಿಸಿದ್ದಾರೆ. ಆ ಬಳಿಕ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪನವರಿಗೂ ಲಗ್ನಪತ್ರಿಕೆ ನೀಡಿದ್ದಾರೆ. ಡಾಲಿ ಹಾಗೂ ಧನ್ಯತಾ ಆಮಂತ್ರಣ ಪತ್ರಿಕೆ 'ಓಲ್ಡ್ ಇಸ್ ಗೋಲ್ಡ್' ಥೀಮ್‌ನಲ್ಲಿದೆ. ಅಂಚೆ ಪತ್ರದಲ್ಲಿ ವಿಶೇಷವಾಗಿ ಲಗ್ನಪತ್ರಿಕೆ ಮೂಡಿಬಂದಿದೆ. ಫೆ.15ರಂದು ಆರತಕ್ಷತೆ ಕಾರ್ಯಕ್ರಮ ನಡೆಯಲಿದ್ದು, ಫೆ.16ರಂದು ಡಾಲಿ-ಧನ್ಯತಾ ಜೋಡಿ ವೈವಾಹಿಕ ಜೀವನಕ್ಕೆ ಕಾಲಿಡಲಿದ್ದಾರೆ. ಮೈಸೂರಿನ ಅಂಬಾವಿಲಾಸ ಅರಮನೆ ಮುಂಭಾಗದ ವಸ್ತು ಪ್ರದರ್ಶನ ಮೈದಾನದಲ್ಲಿ ಕಲ್ಯಾಣ ನಡೆಯಲಿದೆ.



### ಆಸ್ಟ್ರೇಲಿಯಾ 405 ರನ್

## 5 ವಿಕೆಟ್ ಕಿತ್ತು ದಾಖಲೆ ಬರೆದ ಬುಮ್ರಾ

**ಬ್ರಿಸ್ಬೇನ್:** ಭಾರತದ ವಿರುದ್ಧ ನಡೆಯುತ್ತಿರುವ ಮೂರನೇ ಟೆಸ್ಟ್ ಪಂದ್ಯದ ಎರಡನೇ ದಿನ ಆಸ್ಟ್ರೇಲಿಯಾ ಹಿಡಿತ ಸಾಧಿಸಿದರೂ ಬುಮ್ರಾ 5 ವಿಕೆಟ್ ಗಳಿಸಿ ದಾಖಲೆ ಬರೆದಿದ್ದಾರೆ.

ಮೊದಲ ದಿನ ವಿಕೆಟ್ ನಷ್ಟ ಇಲ್ಲದೇ 28 ರನ್ ಗಳಿಸಿದ್ದ ಆಸ್ಟ್ರೇಲಿಯಾ ಇಂದು 101 ಓವರ್‌ಗಳಲ್ಲಿ 7 ವಿಕೆಟ್ ನಷ್ಟಕ್ಕೆ 405 ರನ್‌ಗಳಿಸಿದೆ.

ಸ್ವೀವ್ ಸ್ಮಿತ್ 101 ರನ್ (190 ಎಸೆತ, 12 ಬೌಂಡರಿ), ಟ್ರಾವಿಸ್ ಹೆಡ್ 152 ರನ್( 160 ಎಸೆತ, 18 ಬೌಂಡರಿ) ಹೊಡೆದರು. ದಿನದ ಅಂತ್ಯಕ್ಕೆ ಅಲೆಕ್ಸ್ ಕ್ಯಾರಿ 45 ರನ್, ಮಿಶೆಲ್ ಸ್ಟಾರ್ಕ್ 7 ರನ್ ಹೊಡೆದು ನಾಳೆ ಬ್ಯಾಟಿಂಗ್ ಮುಂದುವರಿಸಲಿದ್ದಾರೆ.

ಮೊದಲ ಇನ್ನಿಂಗ್ಸ್‌ನಲ್ಲಿ ಬುಮ್ರಾ 5 ವಿಕೆಟ್ ಪಡೆದಿದ್ದಾರೆ. ಈ ಮೂಲಕ ವಿಶ್ವ ಟೆಸ್ಟ್ ಚಾಂಪಿಯನ್ ಚಾಂಪಿಯನ್‌ಶಿಪ್‌ನಲ್ಲಿ 5 ವಿಕೆಟ್ ಪಡೆದ ಆಸ್ಟ್ರೇಲಿಯಾ ಪ್ಯಾಟ್ ಕಮ್ಮಿನ್ಸ್ ಅವರ ದಾಖಲೆಯನ್ನು ಸರಿಗಟ್ಟಿದ್ದಾರೆ. ಪ್ಯಾಟ್ ಕಮ್ಮಿನ್ಸ್ ಮತ್ತು ಬುಮ್ರಾ 9 ಬಾರಿ 5 ವಿಕೆಟ್ ಗೊಂಚಲು ಪಡೆದಿದ್ದಾರೆ. ಕಗಿಸೋ ರಬಡಾ 7 ಬಾರಿ, ಆಸ್ಟ್ರೇಲಿಯಾದ ಜೋಶ್ ಹ್ಯಾಝುಲ್‌ವುಡ್ ಮತ್ತು ನ್ಯೂಜಿಲೆಂಡ್‌ನ ಟಿಮ್ ಸೌಥಿ ತಲಾ 6 ಬಾರಿ 5 ವಿಕೆಟ್ ಪಡೆದಿದ್ದಾರೆ.



ಬುಮ್ರಾ 5 ವಿಕೆಟ್ ಪಡೆದರೆ ಸಿರಾಜ್ ಮತ್ತು ನಿತೀಶ್ ಕುಮಾರ್ ರೆಡ್ಡಿ ತಲಾ ಒಂದೊಂದು ವಿಕೆಟ್ ಪಡೆದರು. ಮಳೆಯಿಂದಾಗಿ ಮೊದಲ ದಿನ ರದ್ದಾಗಿತ್ತು.

## 92 ವರ್ಷಗಳ ಟೆಸ್ಟ್ ಇತಿಹಾಸದಲ್ಲಿ ರಿಷಭ್ ಪಂತ್ ವಿಶೇಷ ಸಾಧನೆ..!

ಆಸ್ಟ್ರೇಲಿಯಾ ವಿರುದ್ಧದ 3ನೇ ಟೆಸ್ಟ್ ಪಂದ್ಯದಲ್ಲಿ ಉಸ್ಮಾನ್ ಖ್ವಾಜಾ (21) ಕ್ಯಾಚ್ ಹಿಡಿಯುವುದರೊಂದಿಗೆ ರಿಷಭ್ ಪಂತ್ 150ನೇ ಬಲಿ ಪಡೆದ ಸಾಧನೆ ಮಾಡಿದ್ದಾರೆ. ಈ ಮೂಲಕ ಈ ಮೈಲುಗಲ್ಲು ಮುಟ್ಟಿದ ಭಾರತದ ಮೂರನೇ ವಿಕೆಟ್ ಕೀಪರ್ ಎನಿಸಿಕೊಂಡಿದ್ದಾರೆ.

ಅಂದರೆ 92 ವರ್ಷಗಳ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ ಭಾರತದ ಪರ ಕೇವಲ ಮೂವರು ವಿಕೆಟ್ ಕೀಪರ್‌ಗಳು ಮಾತ್ರ 150+ ಗಿಂತ ಹೆಚ್ಚು ಆಟಗಾರರನ್ನು ಔಟ್ ಮಾಡಿದ್ದಾರೆ. ಇವರಲ್ಲಿ ಅಗ್ರಸ್ಥಾನದಲ್ಲಿರುವುದು ಸರ್ವಶ್ರೇಷ್ಠ ವಿಕೆಟ್ ಕೀಪರ್ ಮಹೇಂದ್ರ ಸಿಂಗ್ ಧೋನಿ.

2005 ರಿಂದ 2014 ನಡುವೆ ಟೀಮ್ ಇಂಡಿಯಾ ಪರ 90 ಟೆಸ್ಟ್ ಪಂದ್ಯಗಳಲ್ಲಿ 166 ಇನಿಂಗ್ಸ್ ಆಡಿರುವ ಮಹೇಂದ್ರ ಸಿಂಗ್ ಧೋನಿ 256 ಕ್ಯಾಚ್ ಹಾಗೂ 38 ಸ್ಟಂಪ್‌ಗಳನ್ನು ಮಾಡಿದ್ದಾರೆ. ಈ ಮೂಲಕ ಒಟ್ಟು 294 ಬ್ಯಾಟರ್‌ಗಳನ್ನು ಔಟ್ ಮಾಡಿ ದಾಖಲೆ ನಿರ್ಮಿಸಿದ್ದಾರೆ.

ಇನ್ನು ಈ ಪಟ್ಟಿಯಲ್ಲಿ ದ್ವಿತೀಯ ಸ್ಥಾನದಲ್ಲಿರುವುದು ಸೈಯ್ಯದ್ ಕಿರ್ಮಾನಿ. 1976 ರಿಂದ 1986 ರ ನಡುವೆ ಟೀಮ್ ಇಂಡಿಯಾ ಪರ 88 ಟೆಸ್ಟ್ ಪಂದ್ಯಗಳಲ್ಲಿ 151 ಇನಿಂಗ್ಸ್ ಆಡಿರುವ ಕಿರ್ಮಾನಿ 160 ಕ್ಯಾಚ್ ಹಾಗೂ 38 ಸ್ಟಂಪ್



ಗಳೊಂದಿಗೆ ಒಟ್ಟು 198 ಬಲಿ ಪಡೆದಿದ್ದಾರೆ.

ಇದೀಗ ಈ ಸಾಧಕರ ಪಟ್ಟಿಗೆ ರಿಷಭ್ ಪಂತ್ ಕೂಡ ಸೇರ್ಪಡೆಯಾಗಿದ್ದಾರೆ. ಈವರೆಗೆ 41* ಟೆಸ್ಟ್ ಪಂದ್ಯಗಳನ್ನಾಡಿರುವ ರಿಷಭ್ ಪಂತ್ 80 ಇನಿಂಗ್ಸ್‌ಗಳಲ್ಲಿ ವಿಕೆಟ್ ಕೀಪಿಂಗ್ ಮಾಡಿದ್ದು, ಈ ವೇಳೆ 137 ಕ್ಯಾಚ್ ಹಾಗೂ 15 ಸ್ಟಂಪ್‌ಗಳನ್ನು ಮಾಡಿದ್ದಾರೆ. ಈ ಮೂಲಕ ಒಟ್ಟು 151 ಬ್ಯಾಟರ್‌ಗಳನ್ನು ಔಟ್ ಮಾಡಿದ ವಿಶೇಷ ಮೈಲುಗಲ್ಲು ದಾಟಿದ್ದಾರೆ.

### ಪಾನಿಪುರಿ, ಗೋಬಿ ಮಂಚೂರಿ ಮಾರುವವರೇ ನಮಗಿಂತ ಸುಖವಾಗಿದ್ದಾರೆ

## ಸರ್ಕಾರಿ ನೌಕರಿ ಬಗ್ಗೆ ತಹಸೀಲ್ದಾರ್ ಬೇಸರ

**ಹಾಸನ:** ಪಾನಿಪುರಿ, ಗೋಬಿ ಮಂಚೂರಿ ಅಂಗಡಿ ಇಟ್ಟುಕೊಂಡಿರುವವರು ನಮಗಿಂತ ಸುಖವಾಗಿ ಜೀವನ ಮಾಡ್ತಾರೆ ಎಂದು ಸರ್ಕಾರಿ ನೌಕರಿ ಬಗ್ಗೆ ಹಾಸನದ ಹೊಳೆನರಸೀಪುರ ತಹಸೀಲ್ದಾರ್ ಬೇಸರ ವ್ಯಕ್ತಪಡಿಸಿದ್ದಾರೆ.

ತಾಲೂಕು ಸರ್ಕಾರಿ ನೌಕರರ ಸಂಘದ ನೂತನ ಸದಸ್ಯರ ಪದಗ್ರಹಣ ಸಮಾರಂಭದಲ್ಲಿ ತಹಸೀಲ್ದಾರ್ ಕೆ.ಕೆ.ಕೃಷ್ಣಮೂರ್ತಿ ತಮ್ಮ ಕೆಲಸದ ಒತ್ತಡಗಳ ಬಗ್ಗೆ ಹೇಳಿಕೊಂಡಿದ್ದಾರೆ. ನಾನು ಒಬ್ಬ ತಹಸೀಲ್ದಾರ್. ಒಂದು ತಾಲೂಕಿನ ಆಡಳಿತದ ಮುಖ್ಯಸ್ಥನಾಗಿದ್ದೇನೆ. ಈಗ ನನಗೆ ಸರ್ಕಾರಿ ನೌಕರಿನೇ ಬೇಡ ಅನ್ನುವ ಹಾಗಾಗಿದೆ. ನನ್ನ ವೈಯುಕ್ತಿಕವಾಗಿ ಹೇಳುವುದಾದರೆ ಪಾನಿಪುರಿ, ಗೋಬಿ ಮಂಚೂರಿ ಅಂಗಡಿ ಇಟ್ಟುಕೊಂಡಿರುವವರು ನಮಗಿಂತ ಸುಖವಾಗಿ ಜೀವನ ಮಾಡ್ತಾರೆ. ಅವರಿಗೆ ಅಷ್ಟು ಸಮಾಧಾನ, ನೆಮ್ಮದಿ ಇದೆ ಎಂದು ತಿಳಿಸಿದ್ದಾರೆ.

ಪಾನಿಪುರಿ ಮಾರುವವನು ಹೆಂಡ್ತಿ ಮಕ್ಕಳ ಜೊತೆ ಕಾಲ ಕಳೆಯುತ್ತಾನೆ. ಹೆಂಡ್ತಿ, ಮಕ್ಕಳನ್ನು ಊರಿಗೆ, ಎಲ್ಲಿ ಬೇಕಾದರೂ ಕರೆದುಕೊಂಡು ಹೋಗುತ್ತಾನೆ. ದುರದೃಷ್ಟವಶಾತ್ ನಮ್ಮ ಕುಟುಂಬವನ್ನು ದೇವಸ್ಥಾನಕ್ಕೆ ಕರೆದುಕೊಂಡು ಹೋಗಿ ದೇವರ ದರ್ಶನ ಮಾಡಿಸೋಕೆ ಯೋಗ್ಯತೆಯಿಲ್ಲ ಹಾಗಾಗಿದೆ. ನಮಗೆ ಬರೀ ಒತ್ತಡ, ಒತ್ತಡ, ಒತ್ತಡ, ಒತ್ತಡ ಎಂದು ಬೇಸರ ಹೊರಹಾಕಿದ್ದಾರೆ.

ಶಾಸಕಾಂಗ ಏನು ಶಾಸನಗಳನ್ನು ಮಾಡಿಕೊಳ್ಳುತ್ತಾರೆಯೋ ಅವುಗಳನ್ನು ಕಾರ್ಯರೂಪಕ್ಕೆ ತರುವುದು ನಮ್ಮ ಕೆಲಸ. ಎಲ್ಲಾ ಇಲಾಖೆಗಳ ಸವಲತ್ತುಗಳನ್ನು ಎಲ್ಲರಿಗೂ ತಲುಪಿಸಬೇಕು. ಇತ್ತೀಚೆಗೆ ಮೊಬೈಲ್ ಬಂದಿದೆ. ಅದರಲ್ಲಿ ನಮ್ಮ ಪ್ರೋಗ್ರೆಸ್ ವೀಕ್ಷಣೆ ಮಾಡ್ತಾರೆ. ಶೋಕಾಸ್ ನೋಟಿಸ್ ಕೊಡ್ತಾರೆ, ಒತ್ತಡ ಹೇರುತ್ತಾರೆ. ವರ್ಕ್ ಆಫ್ ಲೋಡ್ ಜಾರಿ ಮಾಡ್ತಾರೆ, ಖಂಡನೆ





ಮಾಡ್ತಾರೆ. ಇಲಾಖೆ ವಿಚಾರಣೆ ನಡೆಸುತ್ತಾರೆ. ವಾಟ್ಸಪ್ ಗ್ರೂಪ್ ಮಾಡ್ತಾರೆ, ಸಂಜೆಯೊಳಗೆ ನಾವು ವರದಿ ಕೊಡಬೇಕು. ಎಷ್ಟು ಚಿತ್ರಹಿಂಸೆ ಆಗ್ತಾ ಇದೆ ಎಂದು ನೊಂದು ನುಡಿದಿದ್ದಾರೆ.

ಎಂಟು ತಾಲೂಕಿಗೆ ಚಾಲೆಂಜ್ ಮಾಡ್ತೀನಿ. ಹದಿನಾಲ್ಕು ಜನ ಸಿಬ್ಬಂದಿ ಉಪಯೋಗಿಸಿಕೊಂಡು ಕೆಲಸ ಮಾಡುತ್ತಿದ್ದೀನಿ. ನಮ್ಮ ವಿಲೇಜ್ ಅಕೌಂಟೆಟ್ಸ್ ಅಷ್ಟು ಗೋಳು ಹುಯ್ಕೊತಾ ಇದ್ದೀನಿ. ಇದಕ್ಕೆ ಕಾರಣ ಅವೈಜ್ಞಾನಿಕವಾಗಿ ನಮಗೆ ಟಾರ್ಗೆಟ್ ಕೊಡ್ತಾ ಇದ್ದಾರೆ. ಕಾಲಾವಕಾಶ ಕೊಟ್ಟರೆ ಕೆಲಸ ಮಾಡ್ತೇವೆ. ಇಪ್ಪತ್ತೈದು ಕೆಲಸ ಕೊಟ್ಟು ಕಡಿಮೆ ಅವಧಿ ನೀಡಿ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ. ಇದನ್ನು ಸಮರ್ಥವಾಗಿ ಹೇಳಲು ತಾಕತ್ ಇಲ್ಲ. ಸಮರ್ಪಕವಾಗಿ ಕೆಲಸ ಕೊಡಿ ನಾವು ಮಾಡುತ್ತೇವೆ ಎಂದು ಹೇಳುವ ತಾಕತ್ ಇಲ್ಲ. ಎಷ್ಟು ನೌಕರರು ತಪ್ಪು ಮಾಡದೆ ಬಲಿಪಶು ಆಗುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಉಗುರಷ್ಟು ಮಾಡಿದ ತಪ್ಪಿಗೆ ಕೊಡಲಿಯಷ್ಟು ಶಿಕ್ಷೆ ನೀಡಿ ಮಟಾಶ್ ಮಾಡ್ತಾರೆ. ಏಕಾಏಕಿ ಎಫ್ ಐಆರ್ ಮಾಡಿ ಅವರ ಮನೆ ಹಾಳು ಮಾಡ್ತಾ ಇದ್ದಾರೆ. ಏನು ತಪ್ಪು ಮಾಡಿದ್ದಾರೆ ನೋಡಲ್ಲ. ಸರ್ಕಾರಿ ನೌಕರರು ಘಾಸಿ ಆಗ್ತಾರೆ, ಅವರ ಕುಟುಂಬ ಆಘಾತಕ್ಕೆ ಒಳಗಾಗುತ್ತಾರೆ. ಸಮರ್ಪಕವಾದ ಕಾರಣ ಇಟ್ಟುಕೊಂಡು ಇಲಾಖಾ ವಿಚಾರಣೆ ಮಾಡಲಿ ಎಂದು ಸಲಹೆ ನೀಡಿದ್ದಾರೆ.

ಮೊದಲು ಶಿಕ್ಷಕ ವೃತ್ತಿಗೆ ಭಾರಿ ಗೌರವ ಇತ್ತು. ಈಗ ಶಿಕ್ಷಕ ಮಾಡಲು ಕಷ್ಟ ಅದಕ್ಕೆ ಕಾರಣ, ಆ ಮೊಟ್ಟೆ. ನನ್ನ ಹೆಂಡ್ತಿ, ನಾದಿನಿ, ಕೋಬ್ರದರ್ ಕೂಡ ಶಿಕ್ಷಕ. ಐದು ರೂಪಾಯಿ ಸ್ಪಾರ್ಸರ್ ಮೊಟ್ಟೆಗೆ ಏಳು ರೂಪಾಯಿ ಆದರೂ ಟೀಚರ್ ಕೊಡಬೇಕು. ಮೊಟ್ಟೆ ಸೈಜ್ ನೋಡಬೇಕು, ಚಿಕ್ಕ ಬೇರೆ. ಇಷ್ಟು ಒತ್ತಡದಲ್ಲಿ ಬೇಯುತ್ತಿದ್ದೇವೆ. ಆಧುನಿಕತೆ ಜಾಸ್ತಿ ಆದಂತೆ ತಲೆನೋವು ಕೂಡ ಜಾಸ್ತಿ ಆಗ್ತಿದೆ. ನಾಳೆಗೆ ಕೆಲಸ ಮಾಡಬೇಕು ಅಂದರೆ ಆಗಲ್ಲ. ಸರ್ಕಾರಿ ನೌಕರರು ಹೈರಾಣಾಗಿ ಹೋಗಿದ್ದಾರೆ. ಬಿಪಿ, ಶುಗರ್, ಕಿಡ್ನಿ, ಲಿವರ್ ಎಲ್ಲಾ ಹೋಗಿದೆ. ಸಮರ್ಥವಾದ ರೀತಿಯಲ್ಲಿ ಹೇಳೋಣ, ಎದೆಯುಬ್ಬಿಸಿ ಮಾತನಾಡಬೇಕು. ಎಷ್ಟೇ ಮೇಲ್ಪಟ್ಟ ಅಧಿಕಾರಿಯಾದರೂ ಗೌರವಕೊಟ್ಟು ಎದೆಕೊಟ್ಟು ಮಾಡಬೇಕು. ನಮ್ಮ ಬೇಡಿಕೆಗಳನ್ನು ಗಮನಕ್ಕೆ ತರಬೇಕು ಎಂದು ಸರ್ಕಾರಿ ನೌಕರರಿಗೆ ಕರೆ ನೀಡಿದ್ದಾರೆ.

## ಜನವರಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಬದಲಾಗುವ ನಿರೀಕ್ಷೆ

**ಶಿವಮೊಗ್ಗ:** ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಜನವರಿಯಲ್ಲಿ ಬದಲಾಗುವ ನಿರೀಕ್ಷೆ ಇದೆ ಎಂದು ಮಾಜಿ ಸಚಿವ ಕುಮಾರ್ ಬಂಗಾರಪ್ಪ ಅಭಿಪ್ರಾಯಪಟ್ಟಿದ್ದಾರೆ.

ಶಿವಮೊಗ್ಗದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಷ್ಟ್ರಾಧ್ಯಕ್ಷರು ಮೋದಿ ಸರ್ಕಾರದಲ್ಲಿ ಸಚಿವರಾಗಿದ್ದರಿಂದ ರಾಷ್ಟ್ರಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡುವ ಸಾಧ್ಯತೆಯಿದೆ. ಈ ಹಿನ್ನೆಲೆಯಲ್ಲಿ ಬಿಜೆಪಿ ರಾಷ್ಟ್ರಾಧ್ಯಕ್ಷರು ಮತ್ತು ರಾಜ್ಯಾಧ್ಯಕ್ಷರ ಸ್ಥಾನ ಖಾಲಿಯಾಗುವ ನಿರೀಕ್ಷೆ ಇದೆ. ನಾನು ಸಹ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಆಕಾಂಕ್ಷಿ ಎಂದು ಹೇಳಿದರು.

ಬಿಜೆಪಿಯಲ್ಲಿ ನಡೆಯುತ್ತಿರುವ ಭಿನ್ನಮತ ವಿಚಾರವಾಗಿ ಪ್ರತಿಕ್ರಿಯಿಸಿದ್ದು, ರಾಜ್ಯ



ಬಿಜೆಪಿಯ ಭಿನ್ನಮತದ ಬಗ್ಗೆ ಕೇಂದ್ರದ ವರಿಷ್ಠರು ಗಮನಹರಿಸಿದ್ದಾರೆ. ಶೀಘ್ರವಾಗಿ ತೀಕ್ಷ್ಣವಾದ ನಿರ್ಧಾರ ಕೈಗೊಳ್ಳುತ್ತಾರೆ ಎಂಬ ವಿಶ್ವಾಸವಿದೆ. ಕಳೆದ 30 ವರ್ಷದಿಂದ ರಾಜಕಾರಣದಲ್ಲಿ ಇದ್ದೇನೆ. ಕಾಂಗ್ರೆಸ್ ಅಹಿಂದ ಸಂಘಟನೆಯಾಗಿದ್ದು, ಅದಕ್ಕೆ ವಿರುದ್ಧವಾಗಿ ಹಾಗೂ ಬಿಜೆಪಿ ಒಬಿಸಿ ಸಂಘಟನೆಗೆ ಹೆಚ್ಚು ಒತ್ತು ನೀಡುವ ಸಲುವಾಗಿ ಒಬಿಸಿ ನಾಯಕರಿಗೆ ಹೆಚ್ಚು ಒತ್ತು ನೀಡಬೇಕಾಗಿದೆ. ಒಬಿಸಿ ಸಮುದಾಯಕ್ಕೆ ರಾಜ್ಯಾಧ್ಯಕ್ಷ ಸ್ಥಾನ ನೀಡುವ ವಿಚಾರ ಬಂದರೆ ನನ್ನನ್ನು ಪರಿಗಣಿಸಿ ಎಂದಿದ್ದೇನೆ. ಜನವರಿಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬದಲಾಗಬಹುದು ಎಂಬ ನಿರೀಕ್ಷೆ ಇದೆ. ಏನು ಆಗಲಿದೆ ಕಾದು ನೋಡಬೇಕಿದೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com